ಸಂಪುಟ: 04 ಸಂಚಿಕೆ: 239 ಪುಟಗಳು: 08 ಮಂಗಳವಾರ 12 ನವೆಂಬರ್ 2024 www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

**ಮುಂಜಾನೆ ಮಾತು**

ಜೀವನ ಎಂಬುದು ಕಠಿಣ ಸತ್ಯ, ಅದನ್ನು ಎದುರಿಸಿ. ನಿಮ್ಮ ಮಾರ್ಗದಲ್ಲಿ ಮುಂದುವರೆಯಿರಿ. ಅದು ಅಭೇದ್ಯವಾಗಿರಬಹುದು. ಆದರೆ ಆತ್ಮ ಅದಕ್ಕಿಂತ ಬಲಯುತವಾದುದು.

# ಉದಯ ವಾಹಿನಿ

UV ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ಮೋದಿ ಹೆಸರು ಹೇಳಿ ಎಚ್‌ಡಿಕೆ 1 ಸಾವಿರ ಕೋಟಿ ಹಣ ಸಂಗ್ರಹ

• ಉದಯವಾಹಿನಿ, ಬೆಂಗಳೂರು

ಮಹಾರಾಷ್ಟ್ರ, ಜಾರ್ಖಂಡ್ ವಿಧಾನಸಭೆ ಚುನಾವಣೆ ಹಾಗೂ ಕರ್ನಾಟಕದ ಉಪ ಚುನಾವಣೆಗಳಿಗೆ ಮೋದಿ ಅವರ ಹೆಸರಿನಲ್ಲಿ ಉಕ್ಕು ಕಂಪನಿಗಳಿಂದ 1 ಸಾವಿರ ಕೋಟಿ ರೂಪಾಯಿಗಳನ್ನು ಕೇಂದ್ರ ಸಚಿವ ಎಚ್. ಡಿ. ಕುಮಾರಸ್ವಾಮಿ ಸಂಗ್ರಹಿಸಿದ್ದಾರೆ ಎಂದು ಕೃಷಿ ಸಚಿವ ಎನ್.ಚಲುವರಾಯಸ್ವಾಮಿ ಹೇಳಿದ್ದಾರೆ. ಮಹಾರಾಷ್ಟ್ರ, ಜಾರ್ಖಂಡ್ ವಿಧಾನಸಭೆ ಚುನಾವಣೆಗಳನ್ನು ಶತಾಯಗತಾಯ ಗೆಲ್ಲಬೇಕು ಎಂದು ಬಿಜೆಪಿ ಮಿತ್ರ ಪಕ್ಷಗಳು ವಾಮ ಮಾರ್ಗ ಹಿಡಿದಿವೆ. ಅಲ್ಲಿ ಹಣದ ಹೊಳೆಯನ್ನೇ ಹರಿಸಲು ಎಲ್ಲಾ ತಯಾರಿ ನಡೆಸಿಕೊಂಡಿದೆ. ಮಾತ್ರವಲ್ಲ ಕರ್ನಾಟಕದ ಉಪ ಚುನಾವಣೆಯಲ್ಲಿ ಮುಖ್ಯವಾಗಿ ಚೆನ್ನಪಟ್ಟಣದಲ್ಲಿ ಸೋಲಿನ ಭೀತಿ ಹೊಂದಿರುವ ಬಿಜೆಪಿ ಇಲ್ಲಿಯೂ ದೊಡ್ಡ ಪ್ರಮಾಣದಲ್ಲಿ ಹಣ ಸುರಿಯಲು ಮುಂದಾಗಿದೆ ಎಂದು ಚಲುವರಾಯಸ್ವಾಮಿ ತಿಳಿಸಿದರು. ಚುನಾವಣೆಗಳ ಜವಾಬ್ದಾರಿ ಹೊತ್ತಿರುವ ಕೇಂದ್ರ ಉಕ್ಕು ಮತ್ತು ಬೃಹತ್ ಕೈಗಾರಿಕೆಗಳ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರು ಭಾರತದ ವಿವಿಧೆಡೆ ಮತ್ತು ರಾಜ್ಯದ ಉಕ್ಕು ಕಂಪನಿಗಳಿಂದ 1 ಸಾವಿರ ಕೋಟಿ ರೂ.ಗೂ ಅಧಿಕ ಹಣವನ್ನು ಸಂಗ್ರಹ ಮಾಡಿದ್ದಾರೆ ಎಂದು ಕೃಷಿ ಸಚಿವ ಚೆಲುವರಾಯಸ್ವಾಮಿ ನೇರವಾಗಿ ಆರೋಪ ಮಾಡಿದ್ದಾರೆ.

## ಏಜೆಂಟ್ ರೀತಿ ವರ್ತಿಸುವ ನ್ಯಾ. ಡಿ.ಕುನ್ಹಾ: ಪ್ರಹ್ಲಾದ್ ಜೋಶಿ

• ಉದಯವಾಹಿನಿ, ಹುಬ್ಬಳ್ಳಿ

ಕರ್ನಾಟಕದಲ್ಲಿ ಬಿಜೆಪಿ ಅವಧಿಯಲ್ಲಿ ನಡೆದಿದೆ ಎನ್ನಲಾದ ಕೋವಿಡ್ ಪಿಪಿಇ ಕಿಟ್ ಖರೀದಿಯಲ್ಲಿನ ಹಗರಣ ಕುರಿತು ವರದಿ ಸಲ್ಲಿಸಿದ ನ್ಯಾಯಮೂರ್ತಿ ಜಾನ್ ಮೈಕೆಲ್ ಕುನ್ಹಾ ಅವರು ಏಜೆಂಟ್ ರೀತಿ ವರ್ತಿಸುತ್ತಿದ್ದಾರೆ. ನೀವು ಏಜೆಂಟ್ ಅಲ್ಲ ಎಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಅವರು ವಾಗ್ದಾಳಿ ನಡೆಸಿದ್ದಾರೆ. ಶಿಗ್ಗಾವಿ ಉಪಚುನಾವಣೆ ಸಂಬಂಧ ಬಿಜೆಪಿ ಅಭ್ಯರ್ಥಿ ಭರತ್ ಬೊಮ್ಮಾಯಿ ಆಯೋಜಿಸಿದ್ದ ಸಮಾ ವೇಶದಲ್ಲಿ ಅವರು ಮಾತನಾಡಿದರು. ಪಿಪಿಇ ಕಿಟ್ ತನಿಖೆಯ ನ್ಯಾಯಮೂರ್ತಿ ಮೈಕೆಲ್ ಡಿ'ಕುನ್ಹಾ ಅವರು ಏಜೆಂಟ್ ಆಗಿ ಕಾರ್ಯ ನಿರ್ವಹಿಸುತ್ತಿದ್ದಾರೆ ಎಂದು ಅವರು ಆಪಾದಿಸಿದರು. ಕೋವಿಡ್ ಕಾಲದಲ್ಲಿ 2020ರಲ್ಲಿ ಅಧಿಕಾರದಲ್ಲಿದ್ದ ಬಿಜೆಪಿಯು ನಡೆದಿದೆ ಎನ್ನಲಾದ ಪಿಪಿಇ ಕಿಟ್‌ಗಳ ಖರೀದಿಯ ಅಕ್ರಮ ತನಿಖೆಯನ್ನು ಸಚಿವರು ಟೀಕಿಸಿದ್ದಾರೆ.

## ನೆಂಟರಂತೆ ಬಂದವರು, ನೆಂಟರಂತೆ ಹೋಗಲಿ, ನಾವು ಸೇವೆ ಮಾಡುತ್ತೇವೆ

• ಉದಯವಾಹಿನಿ, ರಾಮನಗರ

ಈ ಕ್ಷೇತ್ರದಲ್ಲಿ ನೆಂಟರಂತೆ ಬಂದು ಎಲ್ಲಾ ಅಧಿಕಾರ ಅನುಭವಿಸಿ, ಕ್ಷೇತ್ರಕ್ಕೆ ಯಾವುದೇ ಕೊಡುಗೆ ನೀಡದವರು ನೆಂಟರಂತೆ ಹೋಗಲಿ. ನಿಮ್ಮ ಮನೆ ಮಕ್ಕಳಂತೆ ನಾನು, ಸಿ.ಪಿ ಯೋಗೇಶ್ವರ್, ಡಿ.ಕೆ. ಶಿವಕುಮಾರ್ ಅವರು ಸಿದ್ದರಾಮಯ್ಯ ಅವರ ಸರ್ಕಾರದ ಬೆಂಬಲದೊಂದಿಗೆ ನಿಮ್ಮ ಸೇವೆ ಮಾಡುತ್ತೇವೆ ಎಂದು ಮಾಜಿ ಸಂಸದ ಡಿ.ಕೆ.ಸುರೇಶ್ ತಿಳಿಸಿದರು. ಚನ್ನಪಟ್ಟಣ ಉಪಚುನಾವಣೆ ಹಿನ್ನೆಲೆಯಲ್ಲಿ ದೊಡ್ಡಮಳೂರಿನಲ್ಲಿ ಬೃಹತ್ ಸಾರ್ವಜನಿಕ ಸಭೆಯಲ್ಲಿ ಡಿ.ಕೆ. ಸುರೇಶ್ ಅವರು ಮಾತನಾಡಿ ಕಾಂಗ್ರೆಸ್ ಅಭ್ಯರ್ಥಿ ಸಿ.ಪಿ. ಯೋಗೇಶ್ವರ್ ಅವರ ಪರವಾಗಿ ಮತಯಾಚಿಸಿದರು. ಈ ಸಂದರ್ಭದಲ್ಲಿ ಅವರು ಹೇಳಿದ್ದಿಷ್ಟು: ಕುಮಾರಸ್ವಾಮಿ ಅವರು ನಿಮ್ಮ ಆಶೀರ್ವಾದದಿಂದ ಎರಡನೇ ಬಾರಿಗೆ ವಿಧಾನಸೌಧಕ್ಕೆ ಪ್ರವೇಶ ಮಾಡಿದಾಗ ಕುಮಾರಸ್ವಾಮಿ ಅವರು ಏನು ಹೇಳಿದರು? ಶಾಸಕರಾಗಿ ಆಯ್ಕೆಯಾದ ನಂತರ ಐದು ವರ್ಷಗಳ ಕಾಲ ಜನರ ಮಧ್ಯೆ ಇರಬಾರದು, ನಿಮಗಾಗಿ ಕೆಲಸ ಮಾಡಬಾರದು. ಚುನಾವಣೆ ಸಮಯದಲ್ಲಿ ತಂತ್ರಗಾರಿಕೆ ಮಾಡಿ ಕಣ್ಣೀರು ಹಾಕಿ ಮತ ಕೇಳಿದರೆ ಸಾಕು ಎಂದು ಹೇಳಿದ್ದಾರೆ.

## ಸಿದ್ದರಾಮಯ್ಯ ವಿರುದ್ಧ ಆರೋಪ ಸಾಬೀತಾಗಿದ್ದು, ಶಿಕ್ಷೆ ಫಿಕ್ಸ್

• ಉದಯವಾಹಿನಿ, ಹಾವೇರಿ

ಮುಡಾ ಹಗರಣಕ್ಕೆ ಸಂಬಂಧಪಟ್ಟಂತೆ ಇತ್ತೀಚೆಗೆ ಸಿಎಂ ಸಿದ್ದರಾಮಯ್ಯ ಅವರು ಮೈಸೂರಿನಲ್ಲಿರುವ ಲೋಕಾಯುಕ್ತ ಕಚೇರಿಗೆ ತೆರಳಿ ವಿಚಾರಣೆಗೆ ಹಾಜರಾಗಿದ್ದರು. ಇದೀಗ ಈ ಒಂದು ಪ್ರಕರಣಕ್ಕೆ ಸಂಬಂಧಪಟ್ಟಂತೆ ಬಿಜೆಪಿ ಸಂಸದ ಗೋವಿಂದ ಕಾರಜೋಳ್ ಸಿಎಂ ಸಿದ್ದರಾಮಯ್ಯ ವಿರುದ್ಧ ಆರೋಪ ಸಾಬೀತಾಗಿದೆ. ಶಿಕ್ಷೆ ಆಗೋದು ಫಿಕ್ಸ್ ಎಂದು ಭವಿಷ್ಯ ನುಡಿದರು.ಹಾವೇರಿ ಜಿಲ್ಲೆಯ ಶಿಗ್ಗಾವಿಯಲ್ಲಿ ಮಾತನಾಡಿದ ಅವರು, ಉಪಚುನಾವಣೆಯ ಬಳಿಕ ಸಿದ್ದರಾಮಯ್ಯ ಸರ್ಕಾರ ಉಳಿಯಲ್ಲ ಡಿಸೆಂಬರ್ 1ನೇ ತಾರೀಖಿನೊಳಗೆ ಸರ್ಕಾರ ಪತನ ಆಗಲಿದೆ ಎಂದು ಶಿಗ್ಗಾವಿಯಲ್ಲಿ ಸಂಸದ ಗೋವಿಂದ ಕಾರಜೋಳ ಭವಿಷ್ಯ ನುಡಿದರು. ಅವರ ಶಾಸಕರೇ ಸರ್ಕಾರ ಕೆಡವಲು ಸಜ್ಜಾಗಿದ್ದಾರೆ ಎಂದರು. ಮುಡಾ ಹಗರಣದಲ್ಲಿ ಸಿದ್ದರಾಮಯ್ಯ ವಿರುದ್ಧ ಆರೋಪ ಸಾಬೀತಾಗಿದೆ. ಶಿಕ್ಷೆ ಪ್ರಮಾಣವಷ್ಟೇ ನಿಗದಿಯಾಗಿಲ್ಲ ಶಿಕ್ಷೆ ವಿಳಂಬವಾಗಿರಬಹುದು ಆದರೆ ಶಿಕ್ಷೆ ಆಗೋದು ಫಿಕ್ಸ್ ಸಿದ್ದರಾಮಯ್ಯ ಸೇರಿ ಕಾಂಗ್ರೆಸ್ ನಾಯಕರು ಎಲ್ಲಾರೂ ಮೋಸಗಾರರು ಎಂದು ಕಾಂಗ್ರೆಸ್ ವಿರುದ್ಧ ಗೋವಿಂದ ಕಾರಜೋಳ ಹರಿ ಹಾಯ್ದರು.






**ರೈತರಿಗೆ ವಕ್ಫ್ ನೋಟಿಸ್ ವಿವಾದ**

# ವಕ್ಫ್ ಆಸ್ತಿ ಕಬಳಿಕೆಯಲ್ಲಿ ಘಟಾನುಘಟಿ ನಾಯಕರು!

### ಅನ್ವರ್ ಮಾಣಿಪ್ಪಾಡಿ ವರದಿಯಲ್ಲಿದೆ ಸ್ಫೋಟಕ ಅಂಶಗಳು

### ಗದಗ ಜಿಲ್ಲೆಯ ಸೋಮೇಶ್ವರ ದೇವಸ್ಥಾನಕ್ಕೆ ವಕ್ಫ್ ವತಿಯಿಂದ ನೋಟಿಸ್



• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ರೈತರಿಗೆ ವಕ್ಫ್ ಬೋರ್ಡ್ ನೀಡಿರುವ ನೋಟಿಸ್ ಸಾಕಷ್ಟು ಸದ್ದು ಮಾಡುತ್ತಿದೆ. ವಕ್ಫ್ ಆಸ್ತಿಯನ್ನು ಕಬಳಿಕೆ ಮಾಡಲಾಗಿದೆ ಎಂಬ ಆರೋಪ ಹಿನ್ನೆಲೆಯಲ್ಲಿ ರೈತರಿಗೆ ನೋಟಿಸ್ ನೀಡಲಾಗಿದೆ. ಆದರೆ ರಾಜ್ಯದಲ್ಲಿ ಘಟಾನುಘಟಿ ರಾಜಕೀಯ ನಾಯಕರು, ಮುಸ್ಲಿಂ ಪ್ರಭಾವಿ ಮುಖಂಡರು ಹತ್ತಾರು ಎಕರೆ ಜಮೀನನ್ನು ಕಬಳಿಕೆ ಮಾಡಿರುವ ಆರೋಪಗಳು ಇವೆ. ಈ ಸಂಬಂಧಿಸಿದಂತೆ ಕರ್ನಾಟಕ ರಾಜ್ಯ ಅಲ್ಪಸಂಖ್ಯಾತ ಆಯೋಗದ ಮಾಜಿ ಅಧ್ಯಕ್ಷ ಅನ್ವರ್ ಮಾಣಿಪ್ಪಾಡಿ ವರದಿ ಹಲವು ಅಂಶಗಳನ್ನು ಬಹಿರಂಗಪಡಿಸುತ್ತದೆ.

23-3-2012 ಈ ವರದಿಯನ್ನು ಸಿದ್ಧಪಡಿಸಲಾಗಿತ್ತು . ಈ ವರದಿಯನ್ನು ಬಳಿಕ ವಿಧಾನಸಭೆಯಲ್ಲೂ ಮಂಡಿಸಲಾಗಿದೆ. ವಿಧಾನಸಭೆಯಲ್ಲಿ ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ವರದಿ ಬಗ್ಗೆ ಚರ್ಚೆಗೆ ಅವಕಾಶ ಕೋರಿದ್ದರು. ಆದರೆ ಇದಕ್ಕೆ ಅವಕಾಶ ಸಿಕ್ಕಿರಲಿಲ್ಲ. ಆದರೆ ಇದೀಗ ಮತ್ತೆ ಅನ್ವರ್ ಮಾಣಿಪ್ಪಾಡಿ ವರದಿ ಚರ್ಚೆಗಳು ಮುನ್ನಲೆಗೆ ಬರುತ್ತಿವೆ.

**1** ರಾಜ್ಯದಲ್ಲಿ ಘಟಾನುಘಟಿ ರಾಜಕೀಯ ನಾಯಕರು, ಮುಸ್ಲಿಂ ಪ್ರಭಾವಿ ಮುಖಂಡರು ಹತ್ತಾರು ಎಕರೆ ಜಮೀನನ್ನು ಕಬಳಿಕೆ ಮಾಡಿರುವ ಆರೋಪಗಳು ಇವೆ

**2** ಬೆಂಗಳೂರಿನ ಸ್ಯಾಂಕಿ ರಸ್ತೆ ಅಲಿ ರೈಸಾ ವಕ್ಫ್ ಸ್ವಾಮ್ಯದ ಜಮೀನನ್ನು ವಿಂಡ್ಸನ್ ಮ್ಯಾನರ್ ಹೋಟೆಲ್ ಗೆ ವಕ್ಫ್ ಜಮೀನ್ನು ಲೀಜ್ ಕೊಡಲಾಗಿದೆ.

**3** ಕೊಪ್ಪಳ ಮೈಸೂರು, ಬೆಂಗಳೂರು, ಬೀದರ್, ದಾವಣಗೆರೆ, ವಿಜಯಪುರ, ಬಳ್ಳಾರಿ, ರಾಮನಗರ,ಕೋಲಾರ ಜಿಲ್ಲೆಗಳಲ್ಲಿ ಸಾವಿರಾರು ಎಕರೆ ವಕ್ಫ್ ಆಸ್ತಿ ಕಬಳಿಕೆ ಆಗಿದೆ.

**ವಿವಿಧ ಜಿಲ್ಲೆಗಳಲ್ಲಿ ಕೋಟ್ಯಂತರ ಮೌಲ್ಯದ ಆಸ್ತಿ ಕಬಳಿಕೆ**

ಬೀದರ್ ಜಿಲ್ಲೆಯಲ್ಲಿ ಅತಿ ಹೆಚ್ಚು ವಕ್ಫ್ ಆಸ್ತಿ ಕಬಳಿಕೆ ಮಾಡಲಾಗಿದೆ. ಬೀದರ್ ಜಿಲ್ಲೆಯಲ್ಲಿ 13 ವಕ್ಫ್ ಆಸ್ತಿ ಒತ್ತುವರಿಯಾಗಿದೆ. ಇದರಲ್ಲಿ 1083.28 ಎಕರೆ ಭೂಮಿಯಾಗಿದೆ. ಮಾಜಿ ಸಂಸದ ನರಸಿಂಗ ರಾವ್ ಸೂರ್ಯವಂಶಿ ಅವರು ವಕ್ಫ್ ಆಸ್ತಿಯನ್ನು ಕಬಳಿಕೆ ಮಾಡಿಕೊಂಡಿದ್ದಾರೆ ಎಂದು ಮಾಣಿಪ್ಪಾಡಿ ವರದಿಯಲ್ಲಿ ಉಲ್ಲೇಖ ಮಾಡಲಾಗಿದೆ.

ಬೀದರ್‌ನಲ್ಲಿ ಕ್ರಮ ಸಂಖ್ಯೆ 337 ರಲ್ಲಿ ಗೆಜೆಟ್ ಅಧಿಸೂಚಿತ ವಕ್ಫ್ ಆಸ್ತಿ 8.16 ಎಕರೆ ಕಾನೂನು ಬಾಹಿರವಾಗಿ ಮಾರಾಟ ಮಾಡಲಾಗಿದೆ. ಈ ಪೈಕಿ 1.120 ಎಕರೆ ಮಾಜಿ ಲೋಕಸಭೆ ಸದಸ್ಯ ಸೂರ್ಯವಂಶಿ ಅವರ ಪತ್ನಿಯ ಹೆಸರಿನಲ್ಲಿದೆ.

ಇನ್ನು ಕಲಬುರಗಿಯಲ್ಲಿ ಮಾಜಿ ಸಚಿವ ಕಮರುಲ್ ಇಸ್ಲಾಂ ಅವರು ವಕ್ಫ್ ಆಸ್ತಿಯನ್ನು ಕಬಳಿಕೆ ಮಾಡಿಕೊಂಡಿದ್ದಾರೆ ಎಂಬ ಆರೋಪ ಇದೆ. ಇದು ಖ್ವಾಜಾ ಬಂದೇ ನವಾಜ್ ದರ್ಗಾದ ಆಸ್ತಿಯಾಗಿದೆ. ಕಲಬುರಗಿಯ ಬಡೇಪುರ ಸರ್ವೇ ನಂಬರ್ 12 ರಲ್ಲಿ 8.34 ಎಕರೆ ಜಮೀನು ಕಬಳಿಕೆ ಮಾಡಲಾಗಿದೆ ಎಂಬ ಆರೋಪ ಇದೆ. ಇದನ್ನು ನಿವೇಶನ ಮಾಡಿ ಮಾರಾಟ ಮಾಡಲಾಗಿದೆ.

ಬೀದರ್ ಜಿಲ್ಲೆಯಲ್ಲಿ ಸರ್ವೇ ನಂ 73 ರಲ್ಲಿ 180 ಎಕರೆ ಜಮೀನು ಕಬಳಿಕೆ ನಸೀರ್ ಅಹ್ಮದ್ ಹಾಗೂ ಫಿರೋಝ್ ಖಾನ್ ವಿರುದ್ಧ ಆರೋಪ ಇದೆ. ಸರ್ವೇ ನಂಬರ್ 12 ಬಡೇಪುರ ವಕ್ಫ್ ಆಸ್ತಿ 8.34 ಎಕರೆ ಕಬಳಿಕೆ ಆಗಿದೆ. ಈ ಸಂಬಂಧಿಸಿದಂತೆ ಮಾಜಿ ಸಚಿವ ಕಮರುಲ್ ಇಸ್ಲಾಂ ವಿರುದ್ಧ ಆರೋಪ ಇದೆ.

**ಖಾಸಗಿ ಹೋಟೆಲ್‌ಗೆ ನಿಯಮ ಬಾಹಿರ ಲೀಜ್!**

ಬೆಂಗಳೂರಿನ ಸ್ಯಾಂಕಿ ರಸ್ತೆ ಅಲಿ ರೈಸಾ ವಕ್ಫ್ ಸ್ವಾಮ್ಯದ ಜಮೀನನ್ನು ವಿಂಡ್ಸನ್ ಮ್ಯಾನರ್ ಹೋಟೆಲ್ ಗೆ ವಕ್ಫ್ ಜಮೀನ್ನು ಲೀಜ್ ಕೊಡಲಾಗಿದೆ. 1,65,752 ಚದರ ಅಡಿ ಜಮೀನು ಲೀಜ್‌ಗೆ ಕೊಡಲಾಗಿದೆ. ಈ ಸಂಬಂಧ ಮಾಜಿ ಸಚಿವ ರೆಹಮಾನ್ ಖಾನ್ ವಿರುದ್ಧ ಆರೋಪ ಇದೆ. ವಕ್ಫ್ ನಿಯಮಾವಳಿಗಳ ವಿರುದ್ಧವಾಗಿ ಲೀಜ್ ನೀಡಲಾಗಿದೆ. ಹಂದಿ ಮಾಂಸ ಹಾಗೂ ಮದ್ಯ ಮಾರಾಟ ಮಾಡಲು ಅವಕಾಶ ಇಲ್ಲ. ಆದರೆ ವಿನ್ಸ್ಡಲ್ ಮ್ಯಾನರ್ ಹೋಟೆಲ್‌ನಲ್ಲಿ ಅವಕಾಶ ಇದೆ ಎಂದು ಉಲ್ಲೇಖ ಮಾಡಲಾಗಿದೆ.

ಸಾದರ್ ಪತ್ರಪ್ಪ ಹಜರತ್ ನವಾಬ್ ಇಬ್ರಾಹಿಂ ಅಲಿ ಷಾ ದರ್ಗಾಗೆ ಸೇರಿದ್ದ ಜಮೀನು ಕಬಳಿಕೆ ಆಗಿದೆ. ಈ ಸಂಬಂಧಿಸಿದಂತೆ ಮಾಜಿ ಕೇಂದ್ರ ಸಚಿವ ಸಿಎಂ ಇಬ್ರಾಹಿಂ ವಿರುದ್ಧ ಆರೋಪ ಇದೆ. ನಂಬರ್ 22-23 ಪಿಳ್ಳ್ಯ ಯಾರ್ ಕೊಯಿಲ್ ಸ್ಟ್ರೀಟ್‌ನಲ್ಲಿ 7,329 ಚದರ ಅಡಿ ಭೂಮ ಕಬಳಕೆ ಆಗಿದೆ. ಈ ಸಂಬಂಧಿಸಿದಂತೆ ಮಾಜಿ ಸಚಿವ ರೋಷನ್ ಬೇಗ್ ವಿರುದ್ಧ ಆರೋಪ ಇದೆ. ಕೊಪ್ಪಳ ಜಿಲ್ಲೆಯಲ್ಲಿ ಸರ್ವೇ ನಂಬರ್ 10/1 10/2, 10/3 ಬೇರೂನಿ ಅಬಾದಿ ಮಸೀದಿ ಗಂಗಾವತಿಗೆ ಸೇರಿದ 2.9ಎರೆ ಜಮೀನು ಕಬಳಕೆ ಆಗಿದೆ. ಮಾಜಿ ಸಚಿವ ಇಕ್ಬಾಲ್ ಅನ್ಸಾರಿ ವಿರುದ್ದ ಆರೋಪ ಇದೆ.ಹೀಗೆ ಕಾಂಗ್ರೆಸ್ ನಾಯಕರಾದ ರೆಹಮಾನ್ ಖಾನ್, ಸಿಎಂ ಇಬ್ರಾಹೀಂ, ರೋಷನ್ ಬೇಗ್, ಎನ್ ಎ ಹ್ಯಾರಿಸ್ ವಿರುದ್ಧ ವಕ್ಫ್ ಭೂಮಿ ಕಬಳಿಕೆ ಆರೋಪ ಕೇಳಿಬಂದಿದೆ.



**ಸೋಮೇಶ್ವರ ಐತಿಹಾಸಿಕ ದೇವಸ್ಥಾನ ವಕ್ಫ್‌ಗೆ ಪರಭಾರೆ ಆರೋಪ**

ಗದಗ: ರಾಜ್ಯದ ಹಲವಾರು ಜಿಲ್ಲೆಗಳಲ್ಲಿ ಭುಗಿಲೆದ್ದಿರುವ ವಕ್ಫ್ ವಿವಾದ, ಗದಗಕ್ಕೂ ಕಾಲಿಟ್ಟಿದೆ. ಈ ಹಿಂದೆ ಜಿಲ್ಲೆಯಲ್ಲಿ, ಕಾಣಿಸಿಕೊಂಡು ಮರೆಯಾಗಿದ್ದ ವಕ್ಫ್ ಬೋರ್ಡ್ ಭೂ ವಿವಾದ ಮತ್ತೆ ಮುನ್ನೆಲೆಗೆ ಬಂದಿದೆ. ವಕ್ಫ್ ಬೋರ್ಡ್ ವಿರುದ್ಧ ತಾಲ್ಲೂಕಿನ ಕೋಟುಮಚಗಿ ಗ್ರಾಮದಲ್ಲಿ ಬೃಹತ್ ಪ್ರತಿಭಟನೆ ಮಾಡಲಾಯಿತು. ವಿಶ್ವ ಹಿಂದೂ ಪರಿಷತ್, ಭಜರಂಗದಳ ಹಾಗೂ ರೈತರು ಸೇರಿಕೊಂಡು ಗದಗ ಬಾಗಲಕೋಟೆ ರಾಜ್ಯ ಹೆದ್ದಾರಿ ತಡೆದು, ಟಾಯರ್ ಗೆ ಬೆಂಕಿ ಹಚ್ಚಿ ಪ್ರತಿಭಟನೆ ಮಾಡಿದರು. 6ನೇ ವಿಕ್ರಮಾದಿತ್ಯನ ಕಾಲದ ಐತಿಹಾಸಿಕ ಸೋಮೇಶ್ವರ ದೇವಸ್ಥಾನದ ಜಮೀನು ವಕ್ಫ್ ಸೇರಿಸುವ ಹುನ್ನಾರ ನಡೆಸಿದ್ದಾರೆ. ಇದು ಸಾಂಸ್ಕತ ವಿಶ್ವವಿದ್ಯಾಲಯ ಕೇಂದ್ರವಾಗಿತ್ತು. ಕವಿ ಚಾಮರಸಾ ಬರೆದ ಪ್ರಭುಲಿಂಗಲೀಲೆ ಪೌರಾಣಿಕ ಪುರಾಣ ಇದೇ ದೇವಸ್ಥಾನದಲ್ಲಿ ಬರೆದಿರುವ ಇತಿಹಾಸವಿದೆ. ಅಂತಹ ಐತಿಹಾಸಿಕ ದೇವಸ್ಥಾನದ ಭೂಮಿಯನ್ನು ವಕ್ಫ್ ಪರಭಾರೆ ಮಾಡಲು ಹೊರಟಿರುವುದು ಖಂಡನೀಯ. ಗೆಜೆಟ್ ನಲ್ಲಿ ಸೋಮೇಶ್ವರ ದೇವಸ್ಥಾನಕ್ಕೆ ಸೇರಿದ ಸರ್ವೆ ನಂಬರ್ 562 ರ 12 ಎಕರೆ 22 ಗುಂಟೆ ಜಮೀನು ವಕ್ಫ್ ಅಂತಾ ದಾಖಲಾಗಿದೆ. ಈ ಎಲ್ಲಾದರಿಂದ ಆಕ್ರೋಶಕ್ಕೆ ಒಳಗಾದ ಜನರು, ಗದಗ ಪಟ್ಟಣದಲ್ಲಿ ನ.11ರಂದು ರಾಜ್ಯ ಹೆದ್ದಾರಿ ತಡೆದು ವಕ್ಫ್ ಬೋರ್ಡ್, ಸಚಿವ ಜಮೀರ್ ಅಹ್ಮದ್ ಖಾನ್ ಹಾಗೂ ರಾಜ್ಯ ಸರ್ಕಾರದ ವಿರುದ್ಧ ಧಿಕ್ಕಾರ ಕೂಗಿದರು. ನಡು ರಸ್ತೆಯಲ್ಲೇ ಟೈರ್ ಗೆ ಬೆಂಕಿ ಹಚ್ಚಿ ಆಕ್ರೋಶ ವ್ಯಕ್ತಪಡಿಸಿದರು.



ರೈತರ ಜಮೀನುಗಳನ್ನು ವಾಪಸ್ ಕೊಡಬೇಕು. ಸಿಎಂ ಸಿದ್ದರಾಮಯ್ಯರಿಗೆ ಇದು ಕೊನೆ ಡೆಡ್‌ಲೈನ್. ನ.15 ರಂದು ಕಾವೇರಿಗೆ ರೈತ ಮುಖಂಡರು ಬರುತ್ತೇವೆ. ಅಂದು ಅಧಿಕಾರಿಗಳು ರೈತರ ಜಮೀನುಗಳನ್ನ ವಾಪಸ್ ಕೊಟ್ರೆ ಸರಿ. ಇಲ್ಲವಾದ್ರೆ ವಕ್ಫ ಸೇರಿದ ಜಮೀನುಗಳನ್ನ ನಾವೇ ಸ್ವಾಧೀನ ಪಡೆದುಕೊಳ್ಳುತ್ತೇವೆ

-ಕೋಡಿಹಳ್ಳಿ, ಚಂದ್ರಶೇಖರ್, ರೈತ ಮುಖಂಡ

ಸಿದ್ದರಾಮಯ್ಯ ಸಿಎಂ ಆಗಿ ಒಂದೂವರೆ ವರ್ಷವಾಯ್ತು. ನಾವು ಸಿದ್ದರಾಮಯ್ಯ ಮೇಲೆ ನಿರೀಕ್ಷೆ ಇಟ್ಟಿಷ್ಟು ಆಗಲಿಲ್ಲ. ಮುಸ್ಲಿಮರಿಗೆ ರಿಸರ್ವೇಶನ್ ಆಗಿಲ್ಲ, ಹಿಜಾಬ್ ಬಗ್ಗೆ ಸುಪ್ರೀಂಕೋರ್ಟ್ ಆದೇಶವಾಗಿದ್ರು ನೋಟಿಫಿಕೇಶನ್ ಮಾಡಿಲ್ಲ. ಸಿದ್ದರಾಮಯ್ಯ ಕೆಲವೊಂದು ನಿರ್ಧಾರ ತೆಗೆದುಕೊಳ್ಳುವಲ್ಲಿ ಹಿಂದೆಮುಂದೆ ನೋಡುತ್ತಿದ್ದಾರೆ. ಅವರಿಗೆ ಏನು ಒತ್ತಡವಿದೆ ಅಂತ ನನಗೆ ಗೊತ್ತಿಲ್ಲ

-ಸಿಎಂ ಇಬ್ರಾಹಿಂ, ರಾಜಕೀಯ ಮುಖಂಡ



**ಹ್ಯಾರಿಸ್ ವಿರುದ್ಧ 5.31 ಎಕರೆ ಕಬಳಿಕೆ ಆರೋಪ!**

ಯಲಹಂಕ ಹೊಬಳಿಯಲ್ಲಿ ಸರ್ವೇ ನಂಬರ್ 4,5,2,13,11,7,8 ಹಾಗೂ 9 ನಲ್ಲಿ ಎನ್ ಎ ಹ್ಯಾರಿಸ್ ಅವರು ಅವರ ಪತ್ನಿ ಹೆಸರಿನಲ್ಲಿ ಭೂಮಿ ಖರೀದಿ ಮಾಡಿದ್ದಾರೆ. 5.31 ಎಕರೆ ಇದು ವಕ್ಫ್ ಆಸ್ತಿ. ಇದರ ವಿರುದ್ಧ ದೂರು ನೀಡಿದರೂ ಕ್ರಮ ಆಗಿಲ್ಲ ಎಂದು ವರದಿಯಲ್ಲಿ ಉಲ್ಲೇಖ ಮಾಡಲಾಗಿದೆ. ಕೊಪ್ಪಳ ಮೈಸೂರು, ಬೆಂಗಳೂರು, ಬೀದರ್, ದಾವಣಗೆರೆ, ವಿಜಯಪುರ, ಬಳ್ಳಾರಿ, ರಾಮನಗರ,ಕೋಲಾರ ಜಿಲ್ಲೆಗಳಲ್ಲಿ ಸಾವಿರಾರು ಎಕರೆ ವಕ್ಫ್ ಆಸ್ತಿ ಕಬಳಿಕೆ ಆಗಿದೆ. 2ಜಿ ಹಗರಣದ ರೀತಿಯಲ್ಲೇ ವಕ್ಫ್ ಹಗರಣ ನಡೆದಿದೆ ಎಂದು ವರದಿಯಲ್ಲಿ ಉಲ್ಲೇಖ ಮಾಡಲಾಗಿದ್ದು, ಲೋಕಾಯುಕ್ತ ತನಿಖೆಯನ್ನು ನಡೆಸಬೇಕು ಹಾಗೂ ಲ್ಯಾಂಡ್ ಆಡಿಟ್ ಮಾಡಬೇಕು ಹಾಗೂ ವಕ್ಫ್ ಆಸ್ತಿ ರಕ್ಷಣೆಗೆ ಟಾಸ್ಕ್ ಫೋರ್ಸ್ ರಚಿಸಬೇಕು ಎಂದು ಶಿಫಾರಸು ಮಾಡಲಾಗಿದೆ. ವಕ್ಫ್ ಅಧಿಕಾರಿಗಳು, ವಕ್ಫ್ ಬೋರ್ಡ್ ಅಧ್ಯಕ್ಷರು ಹಾಗೂ ಸದಸ್ಯರು, ರಾಜಕೀಯ ನಾಯಕರು, ಪ್ರಭಾವಿ ವ್ಯಕ್ತಿಗಳು, ವಿರುದ್ಧ ವಕ್ಫ್ ಆಕ್ಟ್ 1995 ಹಾಗೂ 1997 ಪ್ರಕಾರ ಕ್ರಮ ಕೈಗೊಳ್ಳುವಂತೆ ಶಿಫಾಸರು ಮಾಡಲಾಗಿದೆ.

## ರಾಮನಗರ, ಚನ್ನಪಟ್ಟಣ ಯುವ ಪೀಳಿಗೆಗೆ 25 ಸಾವಿರ ಉದ್ಯೋಗ ಸೃಷ್ಟಿ?

• ಉದಯವಾಹಿನಿ, ರಾಮನಗರ

ನಿರುದ್ಯೋಗ ಸಮಸ್ಯೆಯಿಂದ ಸಾಕಷ್ಟು ಯುವಕರು ವಂಚಿತರಾಗಿದ್ದಾರೆ. ಕುಮಾರಣ್ಣನ ಪರವಾಗಿ ಯುವ ಸಮುದಾಯದ ಒಬ್ಬ ಯುವಕನಾಗಿ ನಿಮಗೆ ಮಾತು ಕೊಡುತ್ತಿದ್ದೇನೆ, ಯುವಕರ ದ್ವನಿಯಾಗಿ ನಾನು ಕೆಲಸ ಮಾಡುತೇನೆ, ಜಿಲ್ಲೆಯಲ್ಲಿ ಕನಿಷ್ಠ 25 ಸಾವಿರ ಯುವಕರಿಗೆ ಉದ್ಯೋಗ ಕೊಡಿಸುವಂತ ಪ್ರಾಮಾಣಿಕ ಕೆಲಸ ಮಾಡುತ್ತೇನೆ ಎಂದು ಯುವ ಪೀಳಿಗೆಗೆ ನಿಖಿಲ್ ಅವರು ಭರವಸೆ ನೀಡಿದರು. ಚನ್ನಪಟ್ಟಣ ನಗರ ವ್ಯಾಪ್ತಿಯ ಹಲವಾರು ವಾರ್ಡ್ಗಳಿಗೆ ಭೇಟಿ ನೀಡಿ ನಿಖಿಲ್ ಕುಮಾರಸ್ವಾಮಿ ಅವರು ಮತ ಯಾಚನೆ ಮಾಡಿದ, ನಂತರ ಪ್ರಚಾರ ಸಭೆಯಲ್ಲಿ ಮಾತನಾಡಿದ ನಿಖಿಲ್ ಅವರು ಯುವ ಪೀಳಿಗೆಗೆ ಉದ್ಯೋಗ ಸೃಷ್ಟಿ ಕೊಡಿಸುವ ಭರವಸೆ ನೀಡಿದರು.ಇವತ್ತು ಕುಮಾರಸ್ವಾಮಿ ಅವರು ಕೇಂದ್ರದ ಬೃಹತ್ ಸಚಿವರಾಗಿದ್ದಾರೆ. ಅದಕ್ಕೆ ನೀವು ಕಾರಣ,



ಈಗ ನಿಮ್ಮ ಋಣವನ್ನ ತೀರಿಸುವ ಕೆಲಸ ಮಾಡುತೀನಿ ಎಂದರು. ಕುಮಾರಣ್ಣ ರೈತರ ಪರವಾಗಿ ಮಾತು ಕೊಟ್ಟು, ಕೊಟ್ಟ ಮಾತಿನಂತೆ ರೈತರ ಸಾಲ ಮನ್ನ ಮಾಡಿದ್ದರೋ ಅದೇ ರೀತಿ ರಾಮನಗರ ಮತ್ತು ಚನ್ನಪಟ್ಟಣ ಜನತೆಗೆ ಉದ್ಯೋಗ ಕಲ್ಪಿಸಿಕೊಡಿಸುತ್ತೇನೆ ಎಂಬ ಸವಾಲು ಸ್ವೀಕಾರ ಮಾಡಿದ್ದಾರೆ ಕುಮಾರಣ್ಣ ಅವರು ಎಂದರು. ಕುಮಾರಣ್ಣ ಈಗಾಗಲೇ ದೆಹಲಿಯಲ್ಲಿ ನಾಲ್ಕುವರೆ ತಿಂಗಳಿಂದ ಸರಣಿ ಸಭೆ ಮಾಡುತ್ತಿದ್ದಾರೆ. ಅನೇಕ ಬೃಹತ್ ಕೈಗಾರಿಕಾ ಕಾರ್ಖಾನೆಯನ್ನ ರಾಮನಗರ ಜಿಲ್ಲೆಯಲ್ಲಿ ಸ್ಥಾಪನೆ ಮಾಡವ ಉದ್ದೇಶದಿಂದ ಕೆಲಸ ಮಾಡುತ್ತಿದ್ದೇವೆ ಎಂದರು.

ಇವತ್ತು ಎಲ್ಲಾ ತಾಯಂದಿರಿಗೂ ಹಾಗೂ ಯುವಕರಿಗೆ ಬೇಕಾಗಿರುವುದು ಸ್ವಾಭಿಮಾನದ ಬದುಕು, ಸ್ವಂತ ಕಾಲಿನ ಮೇಲೆ ನಿಂತು ದುಡಿಯುವಂತ ಉದ್ಯೋಗ ಬೇಕಾಗಿದೆ. ಇವೆಲ್ಲಾವನ್ನು ಕುಮಾರಣ್ಣ ಅವರ ಜತೆಯಲ್ಲಿ ನಿಂತು ಮಾಡಿಸಿಕೊಡುತ್ತೇನೆ. ನಿಮ್ಮನ್ನ ನಂಬಿ ಬಂದಿದ್ದೇನೆ ಆಶೀರ್ವಾದ ಮಾಡಿ ಎಂದು ಮನವಿ ಮಾಡಿದರು.

ನಾನು ಎರಡು ಬಾರಿ ಸೋಲು ಕಂಡರು , ನನ್ನಲ್ಲಿ ಹೋರಾಟದ ಕಿಚ್ಚು ಕಡಿಮೆ ಆಗಿಲ್ಲ ದೇವೇಗೌಡರ, ಕುಮಾರ ಸ್ವಾಮಿ ಅವರ ದೀರ್ಘ ಕಾಲದ ರಾಜಕಾರಣದಲ್ಲಿ ಬಡವರ ಪರವಾಗಿ ಇದ್ದವರು. ಹಾಗೆಯೇ ನಾನು. ಒಂದು ಅವಕಾಶ ಮಾಡಿಕೊಡಿ ಎಂದು ಮನವಿ ಮಾಡಿದರು.

## ಗ್ಯಾರಂಟಿಗಳನ್ನು ನಿಲ್ಲಿಸಲು ಬಿಜೆಪಿ-ಜೆಡಿಎಸ್ ಸಂಚು ನಡೆಸಿದೆ

• ಉದಯವಾಹಿನಿ, ಬೆಂಗಳೂರು



ಗೃಹಲಕ್ಷ್ಮಿ ಸೇರಿದಂತೆ ಕಾಂಗ್ರೆಸ್ ಸರ್ಕಾರ ಯೋಜನೆಗಳನ್ನು ನಿಲ್ಲಿಸಲು ಬಿಜೆಪಿ-ಜೆಡಿಎಸ್ ಮೈತ್ರಿಕೂಟ ಸಂಚು ನಡೆಸಿದೆ. ಆದರೆ ಇದು ಸಾಧ್ಯವಾಗುವುದಿಲ್ಲ ಎಂದು ಕೆಪಿಸಿಸಿ ಅಧ್ಯಕ್ಷ ಹಾಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹೇಗಾದರೂ ಮಾಡಿ ಗ್ಯಾರಂಟಿಗಳನ್ನು ನಿಲ್ಲಿಸಲು ಬಿಜೆಪಿಯವರು ಪ್ರಯತ್ನಿಸುತ್ತಿದ್ದಾರೆ. ಮಾಜಿ ಪ್ರಧಾನಿ ದೇವೇಗೌಡರು ಅದನ್ನೇ ಹೇಳಿದ್ದಾರೆ. ಆದರೆ ಗ್ಯಾರಂಟಿ ನಿಲ್ಲಿಸಲು ಅವರ ಹಣೆಯಲ್ಲಿ ಬರೆದಿಲ್ಲ ಎಂದು ತಿರುಗೇಟು ನೀಡಿದರು.

ಜನ ಹುಷಾರಾಗಿರಬೇಕು. ತಾಯಂದಿರು ಉತ್ತಮವಾದ ಬದುಕು ನಡೆಸಲಿ ಎಂದು ಗೃಹಲಕ್ಷ್ಮಿಯನ್ನು ನೀಡಲಾಗುತ್ತಿದೆ ಎಂದರು.

# ನಾನು ರಾಜಕೀಯ ನಿವೃತ್ತಿ ಘೋಷಿಸ್ತೀನಿ, ನೀವು ನಿವೃತ್ತಿ ಘೋಷಿಸ್ತೀರಾ?

### ಎಸ್.ಆರ್.ಬೊಮ್ಮಾಯಿ ಅವರ ಮೊಮ್ಮಗ, ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರ ಮಗನಿಗೆ ಟಿಕೆಟ್ ನೀಡಿದ್ದೀರಲ್ಲಾ ಇದು ಕುಟುಂಬ ರಾಜಕಾರಣ ಅಲ್ವಾ?

• ಉದಯವಾಹಿನಿ, ಬೆಂಗಳೂರು

**ಪ್ರಧಾನಿ ವಿರುದ್ಧ ಸಿಎಂ ಗುಡುಗು**

ಸುಳ್ಳುಗಾರ ಪ್ರಧಾನಿ ಮೋದಿಯವರು ನಮ್ಮ ಮೇಲೆ ಹೊಸ ಸುಳ್ಳಿನ ಆರೋಪ ಮಾಡಿದ್ದಾರೆ. ಅಬಕಾರಿ ಇಲಾಖೆಯಿಂದ 700 ಕೋಟಿ ತಂದು ಮಹಾರಾಷ್ಟ್ರದಲ್ಲಿ ಕಾಂಗ್ರೆಸ್ ಚುನಾವಣೆ ಮಾಡುತ್ತಿದೆ ಎಂದು ಹಸಿ ಹಸಿ ಸುಳ್ಳು ಹೇಳಿದ್ದಾರೆ. ಮೋದಿ ಅವರು ಹೇಳಿದ್ದು ಸಾಬೀತು ಮಾಡಿದ್ರೆ ನಾನು ರಾಜಕೀಯ ನಿವೃತ್ತಿ ಘೋಷಿಸ್ತೀನಿ.

ಇಲ್ಲದಿದ್ದರೆ ನೀವು ನಿವೃತ್ತಿ ಘೋಷಿಸ್ತೀರಾ ಎಂದು ಪ್ರಧಾನಿ ಮೋದಿಯವರಿಗೆ ಸಿಎಂ ನೇರ ಸವಾಲು ಹಾಕಿದರು.

ಮೋದಿಯವರು ಕುಟುಂಬ ರಾಜಕಾರಣದ ಬಗ್ಗೆ ಭಯಾನಕ ಭಾಷಣ ಮಾಡ್ತಾರೆ. ಆದರೆ ಇಲ್ಲಿ ಮಾಜಿ ಮುಖ್ಯಮಂತ್ರಿ ಎಸ್. ಆರ್.ಬೊಮ್ಮಾಯಿ ಅವರ ಮೊಮ್ಮಗ, ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರ ಮಗನಿಗೆ ಟಿಕೆಟ್ ನೀಡಿದ್ದೀರಲ್ಲಾ ಇದು ಕುಟುಂಬ ರಾಜಕಾರಣ ಅಲ್ವಾ? ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪ್ರಶ್ನಿಸಿದ್ದಾರೆ.

ಮಾಜಿ ಪ್ರಧಾನಿ ದೇವೇಗೌಡರು, ಇವರ ಮಕ್ಕಳಾದ ಕುಮಾರಸ್ವಾಮಿ, ರೇವಣ್ಣ, ಕುಮಾರಸ್ವಾಮಿ ಅವರ ಪತ್ನಿ ಅನಿತಾ ಕುಮಾರಸ್ವಾಮಿ, ರೇವಣ್ಣ ಅವರ ಪತ್ನಿ ಭವಾನಿ ರೇವಣ್ಣ ಅವರೆಲ್ಲಾ ಆಯ್ತು. ಈಗ ಕುಮಾರಸ್ವಾಮಿ ದಂಪತಿ ಪುತ್ರ ನಿಖಿಲ್ ಕುಮಾರಸ್ವಾಮಿ, ರೇವಣ್ಣ ದಂಪತಿ ಪುತ್ರರಾದ ಪ್ರಜ್ವಲ್ ರೇವಣ್ಣ, ಸೂರಜ್ ರೇವಣ್ಣ...ಇವರೆಲ್ಲಾ ಏನು ಮೋದಿಯವರೇ? ಇವರೆಲ್ಲಾ ಕುಟುಂಬ ರಾಜಕಾರಣ ಮಾಡ್ತಿಲ್ವಾ ಎಂದು ಪ್ರಶ್ನಿಸಿದ ಮುಖ್ಯಮಂತ್ರಿಗಳು ಭಾಷಣ ಮಾಡೋದು ಸುಲಭ ಮೋದಿಯವರೇ. ನುಡಿದಂತೆ ನಡೆಯೋದು ನಿಮ್ಮಿಂದ ಆಗಲ್ಲ ಎಂದರು.

ಕೊರೋನಾ ಸಂದರ್ಭದಲ್ಲಿ ಇಡೀ ರಾಜ್ಯದ ಜನರ ಪರಿಸ್ಥಿತಿ ಹೇಗಿತ್ತು ಅಂತ ನಮಗೂ ಗೊತ್ತು, ನಿಮಗೂ ಗೊತ್ತು. ಇಂಥಾ ಸಂದರ್ಭದಲ್ಲೂ ಮುಖ್ಯಮಂತ್ರಿ ಯಡಿಯೂರಪ್ಪ, ಸಚಿವರಾದ ಶ್ರೀರಾಮುಲು, ಸುಧಾಕರ್ ಚೀನಾ ಜೊತೆಗೆ ವ್ಯವಹಾರ ಮಾಡಿ ಪಿಪಿಇ ಕಿಟ್ ಖರೀದಿ ಸೇರಿ ಕಮಿಷನ್ ತಿಂದಿದ್ದು, ದುಡ್ಡು ಲೂಟಿ ಮಾಡಿದ್ದು ವರದಿ ಆಗಿದೆ. ಚಾಮರಾಜನಗರದಲ್ಲಿ ಆಕ್ಸಿಜನ್ ಕೊಡದೆ 39 ಜನರ ಸಾವಿಗೆ ಕಾರಣರಾದ ಇವರಿಗೆಲ್ಲಾ ಕ್ಷಮೆ ಇದೆಯಾ? ಇವರನ್ನು ಕ್ಷಮಿಸಿ ಮತ ಹಾಕಿದ್ರೆ ನಿಮ್ಮ ಮತಗಳಿಗೆ ಗೌರವ ಬರುತ್ತದಾ ಯೋಚಿಸಿ. ಕೊರೋನಾ ಸಂದರ್ಭದಲ್ಲಿ ಮೃತದೇಹಗಳ, ಹೆಣಗಳ ಲೆಕ್ಕದಲ್ಲೂ ಹಣ ಲೂಟಿ ಮಾಡಿದ ಕೆಟ್ಟ ಸರ್ಕಾರ ಬಿಜೆಪಿಯದ್ದು. ಇಂಥಾ ಕೆಟ್ಟ ಸರ್ಕಾರ ಭಾರತದ ಚರಿತ್ರೆಯಲ್ಲೇ ಬಂದಿರಲಿಲ್ಲ ಎಂದರು.

ಬಸವರಾಜ ಬೊಮ್ಮಾಯಿ ಅವರನ್ನು ನಾಲ್ಕು ಬಾರಿ ಗೆಲ್ಲಿಸಿದ್ರಿ. ಶಾಸಕ ಮಾಡಿದ್ರಿ, ಮಂತ್ರಿ ಮಾಡಿದ್ರಿ, ಮುಖ್ಯಮಂತ್ರಿ ಮಾಡಿದ್ರಿ, ಸಂಸದರಾಗಿಯೂ ಮಾಡಿದ್ರಿ. ಇಷ್ಟಾಗಿ ಶಿಗ್ಗಾವಿ ಕ್ಷೇತ್ರಕ್ಕೆ ಏನಾದ್ರೂ ಸಿಕ್ಕಿದೆಯಾ? ಬಸವರಾಜ ಬೊಮ್ಮಾಯಿ ಅವರಿಂದ ಕ್ಷೇತ್ರಕ್ಕೆ ಏನಾದ್ರೂ ಸಿಗದಿದ್ರೂ, ಬೇಡ. ಬೊಮ್ಮಾಯಿಯವರಾದ್ರೂ ಶಿಗ್ಗಾವಿ ಜನರ ಕೈಗೇ ಸಿಗಲಿಲ್ಲ. ಅಪ್ಪನೇ ಗೆದ್ದ ಮೇಲೆ ನಿಮ್ಮ ಕೈಗೆ ಸಿಗಲಿಲ್ಲ. ಇನ್ನು ಇವರ ಮಗ ಭರತ್ ಬೊಮ್ಮಾಯಿ ನಿಮ್ಮ ಕೈಗೆ ಸಿಗೋದಾದ್ರೂ ಹೌದಾ ಎಂದು ಪ್ರಶ್ನಿಸಿದರು. ಈಗ ಬರೀ ಹಣ ಬಲದಲ್ಲಿ ಶಿಗ್ಗಾವಿ ಮತದಾರರನ್ನು ಮರಳು ಮಾಡಿ ಗೆಲ್ಲಬಹುದು ಎಂದುಕೊಂಡಿದ್ದಾರೆ. ಇದು ಶಿಗ್ಗಾವಿ ಜನತೆಗೆ ಮಾಡುವ ಅವಮಾನ ಎಂದರು. ನಾವು ಐದು ಗ್ಯಾರಂಟಿಗಳ ಮೂಲಕ ರಾಜ್ಯದ ಪ್ರತೀ ಕುಟುಂಬಗಳಿಗೆ ಆರ್ಥಿಕ ಶಕ್ತಿ ನೀಡಿದ್ದೇವೆ. ನಾವು ಕೆಲಸ ಮಾಡಿ, ನುಡಿದಂತೆ ನಡೆದು ನಿಮ್ಮ ಎದುರಿಗೆ ಬಂದು ನಿಂತಿದ್ದೇವೆ. ನಾವು ಕೆಲಸ ಮಾಡಿ ಕೂಲಿ ಕೇಳುತ್ತಿದ್ದೇವೆ. ಪಠಾಣ್ ಅವರನ್ನು ಗೆಲ್ಲಿಸಿ ಎಂದು ಕರೆ ನೀಡಿದರು.



**ಈ ಚುನಾವಣೆಯಲ್ಲಿ ಪಠಾಣ್ ಅವರನ್ನು ಗೆಲ್ಲಿಸಲೇಬೇಕು**

ಈ ಬಾರಿ ಶಿಗ್ಗಾವಿ-ಸವಣೂರು ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಪಠಾಣ್ ನೂರಕ್ಕೆ ನೂರು ಗೆಲ್ತಾರೆ. ಕಳೆದ ಚುನಾವಣೆಯ ಕತೆಯೇ ಬೇರೆ-ಈ ಚುನಾವಣೆಯ ಫಲಿತಾಂಶವೇ ಬೇರೆ ಆಗತ್ತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಭರವಸೆ ವ್ಯಕ್ತಪಡಿಸಿದರು. ಕಳೆದ ಚುನಾವಣೆಯಲ್ಲಿ ಕಡೆ ಗಳಿಗೆಯಲ್ಲಿ ಪಠಾಣ್ ಅವರಿಗೆ ಟಿಕೆಟ್ ನೀಡಿದೆವು. ನಾನಾಗಲೀ, ನಮ್ಮ ಪಕ್ಷದ ಮುಖಂಡರಾಗಲಿ ಪ್ರಚಾರಕ್ಕೆ ಬರಲಾಗಲಿಲ್ಲ. ಅದಕ್ಕೇ ಪಠಾಣ್ ಅವರಿಗೆ ಹಿನ್ನಡೆ ಆಯಿತು. ಈ ಚುನಾವಣೆಯಲ್ಲಿ ಪಠಾಣ್ ಅವರನ್ನು ಗೆಲ್ಲಿಸಲೇಬೇಕು ಎಂದು ನಾನು ತೀರ್ಮಾನ ಮಾಡಿದ್ದೇನೆ. ಡಿಸಿಎಂ ಡಿ.ಕೆ.ಶಿವಕುಮಾರ್ , ಸಚಿವರಾದ ಸತೀಶ್ ಜಾರಕಿಹೊಳಿ, ಲಕ್ಷ್ಮೀ ಹೆಬ್ಬಾಳ್ಕರ್, ಈಶ್ವರ್ ಖಂಡ್ರೆ, ಶಿವಾನಂದ ಪಾಟೀಲರು, ಹೆಚ್.ಕೆ.ಪಾಟೀಲರು ಸೇರಿ ಪ್ರತಿಯೊಬ್ಬರೂ ತೀರ್ಮಾನ ಮಾಡಿ ಆಗಿದೆ. ಆದ್ದರಿಂದ ಪಠಾಣ್ ಅವರನ್ನು ಶಿಗ್ಗಾವಿ ಜನ ಈ ಬಾರಿ ಗೆಲ್ಲಿಸ್ತಾರೆ. ಇದರಲ್ಲಿ ಎಳ್ಳಷ್ಟೂ ಅನುಮಾನ ಬೇಡ ಎಂದರು.

**ಈ ದಿನದ ದರ** ಪೆಟ್ರೋಲ್: 103.44 ₹/L | ಡೀಸೆಲ್ : 89.97 ₹/L | ಬಂಗಾರ: ₹7,876/Gram24ct ₹7,220/Gram22ct | ಬೆಳ್ಳಿ: ₹93.00/Gram



## ಸಿದ್ಧಸೂಕ್ತಿ

**ಡಾ ಆರೂಢಭಾರತೀ ಸ್ವಾಮೀಜಿ**
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

### ಅಲ್ಲಮಪ್ರಭು ದೇವಸ್ಥಾನ ತೇರದಾಳ

ಇಂದು ಬಾಗಲಕೋಟೆ ಜಿಲ್ಲೆಯ ತೇರದಾಳದಲ್ಲಿ ಅಲ್ಲಮ ಪ್ರಭುದೇವರ ನೂತನ ದೇವಸ್ಥಾನದ ಲೋಕಾರ್ಪಣೆ ನಡೆಯಿತು. ಈ ಸಮಾರಂಭಕ್ಕೆ ನಾನು ಅಕ್ಷರಶಃ ಕರೆಯದೇ ಬಂದಿದ್ದೆ. ಈ ಹಿಂದೆ ಅಲ್ಲಮ ಪ್ರಭುವಿನ ಜನ್ಮಸ್ಥಳ ಹಾಗೂ ಸಮಾಧಿಸ್ಥಳಗಳಲ್ಲಿ ಸ್ಮಾರಕಗಳಿಲ್ಲದ್ದರ ಕುರಿತು ಎರಡು ಸೂಕ್ತಿ ಬರೆದಿದ್ದೆ. ಅಲ್ಲಮನ ಮಠ ಮಂದಿರ ಕಂಡಿರಲಿಲ್ಲ. ಇಂದು ಕಂಡು ಧನ್ಯನಾದೆ. ಬಸವಣ್ಣನಿಗೂ ಗುರು ಎನಿಸಿದ ಅನುಭವ ಮಂಟಪದ ಅಧ್ಯಕ್ಷ ಶೂನ್ಯ ಸಿಂಹಾಸನಾಧಿಪತಿ ವಚನಕಾರ ಅಲ್ಲಮ ಕೆಲ ದಿನ ನೆಲೆ ನಿಂತ ಪುಣ್ಯ ಭೂಮಿ ಇದು. ಇಲ್ಲಿನ ಅಲ್ಲಮನ ಪ್ರಾಚೀನ ದೇವಾಲಯ ಇದೀಗ ಆರು ಕೋಟಿಗೂ ಅಧಿಕ ಮೊತ್ತದ ಕೇವಲ ಭಕ್ತಾದಿಗಳ ಹಣದಲ್ಲಿ ಕಲ್ಲಿನಲ್ಲಿ ಸುಂದರವಾಗಿ ಪುನರ್ನಿರ್ಮಾಣಗೊಂಡಿದೆ. ಶ್ರೀಶೈಲದ ಜಗದ್ಗುರು ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮೀಜಿ ಎರಡು ಲಕ್ಷ ರೂ ನೀಡಿ ಆರಂಭಕ್ಕೆ ಆಶೀರ್ವದಿಸಿದರೆ ಮುಸ್ಲಿಂ ಜನಾಂಗದವರು ಆರು ಲಕ್ಷಕ್ಕೂ ಹೆಚ್ಚು ದೇಣಿಗೆ ನೀಡಿರುವುದು ಸರ್ಕಾರದ ನೆರವು ಪಡೆಯದಿರುವುದು ಈ ನೂತನ ದೇವಸ್ಥಾನ ನಿರ್ಮಾಣದ ವಿಶೇಷ. ಈ ದೇವಾಲಯದ ಲೋಕಾರ್ಪಣೆಯ ದಿನ ವರ್ಷವನ್ನಾಗಲೀ ಶಿಲಾಫಲಕವನ್ನಾಗಲೀ ಅಳವಡಿಸದಿರುವುದು ಈ ದೇವಾಲಯ ಜೀರ್ಣೋದ್ಧಾರ ಸಮಿತಿಯ ಅಧ್ಯಕ್ಷ ಶಾಸಕ ಜಗದೀಶ ಗುಡಗುಂಟಿಮಠ ಮುಂತಾದವರ ಔದಾರ್ಯ ಶ್ಲಾಘನೀಯ. ಎರಡುಸಾವಿರದ ಇಪ್ಪತ್ನಾಲ್ಕರ ಅಕ್ಟೋಬರ್ ಹದಿನಾಲ್ಕರಿಂದ ನವೆಂಬರ್ ಹನ್ನೊಂದರವರೆಗೆ ನಡೆದ ವಿವಿಧ ಕಾರ್ಯಕ್ರಮಗಳು ಜನಮಾನಸದಲ್ಲಿ ಅಚ್ಚೊತ್ತಿ ಉಳಿದಿವೆ!

# ಕೈಗೆ ಪೆನ್ನಿನ ಬದಲು ತಲ್ವಾರ್ ನೀಡಿ ಎಂಬ ಸ್ವಾಮೀಜಿ ಹೇಳಿಕೆ ಸರಿಯಲ್ಲ

## ಮರುಳಾರಾಧ್ಯ ಶಿವಾಚಾರ್ಯ ಸ್ವಾಮೀಜಿ ಹೇಳಿಕೆ ವಿರುದ್ಧ ಕ್ರಮ ಕೈಗೊಳ್ಳಲಾಗುವುದು

• **ಉದಯವಾಹಿನಿ, ಬೆಂಗಳೂರು**

ಮಕ್ಕಳ ಕೈಗೆ ಪೆನ್ನಿನ ಬದಲು ತಲ್ವಾರ್ ನೀಡಿ ಎಂದು ಸ್ವಾಮೀಜಿಯೊಬ್ಬರು ಹೇಳಿರುವುದು ಸರಿಯಲ್ಲ. ಇದರ ವಿರುದ್ಧ ಯಾವ ಸೆಕ್ಷನ್‌ಗಳಡಿ ಕ್ರಮ ಕೈಗೊಳ್ಳಲು ಅವಕಾಶವಿದೆ ಎಂಬುದನ್ನು ಪರಿಶೀಲನೆ ನಡೆಸುವುದಾಗಿ ಗೃಹ ಸಚಿವ ಡಾ.ಜಿ.ಪರಮೇಶ್ವರ್ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

**ಸರ್ಕಾರದ ವಿರುದ್ಧ ಆರೋಪ**

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮರುಳಾರಾಧ್ಯ ಶಿವಾಚಾರ್ಯ ಸ್ವಾಮೀಜಿ ಹೇಳಿಕೆ ವಿರುದ್ಧ ಕ್ರಮ ಕೈಗೊಳ್ಳಲಾಗುವುದು. ಧಾರ್ಮಿಕ ಗುರುಗಳು ಧರ್ಮವನ್ನು ಪ್ರಚಾರ ಮಾಡಬೇಕು. ಎಲ್ಲರೂ ಧಾರ್ಮಿಕ ನಾಯಕರಿಗೆ ಗೌರವ ಕೊಟ್ಟು ಕಾಲಿಗೆ ಬೀಳುತ್ತೇವೆ. ಪೂಜ್ಯನೀಯ ಸ್ಥಾನದಿಂದ ನೋಡುತ್ತೇವೆ. ಅವರು ಎಲ್ಲರನ್ನೂ ಸಮಾನವಾಗಿ ನೋಡಬೇಕು. ಅಂತಹವರು ಪ್ರಚೋದನೆಯ ಮಾತುಗಳನ್ನಾಡುವುದು ಸೂಕ್ತವಲ್ಲ ಎಂದರು.

ಕಾವಿ ಬಟ್ಟೆ ಹಾಕಿದವರು, ಮುಸ್ಲಿಂ ಸೇರಿದಂತೆ ಯಾವುದೇ ಧರ್ಮದ ಮುಖಂಡರಾದರೂ ನಿಷ್ಪಕ್ಷಪಾತವಾಗಿರಬೇಕು. ರಾಜಕೀಯದಲ್ಲಿ ಹಸ್ತಕ್ಷೇಪ ಮಾಡಬಾರದು ಎಂದು ತಿಳಿಸಿದರು. ಕೋವಿಡ್ ಹಗರಣದಲ್ಲಿ ನಾವು ಯಾವುದೇ ರೀತಿಯ ಆಯ್ಕೆ ರಾಜಕಾರಣ ಮಾಡುತ್ತಿಲ್ಲ.

2023ರ ಚುನಾವಣೆಯಲ್ಲಿ ಕೋವಿಡ್ ಸಂದರ್ಭದಲ್ಲಿ ಭ್ರಷ್ಟಾಚಾರವಾಗಿದೆ ಎಂದು ಆರೋಪ ಮಾಡಿದ್ದೆವು. ಅದರ ತನಿಖೆ ನಡೆಸುವುದಾಗಿಯೂ ತಿಳಿಸಿದ್ದೆವು. ಅದರಂತೆ ಜಸ್ಟೀಸ್ ಮೈಕುಲ್ ಕುನ್ಹಾ ಸಮಿತಿ ರಚಿಸಲಾಗಿದ್ದು, ಮಧ್ಯಂತರ ವರದಿ ಬಂದಿದೆ. ಪಿಪಿಇ ಕಿಟ್ ಖರೀದಿಯಲ್ಲಿ ಸರ್ಕಾರಕ್ಕೆ 14 ಕೋಟಿ ರೂ. ನಷ್ಟವಾಗಿದೆ ಎಂಬ ವರದಿಯಿದೆ. ಇದರ ಅಧ್ಯಯನಕ್ಕೆ ಸಂಪುಟ ಉಪಸಮಿತಿ ರಚಿಸಲಾಗಿದೆ. ಉಪಚುನಾವಣೆ ಬಳಿಕ ಸಭೆ ನಡೆಸಿ ವರದಿ ನೀಡಲಾಗುವುದು. ಅನಂತರ ಆ ಕುರಿತು ಸರ್ಕಾರ ಕ್ರಮ ಕೈಗೊಳ್ಳಲಿದೆ ಎಂದರು.

ನ್ಯಾಯಮೂರ್ತಿ ಮೈಕಲ್ ಕುನ್ಹಾ ಅವರ ಸಮಗ್ರತೆಯ ಬಗ್ಗೆ ಮಾತನಾಡುವಷ್ಟು ಯೋಗ್ಯತೆ ಪ್ರಹ್ಲಾದ್ ಜೋಶಿಯವರಿಗೆ ಇದೆಯೋ, ಇಲ್ಲವೋ ನಮಗೆ ಗೊತ್ತಿಲ್ಲ. ಮೈಕಲ್ ಕುನ್ಹಾ ನ್ಯಾಯಮೂರ್ತಿಗಳಾಗಿ ಉತ್ತಮ ಅನುಭವಿ. ಅವರನ್ನು ಅನುಮಾನಿಸುವುದು ಸರಿಯಲ್ಲ. ಬಿಜೆಪಿಯವರು ತಪ್ಪು ಮಾಡದೇ ಇದ್ದರೆ ಹೆದರುವ ಅಗತ್ಯ ಏನಿದೆ? ಎಂದು ತಿರುಗೇಟು ನೀಡಿದರು. ಸಿದ್ದರಾಮಯ್ಯ ಅಧಿಕಾರದಲ್ಲಿರುವವರೆಗೂ ಮಾತ್ರ ಮುಸ್ಲಿಮರಿಗೆ ಶ್ರೇಯಸ್ಸು ಎಂದು ಇಕ್ಬಾಲ್ ಅನ್ಸಾರಿ ಯಾವ ಕಾರಣಕ್ಕೆ ಹೇಳಿಕೆ ನೀಡಿದ್ದಾರೆ ಎಂದು ಗೊತ್ತಿಲ್ಲ. ಇಂತಹ ವಿಚಾರಗಳಿಗೆಲ್ಲಾ ಸರ್ಕಾರ ಉತ್ತರ ನೀಡಲು ಸಾಧ್ಯವಿಲ್ಲ ಎಂದರು. ವಕ್ಫ್ ವಿಚಾರವಾಗಿ ಬಿಜೆಪಿ ರಾಜಕಾರಣ ಮಾಡುತ್ತಲೇ ಇದೆ. ಸ್ವಾತಂತ್ರ್ಯ ಭಾರತದಲ್ಲಿ ಎಲ್ಲರೂ ಸಮಾನರು. ಸಮಾಜದಲ್ಲಿ ಮುಸ್ಲಿಮರು, ದಲಿತರು, ಹಿಂದುಳಿದ ವರ್ಗಗಳೂ ಹಿಂದುಳಿದಿವೆ. ಅವರನ್ನು ಮುನ್ನೆಲೆಗೆ ತರಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು. ಇದರಲ್ಲಿ ತುಷ್ಟೀಕರಣ ಎಲ್ಲಿದೆ, ಕಾಂಗ್ರೆಸ್ ಸರ್ಕಾರ ಎಲ್ಲರನ್ನೂ ಏಕರೀತಿಯಲ್ಲಿ ನೋಡಿಕೊಳ್ಳುತ್ತದೆ ಎಂದು ಹೇಳಿದರು.



ಮಹಾರಾಷ್ಟ್ರದಲ್ಲಿ ಏಕನಾಥ ಶಿಂಧೆ ಅವರ ನೇತೃತ್ವದ ಸರ್ಕಾರ ಅತ್ಯಂತ ಭ್ರಷ್ಟವಾಗಿದ್ದು, ಅಲ್ಲಿ ಭ್ರಷ್ಟಾಚಾರದ ಮೇಲೆಯೇ ಚುನಾವಣೆ ನಡೆಯುತ್ತಿದೆ. ಪ್ರಧಾನಿ ನರೇಂದ್ರ ಮೋದಿ ಅದಕ್ಕೆ ಯಾವ ರೀತಿ ಸ್ಪಷ್ಟನೆಯನ್ನೂ ನೀಡುತ್ತಿಲ್ಲ. ಬದಲಾಗಿ ಕರ್ನಾಟಕ ಸರ್ಕಾರದ ವಿರುದ್ಧ ಆರೋಪ ಮಾಡುತ್ತಿದ್ದಾರೆ. ಯಾರೋ ಬಿಜೆಪಿಯ ಕೆಳ ಹಂತದ ನಾಯಕರು 700 ಕೋಟಿ ರೂ.ಗೆ ಆರೋಪ ಮಾಡಿದ್ದರೆ ನಿರ್ಲಕ್ಷಿಸಬಹುದಿತ್ತು. ಆದರೆ ಪ್ರಧಾನಿಯಂತಹ ಹುದ್ದೆಯಲ್ಲಿರುವವರು ಆಧಾರರಹಿತವಾಗಿ ಈ ರೀತಿ ಮಾತನಾಡಿರುವುದು ಸರಿಯಲ್ಲ ಎಂದು ಹೇಳಿದರು.

ಮಹಾರಾಷ್ಟ್ರದಲ್ಲಿ ಕಾಂಗ್ರೆಸ್ ನೇತೃತ್ವದಲ್ಲಿ ಮೈತ್ರಿಕೂಟ ಒಟ್ಟಾಗಿ ಚುನಾವಣೆ ನಡೆಸುತ್ತಿದೆ. ನಾವು ಜಯಗಳಿಸುತ್ತೇವೆ ಎಂದರು.ಕರ್ನಾಟಕದ ವಿಧಾನಸಭೆ 3 ಕ್ಷೇತ್ರಗಳ ಉಪಚುನಾವಣೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಎಲ್ಲರೂ ಸಾಕಷ್ಟು ಪ್ರಚಾರ ಮಾಡಿದ್ದಾರೆ. ಬಹಿರಂಗ ಪ್ರಚಾರ ಇಂದು ಅಂತ್ಯಗೊಳ್ಳುತ್ತಿದೆ. ಇನ್ನು ಮುಂದಾದರೂ ರಾಜಕೀಯ ಟೀಕೆ ಟಿಪ್ಪಣಿಗಳು ನಿಲ್ಲಬಹುದು ಎಂದು ವಿಶ್ವಾಸ ವ್ಯಕ್ತಪಡಿಸಿದರು.

> **ಚುನಾವಣಾ ಕಣದಲ್ಲಿ ಕೇಳಿಬಂದ ಆರೋಪ-ಪ್ರತ್ಯಾರೋಪಗಳನ್ನು ಮತದಾರರು ಗಮನಿಸಿದ್ದಾರೆ. ಸೂಕ್ತ ತೀರ್ಮಾನ ನೀಡುತ್ತಾರೆ. ಮೂರೂ ಕಡೆ ಕಾಂಗ್ರೆಸ್ ಗೆಲುವು ಸಾಧಿಸಲಿದೆ ಎಂದು ಹೇಳಿದರು. ಉಪಚುನಾವಣೆ ಬಳಿಕ ಗೃಹಲಕ್ಷ್ಮಿ ಯೋಜನೆ ಸ್ಥಗಿತಗೊಳ್ಳುತ್ತದೆ ಎಂದು ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡ ಹೇಳಿರುವುದರ ಬಗ್ಗೆ ಹೆಚ್ಚು ಪ್ರತಿಕ್ರಿಯಿಸುವುದಿಲ್ಲ. ಹಿರಿಯ ರಾಜಕಾರಣಿಯವರಿಗೆ ಬಹುಶಃ ಮಾಹಿತಿ ಕೊರತೆಯಿದೆ ಎಂದು ಹೇಳಿದರು.**

> **ಮಂಡ್ಯದ ಅನಕೆರೆಯ ದೇವಸ್ಥಾನದಲ್ಲಿ ದಲಿತರಿಗೆ ದೇವಸ್ಥಾನ ಪ್ರವೇಶಿಸಲು ನಿರಾಕರಿಸಿದ ಪ್ರಕರಣ ನಾಚಿಕೆಗೇಡು. ಇದು ಒಂದು ದೇವಸ್ಥಾನದಲ್ಲಿ ನಡೆದಿರುವುದು ಬೆಳಕಿಗೆ ಬಂದಿದೆ. ಬಹಳಷ್ಟು ದೇವಸ್ಥಾನಗಳಲ್ಲಿ ಈ ರೀತಿ ಇದೆ. ಸಮಾಜ ಅರ್ಥ ಮಾಡಿಕೊಳ್ಳಬೇಕು. ದೇವರನ್ನು ವಿಂಗಡಣೆ ಮಾಡುವುದು ಸರಿಯಲ್ಲ ಎಂದರು.**

## ನ.14ರಂದು ಮಹತ್ವದ ರಾಜ್ಯ ಸಚಿವ ಸಂಪುಟ ಸಭೆ ನಿಗದಿ

• **ಉದಯವಾಹಿನಿ, ಬೆಂಗಳೂರು**

ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರ ನೇತೃತ್ವದಲ್ಲಿ ನವೆಂಬರ್.14ರಂದು ಮಹತ್ವದ ರಾಜ್ಯ ಸಚಿವ ಸಂಪುಟ ಸಭೆ ನಡೆಸಲು ನಿಗದಿಯಾಗಿದೆ. ದಿನಾಂಕ 14-11-2024ರ ಗುರುವಾರ ಬೆಳಿಗ್ಗೆ 11 ಗಂಟೆಗೆ ಸಚಿವ ಸಂಪುಟದ 2024ನೇ ಸಾಲಿನ 23ನೇ ಸಭೆಯನ್ನು ವಿಧಾನಸೌಧದ ಸಚಿವ ಸಂಪುಟ ಸಭಾಮಂದಿರದಲ್ಲಿ ಕರೆಯಲಾಗಿದೆ. ನವೆಂಬರ್.14ರಂದು ನಡೆಯಲಿರುವಂತ ರಾಜ್ಯ ಸಚಿವ ಸಂಪುಟ ಸಭೆಯಲ್ಲಿ ಹಲವು ಮಹತ್ವದ ನಿರ್ಧಾರಗಳನ್ನು ಕೈಗೊಳ್ಳುವ ಸಾಧ್ಯತೆ ಇದೆ. ಅಲ್ಲದೇ ರಾಜ್ಯದ ಅಭಿವೃದ್ಧಿ ಕೆಲಸಗಳಿಗೆ ಅನುದಾನ, ಅಭಿವೃದ್ಧಿ ಕಾಮಗಾರಿಗಳಿಗೆ ಅನುಮೋದನೆಯನ್ನು ನೀಡುವ ಸಾಧ್ಯತೆ ಇದೆ.

## ಹಾಸನ ಮಾಜಿ ಸಂಸದ ಪ್ರಜ್ವಲ್ ರೇವಣ್ಣಗೆ ಕಂಬಿ ಎಣಿಕೆ ಫಿಕ್ಸ್

• **ಉದಯವಾಹಿನಿ, ಬೆಂಗಳೂರು**

ಹಾಸನ ಮಾಜಿ ಸಂಸದ ಪ್ರಜ್ವಲ್ ರೇವಣ್ಣ ಲೈಂಗಿಕ ದೌರ್ಜನ್ಯ ಪ್ರಕರಣದ ಇಡೀ ರಾಜ್ಯ ಅಷ್ಟೇ ಅಲ್ಲದೆ, ದೇಶಾದ್ಯಂತ ಸದ್ದು ಮಾಡಿತ್ತು. ಇನ್ನು ಇದೀಗ ಈ ಪ್ರಕರಣಕ್ಕೆ ಸಂಬಂಧಪಟ್ಟಂತೆ ಪ್ರಜ್ವಲ್ ರೇವಣ್ಣ ಸಲ್ಲಿಸಿದ್ದ ಜಾಮೀನು ಅರ್ಜಿಯನ್ನು ಇಂದು (ನವೆಂಬರ್ 11) ಸುಪ್ರೀಂಕೋರ್ಟ್ ವಜಾಗೊಳಿಸಿ ಆದೇಶ ಹೊರಡಿಸಿದೆ. ಈ ಅವರಿಗೆ ಇನ್ಮುಂದೆ ಜೈಲೂಟ ಫಿಕ್ಸ್ ಆದಂತಾಗಿದೆ.ಮಾಜಿ ಸಂಸದ ಪ್ರಜ್ವಲ್ ರೇವಣ್ಣ ಅವರು ಹೈಕೋರ್ಟ್ ಆದೇಶ ಪ್ರಶ್ನಿಸಿ ಸುಪ್ರೀಂಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು. ಇನ್ನು ಇಂದು ಅರ್ಜಿ ವಿಚಾರಣೆ ನಡೆಸಿದ ಸುಪ್ರೀಂಕೋರ್ಟ್ ಜಾಮೀನು ಅರ್ಜಿಯನ್ನು ವಜಾಗೊಳಿಸಿದೆ. ಈ ಮೂಲಕ ಪ್ರಜ್ವಲ್ ರೇವಣ್ಣಗೆ ಸುಪ್ರೀಂಕೋರ್ಟ್ ಬಿಗ್ ಶಾಕ್ ನೀಡಿದೆ. ಅತ್ಯಾಚಾರ ಪ್ರಕರಣ ಸೇರಿದಂತೆ ಒಟ್ಟು ಮೂರು ಪ್ರಕರಣಗಳು ಮಾಜಿ ಸಂಸದ ಪ್ರಜ್ವಲ್ ರೇವಣ್ಣ ಅವರ ಮೇಲಿತ್ತು. ಈಗಾಗಲೇ ಈ ಮೂರು ಪ್ರಕರಣಗಳ ವಿಚಾರಣೆ ನಡೆಸಿದ್ದ ಹೈಕೋರ್ಟ್ ಜಾಮೀನು ಅರ್ಜಿ ಹಾಗೂ ನಿರೀಕ್ಷಣಾ ಜಾಮೀನು ಅರ್ಜಿಯನ್ನು ವಜಾಗೊಳಿಸಿ ಆದೇಶ ಹೊರಡಿಸಿತ್ತು. ಇದೀಗ ಸುಪ್ರೀಂಕೋರ್ಟ್ ಕೂಡ ಜಾಮೀನು ಅರ್ಜಿಯನ್ನು ವಜಾಗೊಳಿಸಿ ಶಾಕ್ ನೀಡಿದೆ.

## ಚಿಲ್ಲರೆ ವಿಚಾರಕ್ಕೆ ಜಗಳ ಬಿಡ್ರಿ!

• **ಉದಯವಾಹಿನಿ, ಬೆಂಗಳೂರು**

ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ (ಕೆಎಸ್‌ಆರ್‌ಟಿಸಿ) ಇನ್ನಷ್ಟು ಪ್ರಯಾಣಿಕ ಸ್ನೇಹಿಯಾಗುವತ್ತ ಹೆಜ್ಜೆ ಹಾಕಿದೆ. ದಿನದಿಂದ ದಿನಕ್ಕೆ ಸರ್ಕಾರಿ ಬಸ್‌ಗಳಲ್ಲಿ ಪ್ರಯಾಣಿಕರ ಸಂಖ್ಯೆ ಏರಿಕೆಯಾಗುತ್ತಿದೆ. ಇಂದಿನ ಯುಗಕ್ಕೆ ತಕ್ಕಂತೆ ಪ್ರಯಾಣಿಕ ಸ್ನೇಹಿ ವ್ಯವಸ್ಥೆ ಕಲ್ಪಿಸಲು ಮುಂದಾಗಿದ್ದು, ಸಂಪೂರ್ಣ ಡಿಜಿಟಲ್ ಆಗುವತ್ತ ಪ್ರಯತ್ನ ಆರಂಭಿಸಿದೆ. ಇದಕ್ಕಾಗಿ ಪ್ರಾಯೋಗಿಕ ಯೋಜನೆಯನ್ನು ಆಯ್ದ ಬಸ್‌ಗಳಲ್ಲಿ ಜಾರಿಗೊಳಿಸಿದೆ. ಡಿಜಿಟಲ್ ಪೇಮೆಂಟ್ ಬಳಕೆದಾರರ ಸಂಖ್ಯೆ ಹೆಚ್ಚಾಗುತ್ತಿದೆ. ಜನರು ತಮ್ಮ ಜೇಬು ಖಾಲಿ ಎಂದು ಹೇಳಿದರೂ ಮೊಬೈಲ್‌ನಲ್ಲಿ ದುಡ್ಡು ಅಡಗಿರುತ್ತದೆ ಎಂಬುದು ಎಲ್ಲರಿಗೂ ತಿಳಿದಿದೆ. ಕೆಎಸ್‌ಆರ್‌ಟಿಸಿ ಬಸ್‌ಗಳಲ್ಲಿ 'ಚಿಲ್ಲರೆ' ವಿಚಾರಕ್ಕೆ ಜಗಳ ಆಗುವುದನ್ನು ತಪ್ಪಿಸಲು ನಿಗಮ ಮೊದಲ ಹೆಜ್ಜೆ ಇಟ್ಟಿದೆ. ಬಿಎಂಟಿಸಿ, ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಬಳಿಕ ಕೆಎಸ್‌ಆರ್‌ಟಿಸಿ ತನ್ನ ಆಯ್ದ ಬಸ್‌ಗಳಲ್ಲಿ ಟಿಕೆಟ್ ಪಡೆಯಲು ಡಿಜಿಟಲ್ ಪೇಮೆಂಟ್ ವ್ಯವಸ್ಥೆ ಜಾರಿಗೆ ತಂದಿದೆ. ಸದ್ಯ ಕೆಲವು ಬಸ್‌ಗಳಲ್ಲಿ ಮಾತ್ರ ಈ ಸೌಲಭ್ಯವಿದೆ. ಹಂತ ಹಂತವಾಗಿ ಎಲ್ಲಾ ಮಾದರಿ ಬಸ್‌ಗಳಲ್ಲಿ ಈ ಸೌಲಭ್ಯ ಜಾರಿಗೊಳಿಸಲು ಕೆಎಸ್‌ಆರ್‌ಟಿಸಿ ಮುಂದಾಗಿದೆ. ಕ್ಯುಆರ್ ಕೋಡ್ ಸ್ಕ್ಯಾನ್ ಮಾಡಿ: ಕೆಎಸ್‌ಆರ್‌ಟಿಸಿ ಬಸ್‌ಗಳಲ್ಲಿ ಸಂಚಾರ ನಡೆಸುವಾಗ ಜೇಬಿನಲ್ಲಿ ಹಣವಿಲ್ಲದಿದ್ದರೂ ಇನ್ನು ಮುಂದೆ ಕ್ಯೂಆರ್ ಕೋಡ್ ಸ್ಕ್ಯಾನ್ ಮಾಡಿ ಟಿಕೆಟ್ ಪಡೆಯಬಹುದು. ಇದರಿಂದಾಗಿ ಜನರು ಹಣ ತರುವುದು ಮರೆತರೂ ಟಿಕೆಟ್ ಪಡೆಯಲು ಅನುಕೂಲವಾಗಲಿದೆ. ಅಲ್ಲದೇ ಚಿಲ್ಲರೆ ವಿಚಾರಕ್ಕೆ ಬಸ್‌ಗಳಲ್ಲಿ ಆಗುವ ವಾಗ್ವಾದಕ್ಕೆ ತಡೆ ಬೀಳಲಿದೆ.

## ತುಂತುರು ಮಳೆಯ ನಡುವೆ ಬೆಂಗಳೂರಿನಲ್ಲಿ ಮಂಜಿನ ಮುಂಜಾನೆ! ಚಳಿಗಾಲ ಆರಂಭ

• **ಉದಯವಾಹಿನಿ, ಬೆಂಗಳೂರು**

ಇತ್ತೀಚೆಗೆ ಬೆಂಗಳೂರು ವಾತಾವರಣ ಬದಲಾಗುತ್ತಿದೆ. ದಿನಕಳೆದಂತೆ ಬೆಳ್ಳಂಬೆಳಗ್ಗೆ ಮಂಜು ಹೆಚ್ಚಾಗುತ್ತಿದೆ. ಬೆಂಗಳೂರಿನಲ್ಲಿ ಆಗಾಗ ಆಗುವ ಸಾಧಾರಣ ಮಳೆ ಹಾಗೂ ಬದಲಾಗುತ್ತಿರುವ ವಾತಾವರಣ ಕಣ್ಣಿಗೆ ಮಾತ್ರವಲ್ಲದೆ ಮನಸ್ಸಿಗೂ ಹಿತ ನೀಡುತ್ತಿದೆ.ತುಂತುರು ಮಳೆಯ ನಡುವೆ ಬೆಂಗಳೂರಿನಲ್ಲಿ ಮಂಜಿನ ಮುಂಜಾನೆ ಚಳಿಗಾಲದ ಆರಂಭವನ್ನು ಸೂಚಿಸಿದೆ. ಹೌದು.. ನಗರದಲ್ಲಿ ಕಳೆದೆರೆಡು ದಿನಗಳಿಂದ ಮುಂಜಾನೆಯಲ್ಲಿ ಮಂಜು ಹೆಚ್ಚಾಗುತ್ತಿದೆ. ಭಾನುವಾರ ರಾತ್ರಿ ನಗರದಲ್ಲಿ ಅಲ್ಲಲ್ಲಿ ಸಾಧಾರಣ ಮಳೆಯಾದರೆ ಬೆಳಗ್ಗೆ ಮಂಜು ಕವಿದಿರುವುದು ಗೋಚರಿಸಿದೆ. ಜೊತೆಗೆ ನಗರದಲ್ಲಿ ಮುಂದಿನ ಕೆಲ ದಿನಗಳವರೆಗೆ ಮೋಡ ಕವಿದ ವಾತಾವರಣ ಇರಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಬೆಂಗಳೂರಿನಲ್ಲಿ ನವೆಂಬರ್ 10 ರಂದು ಹೆಚ್ಚಿನ ಮಳೆಯಾಗಲಿದೆ ಎಂದು ನಿರೀಕ್ಷಿಸಲಾಗಿತ್ತು. ಆದರೆ ನಿರೀಕ್ಷೆಯಂತೆ ಮಳೆಯಾಗಿಲ್ಲ. ಐಎಂಡಿ ಮುನ್ಸೂಚನೆಯ ಪ್ರಕಾರ, ಬೆಂಗಳೂರಿನಲ್ಲಿ ನವೆಂಬರ್ 15 ರವರೆಗೆ ಮೋಡ ಕವಿದ ವಾತಾವರಣವಿರುತ್ತದೆ. ಗರಿಷ್ಠ ತಾಪಮಾನವು 28 ರಿಂದ 29 ಡಿಗ್ರಿ ಸೆಲ್ಸಿಯಸ್ ಇರುತ್ತದೆ. ಕನಿಷ್ಠ ತಾಪಮಾನ 19 ಮತ್ತು 20 ರ ನಡುವೆ ನೆಲೆಸಲಿದೆ ಎಂದು ಐಎಂಡಿ ತಿಳಿಸಿದೆ. ಬಿಟಿಎಂ ಲೇಔಟ್, ಎಚ್‌ಬಿಆರ್ ಲೇಔಟ್ ಮತ್ತು ಬಾಣಸವಾಡಿ ಸೇರಿದಂತೆ ನಗರದ ಹಲವು ಪ್ರದೇಶಗಳಲ್ಲಿ ಭಾನುವಾರ ಬೆಳಗಿನ ಜಾವ 1.30ರವರೆಗೆ ತುಂತುರು ಮಳೆಯಾಗಿದೆ.

## ಗ್ಯಾರಂಟಿ ಟೀಕಿಸಿದವರಿಗೆ ಡಿಕೆಶಿ ಪತ್ರ, ಆಹ್ವಾನ

• **ಉದಯವಾಹಿನಿ, ಬೆಂಗಳೂರು**



ಕರ್ನಾಟಕದ ಗ್ಯಾರಂಟಿ ಯೋಜನೆಗಳ ಬಗ್ಗೆ ಸುಳ್ಳು ಆರೋಪ ಮಾಡುತ್ತಿರುವ ನಾಯಕರು ರಾಜ್ಯಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸುವಂತೆ ಆಹ್ವಾನ ನೀಡುತ್ತಿದ್ದು, ಅವರಿಗಾಗಿ 30 ವಿಶೇಷ ಬಸ್ ಹಾಗೂ ವಿಮಾನ ಪ್ರಯಾಣ ವ್ಯವಸ್ಥೆ ಮಾಡಲಾಗುತ್ತಿದೆ. ನಮ್ಮ ರಾಜ್ಯದ 30 ಜಿಲ್ಲೆಗಳಿಗೂ ಭೇಟಿ ನೀಡಲಿ, ನಮ್ಮ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷರು, ಉಪಾಧ್ಯಕ್ಷರ ದೂರವಾಣಿ ಸಂಖ್ಯೆಗಳನ್ನು ಒದಗಿಸಿ ಪತ್ರ ಬರೆಯುತ್ತಿದ್ದೇನೆ ಎಂದು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಚುನಾವಣೆಗಳಲ್ಲಿ ಸುಳ್ಳೇ ಬಿಜೆಪಿಯ ಪ್ರಬಲ ಅಸ್ತ್ರವಾಗಿದೆ. ಹೀಗಾಗಿ ಪ್ರಧಾನಮಂತ್ರಿಯಂತಹ ಉನ್ನತ ಹುದ್ದೆಯಲ್ಲಿರುವವರು ಆಧಾರರಹಿತ ಸುಳ್ಳು ಆರೋಪ ಮಾಡುತ್ತಿದ್ದಾರೆ ಎಂದು ಹೇಳಿದರು.ಪ್ರಧಾನಮಂತ್ರಿಗಳು ರಾಜಕೀಯ ಆರೋಪ ಮಾಡುತ್ತಿದ್ದಾರೆ. ಅವರು ಈ ಆರೋಪಗಳನ್ನು ಸಾಬೀತು ಪಡಿಸಲಿ. ನಾವು ಯಾವುದೇ ಶಿಕ್ಷೆಗೆ ಬೇಕಾದರೂ ಗುರಿಯಾಗುತ್ತೇವೆ ಎಂದ ಅವರು ಕೇಂದ್ರ ಸಚಿವರುಗಳು ಯಾವ ಯಾವ ಚುನಾವಣೆಗೆ ಎಷ್ಟೆಷ್ಟು ಹಣ ಸಂಗ್ರಹಿಸುತ್ತಿದ್ದಾರೆ ಎಂದು ನನಗೂ ಗೊತ್ತಿದೆ. ಉನ್ನತ ಹುದ್ದೆಯಲ್ಲಿರುವವರು ಆಧಾರವಿಲ್ಲದೆ ಆರೋಪ ಮಾಡಬಾರದು ಎಂದರು.

ಮೋದಿ ಅವರು ಪದೇ ಪದೇ ಕರ್ನಾಟಕದ ಪ್ರಸ್ತಾಪ ಮಾಡುತ್ತಿರುವುದರಿಂದ ಏನೂ ಆಗುವುದಿಲ್ಲ, ಜನ ಈಗಾಗಲೇ ಅವರಿಗೆ ಉತ್ತರ ನೀಡಿದ್ದಾರೆ. ದೇಶದಲ್ಲಿ ಕಾಂಗ್ರೆಸ್ ಹಾಗೂ ಇಂಡಿಯಾ ಮೈತ್ರಿಕೂಟ ತನ್ನ ಶಕ್ತಿ ಹೆಚ್ಚಿಸಿಕೊಳ್ಳುತ್ತಿದೆ ಎಂಬ ಭಯ ಶುರುವಾಗಿದೆ ಎಂದು ತಿಳಿಸಿದರು.

## ಮದುವೆ ಆಮಂತ್ರಣ ಪತ್ರಿಕೆಯಲ್ಲಿ ಮೋದಿಗೆ ಮತ ಯಾಚನೆ

• **ಉದಯವಾಹಿನಿ, ಬೆಂಗಳೂರು**



ಮದುವೆ ಆಮಂತ್ರಣ ಪತ್ರಿಕೆಯಲ್ಲಿ ಪ್ರಧಾನ ಮಂತ್ರಿ ನರೇಂದ್ರ ಮೋದಿಯವರಿಗೆ ಮತಯಾಚಿಸಿದ್ದ ಪ್ರಕರಣಕ್ಕೆ ಸಂಬಂಧಪಟ್ಟಂತೆ ಕೇಸ್ ದಾಖಲಾಗಿತ್ತು. ಫ್ಲೈಯಿಂಗ್ ಸ್ಕ್ವಾಡ್ ದಾಖಲಿಸಿದ್ದ ಕೇಸ್ ರದ್ದು ಕೋರಿ ಅರ್ಜಿ ಸಲ್ಲಿಸಲಾಗಿತ್ತು. ಅರ್ಜಿ ವಿಚಾರಣೆ ನಡೆಸಿದ ಬಳಿಕ ನೀತಿ ಸಂಹಿತೆಗಿಂತ ಮೊದಲು ಆಹ್ವಾನಪತ್ರಿಕೆ ಮುದ್ರಣ ಹಿನ್ನೆಲೆ ಕೇಸ್‌ಗೆ ತಡೆಯಾಜ್ಞೆ ನೀಡಿ ಹೈಕೋರ್ಟ್ ಆದೇಶ ಹೊರಡಿಸಿದೆ.

**ಪ್ರಕರಣಕ್ಕೆ ತಡೆಯಾಜ್ಞೆ ನೀಡಿದ ಹೈಕೋರ್ಟ್!**

ಹೌದು ದಕ್ಷಿಣ ಕನ್ನಡ ಜಿಲ್ಲೆಯವರಾದ ಶಿವಪ್ರಸಾದ್ ಅವರ ವಿವಾಹ ಆಹ್ವಾನ ಪತ್ರಿಕೆ ಯಲ್ಲಿ ಪ್ರಧಾನಿ ಮೋದಿಗೆ ಮತ ಯಾಚಿಸಿದ್ದಕ್ಕೆ ಚುನಾವಣಾಧಿಕಾರಿಗಳು ಪ್ರಕರಣ ದಾಖಲಿಸಿದ್ದರು.

ಆದರೆ, ಆಹ್ವಾನ ಪತ್ರಿಕೆ ನೀತಿ ಸಂಹಿತೆ ಜಾರಿಗೆ ಮೊದಲು ಮುದ್ರಣವಾಗಿದ್ದ ಕಾರಣ ಹೈಕೋರ್ಟ್ ಕೇಸ್‌ಗೆ ತಡೆಯಾಜ್ಞೆ ನೀಡಿ ಆದೇಶ ಹೊರಡಿಸಿದೆ.

ಮದುಮಗ ಶಿವಪ್ರಸಾದ್ ಅವರು ತಮ್ಮ ವಿವಾಹದ ಆಹ್ವಾನ ಪತ್ರಿಕೆಯಲ್ಲಿ 'ಮೋದಿಗೆ ಮತ ಹಾಕಿದರೆ ನನಗೆ ಗಿಫ್ಟ್ ನೀಡಿದಂತೆ' ಎಂದು ಮುದ್ರಿಸಿದ್ದರು. ಇದು ಚುನಾವಣೆ ನೀತಿ ಸಂಹಿತೆ ಉಲ್ಲಂಘನೆ ಮಾಡಲಾಗಿದೆ ಎಂದು ವರನ ವಿರುದ್ಧ ಏಪ್ರಿಲ್ 17ರಂದು ಚುನಾವಣಾ ನೋಡಲ್ ಅಧಿಕಾರಿಗಳಿಗೆ ದೂರು ಬಂದಿತ್ತು. ನಂತರ ಚುನಾವಣಾಧಿಕಾರಿಗಳು ನ್ಯಾಯಾಲಯಕ್ಕೆ ಈ ಬಗ್ಗೆ ವರದಿ ಸಲ್ಲಿಸಿ ಮದುಮಗನ ವಿರುದ್ಧ ಉಪ್ಪಿನಂಗಡಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿತ್ತು.ಮದುಮಗ ಪರ ವಕೀಲ ಎಂ.ವಿನೋದ್ ಕುಮಾರ್ ಕೇಸ್ ರದ್ದು ಕೋರಿ ಅರ್ಜಿ ಸಲ್ಲಿಸಿದ್ದರು.

ಮಾರ್ಚ್ 1ರಂದು ಮದುವೆ ಆಹ್ವಾನ ಪತ್ರಿಕೆ ಮುದ್ರಣವಾಗಿದೆ. ಆದರೆ ಚುನಾವಣಾ ನೀತಿಸಂಹಿತೆ ಮಾರ್ಚ್ 16ರಂದು ಜಾರಿಯಾಗಿದೆ. ಹೀಗಾಗಿ ಕೇಸ್ ರದ್ದು ಮಾಡುವಂತೆ ವಕೀಲ ಎಂ.ವಿನೋದ್ ಕುಮಾರ್ ಮನವಿ ಮಾಡಿದರು. ವಾದವನ್ನು ಆಲಿಸಿದ ಹೈಕೋರ್ಟ್ ಕೇಸ್‌ಗೆ ತಡೆಯಾಜ್ಞೆ ನೀಡಿದೆ.

## ರಾಜ್ಯ ಸರ್ಕಾರ ರಾಜ್ಯಪಾಲರ ಮಧ್ಯೆ ಮತ್ತೆ ಸಂಘರ್ಷ!

• **ಉದಯವಾಹಿನಿ, ಬೆಂಗಳೂರು**

ಸಿಎಂ ಸಿದ್ದರಾಮಯ್ಯ ಅವರು ಮುಡಾದಿಂದ ಅಕ್ರಮ ನಿವೇಶನ ಪಡೆದಿದ್ದಾರೆ ಎಂಬ ದೂರಿನ ಮೇರೆಗೆ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿದ್ದಾಗ ನಡೆದಿದ್ದ ಸಂಘರ್ಷವು ಇದೀಗ ಮತ್ತೆ ಮುಂದುವರಿದಿದೆ. ಏಕೆಂದರೆ ಹೈಕೋರ್ಟ್ ತೀರ್ಪು ವಿಚಾರದಲ್ಲಿ ನ್ಯಾಯಾಂಗ ನಿಂದನೆ ಆಗಿದೆ ಎಂದು ಸಚಿವರೊಬ್ಬರು ಹೇಳಿದ್ದರು.

ಈ ಹೇಳಿಕೆಗೆ ಸಂಬಂಧಿಸಿದಂತೆ ರಾಜ್ಯಪಾಲರು ಸರ್ಕಾರಕ್ಕೆ ಮಹತ್ವದ ಸೂಚನೆ ನೀಡಿದ್ದಾರೆ. ಹೌದು...ಮುಡಾ ಪ್ರಕರಣದಲ್ಲಿ ಸಿಎಂ ಸಿದ್ದರಾಮಯ್ಯ ವಿರುದ್ಧ ತನಿಖೆಗೆ ರಾಜ್ಯಪಾಲರು ನೀಡಿದ್ದ ಅನುಮತಿಯನ್ನು ಹೈಕೋರ್ಟ್ ಎತ್ತಿ ಹಿಡಿದಿತ್ತು. ಅದಾದ ಬಳಿಕ ಇದೊಂದು ರಾಜಕೀಯ ಪ್ರೇರಿತ ತೀರ್ಪು ಎಂದು ಸಿಎಂ ಸಿದ್ದರಾಮಯ್ಯ ಆಪ್ತ ಬಣದಲ್ಲಿ ಗುರುತಿಸಿಕೊಂಡಿರುವ ಸಚಿವ ಜಮೀರ್ ಅಹ್ಮದ್ ಖಾನ್ ಅವರು ಹೇಳಿದ್ದರು. ಇದೀಗ ಅವರ ವಿರುದ್ಧ ಕ್ರಮ ಕೈಗೊಳ್ಳುವಂತೆ ರಾಜ್ಯಪಾಲ ಥಾವರಚೆಂದ್ ಗೆಹ್ಲೋತ್ ಅವರು ರಾಜ್ಯ ಸರ್ಕಾರಕ್ಕೆ ಸೂಚನೆ ನೀಡಿದ್ದಾರೆ.



ಉದಯವಾಹಿನಿ ಚಿತ್ರ

ಇದೆಲ್ಲ ನೋಡಿದರೆ ರಾಜ್ಯ ಸರ್ಕಾರ ವರ್ಸಸ್ ರಾಜ್ಯಪಾಲ ಎಂಬಂತಹ ವಾತಾವರಣ ಮತ್ತೆ ಮುಂದುವರಿಬಹುದು ಎಂಬತಾಗಿದೆ. ರಾಜ್ಯಪಾಲರು ವಸತಿ ಮತ್ತು ವಕ್ಫ್ ಸಚಿವ ಜಮೀರ್ ಅಹ್ಮದ್ ಖಾನ್ ಅವರ ವಿರುದ್ಧ ಕಾನೂನು ಪ್ರಕಾರ ಅಗತ್ಯ ಕ್ರಮ ಕೈಗೊಳ್ಳುವಂತೆ ಹೈಕೋರ್ಟ್ ಅಡ್ವೋಕೇಟ್ ಜನರಲ್ ಅವರಿಗೆ ಸೂಚನೆ ನೀಡಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಸಂಬಂಧಿಸಿದ ಮುಡಾ ವಿಚಾರದಲ್ಲಿ ತೀರ್ಪು ಪ್ರಕಟವಾದ ಬಳಿಕ ಇದು ರಾಜಕೀಯ ಪ್ರೇರಿತ ತೀರ್ಪು ಎಂದು ಸಚಿವರು ಹೇಳಿದ್ದರು. ಅವರ ವಿರುದ್ಧ ಟಿ.ಜೆ.ಅಬ್ರಾಹಿಂ ಅವರು ರಾಜ್ಯಪಾಲರಿಗೆ ದೂರು ನೀಡಿದ್ದರು. ಇದಾದ ಬಳಿಕ 'ವಿಪಕ್ಷಗಳು ಹೈಕೋರ್ಟ್ ತೀರ್ಪಿನ ಬಗ್ಗೆ ರಾಜಕೀಯ ಮಾಡುತ್ತವೆ ಎಂದು ನಾನು ಹೇಳಿದ್ದೇನೆ. ನ್ಯಾಯಾಂಗ ನಿಂದನೆ ಮಾಡಿಲ್ಲ. ತಪ್ಪಾಗಿದ್ದರೆ ಕ್ಷಮೆ ಕೇಳುವೆ' ಎಂದು ಸ್ಪಷ್ಟನೆ ನೀಡಿದ್ದರು. ನ್ಯಾಯಾಂಗ ನಿಂದನೆ ಮಾಡಿರುವ ಸಚಿವರ ವಿರುದ್ಧ ಮೊಕದ್ದಮೆ ದಾಖಲಿಸಿ ಸೂಕ್ತ ಕ್ರಮ ಕೈಗೊಳ್ಳುವಂತೆ ಹೈಕೋರ್ಟ್ ಅಡ್ವೋಕೇಟ್ ಜನರಲ್ ಅವರಿಗೆ ದೂರು ನೀಡಿದ್ದೆವು ಆದರೆ ಕ್ರಮ ಕೈಗೊಂಡಿಲ್ಲ. ನ್ಯಾಯಾಂಗ ಸಮಗ್ರತೆ ಪ್ರಶ್ನಿಸುವ ಜಮೀರ್ ಅಹ್ಮದ್ ಅವರ ವಿರುದ್ಧ ಕ್ರಮಕ್ಕೆ ಅಡ್ವೋಕೇಟ್ ಜನರಲ್ ಅವರಿಗೆ ಸೂಚಿಸುವಂತೆ ಕೋರಿ ರಾಜ್ಯಪಾಲರಿಗೆ ದೂರು ನೀಡಲಾಗಿದೆ.

## ಶ್ಯೂರಿಟಿ ಕೊಟ್ಟು ಜೈಲಿಂದ ಬಿಡಿಸಿದ್ದ ಆರೋಪಿಯಿಂದ ಜೋಡಿ ಕೊಲೆ!

• **ಉದಯವಾಹಿನಿ, ಬೆಂಗಳೂರು**

ಇತ್ತೀಚೆಗೆ ನಗರದ ಹೊರವಲಯದಲ್ಲಿ ನಡೆದಿದ್ದ ಜೋಡಿ ಕೊಲೆ ಪ್ರಕರಣಕ್ಕೆ ಸ್ಫೋಟಕ ಟ್ವಿಸ್ಟ್ ಸಿಕ್ಕಿದೆ. ಡಬಲ್ ಮರ್ಡರ್ ಮಾಡಿರುವ ಆರೋಪಿಯನ್ನು ಈ ಹಿಂದೆ ಪ್ರಕರಣವೊಂದರಲ್ಲಿ ಸ್ಯಾಂಡಲ್‌ವುಡ್ ನಟ ದುನಿಯಾ ವಿಜಯ್ ಜೈಲಿಂದ ಬಿಡಿಸಿದ್ದರು ಎಂಬ ಮಾಹಿತಿ ಹೊರಬಿದ್ದಿದೆ.

ಹೌದು ಆರೋಪಿಯನ್ನು ಸುರೇಶ್ ಎಂದು ಗುರುತಿಸಲಾಗಿದ್ದು, ದುನಿಯಾ ವಿಜಯ್ ದಸೆಯಿಂದ ಜೈಲಿನಿಂದ ಹಿರ ಬಂದು, ಮಾರ್ಕೆಟ್‌ನಲ್ಲಿ ಕೊತ್ತಂಬರಿ ಸೊಪ್ಪು ಮಾರಾಟ ಮಾಡಿ ಜೀವನ ಸಾಗಿಸುತ್ತಿದ್ದ. ಬಳಿಕ ಬಸ್ ಸರ್ವೀಸ್ ಶೆಡ್ ನಲ್ಲೂ ಕೆಲಸ ಮಾಡಿಕೊಂಡು ಇದ್ದ. ಈ ವೇಳೆ ಗುಜರಿ ಮಾರುವ ವಿಚಾರಕ್ಕೆ ಗಲಾಟೆಯಾಗಿದೆ.

ಕೊಲೆಯಾದ ನಾಗೇಶ್ ಮತ್ತು ಮಂಜುನಾಥ್, 'ನೀನು ಕಳ್ಳ, ಕೊಲೆಗಾರ' ಅಂತಾ ಹೀಯಾಳಿಸಿದ್ದರು. ನವೆಂಬರ್ 8 ರಂದು ಈ ಜೋಡಿ ಕೊಲೆಯಾಗಿತ್ತು. ಕೊಲೆ ಮಾಡಿ, ಸುರೇಶ ಎಸ್ಕೇಪ್ ಆಗಿದ್ದ. ಕೊಲೆಯಾದ ನಾಗೇಶ್ ಹಾಗೂ ಮಂಜುನಾಥ, ಸದಾ ಸುರೇಶನನ್ನು ಹೀಯಾಳಿಸುತ್ತಿದ್ದರಂತೆ. ನೀನು ಕುಳ್ಳ, ನಿನ್ನ ಮೇಲೆ ಅಪ್ಪು ಪೊಲೀಸ್ ಕೇಸುಗಳಿವೆ ಎಂದು.



ಉದಯವಾಹಿನಿ ಚಿತ್ರ

ಕುಳ್ಳ ಎಂದು ರೇಗಿಸುತ್ತಿದ್ದ ವಿಚಾರಕ್ಕೆ ಕೋಪಗೊಂಡ ಸುರೇಶ್ ಇಬ್ಬರಿಗೂ ರಾಡ್‌ನಿಂದ ಹೊಡೆದಿದ್ದಾನೆ.

ನಂತರ ಅಲ್ಲಿಂದ ಪರಾರಿಯಾಗಿದ್ದಾನೆ. ಇದೀಗ ಮತ್ತೆ ಆತನನ್ನು ಅರೆಸ್ಟ್ ಮಾಡಿದ್ದಾರೆ. ಬಾಗಲೂರು ಡಬಲ್ ಮರ್ಡರ್ ಆರೋಪಿ ಸುರೇಶ್‌ಗೆ ಈ ಹಿಂದೆ ಪ್ರಕರಣವೊಂದರಲ್ಲಿ ಶ್ಯೂರಿಟಿ ಹಣ ನೀಡಿ ದುನಿಯಾ ವಿಜಯ್ ಬಿಡಿಸಿದ್ದರು.

ಈ ಹಿಂದೆ ಡಬಲ್ ಮರ್ಡರ್ ಕೇಸ್ ಹಾಗೂ ರೇಪ್ ಕೇಸಲ್ಲಿ ಆರೋಪಿ ಸುರೇಶ್ ಜೈಲು ಸೇರಿದ್ದ. 10 ವರ್ಷ ಶಿಕ್ಷೆ ಅನುಭವಿಸಿದ್ದ ಅಪರಾಧಿಗೆ ಶ್ಯೂರಿಟಿ ಹಣ ನೀಡಲು ಯಾರೂ ಇರಲಿಲ್ಲ. ಈ ಸಮಯದಲ್ಲಿ ಒಂದಷ್ಟು ಅಪರಾಧಿಗಳಿಗೆ ತಲಾ ಮೂರು ಲಕ್ಷದಂತೆ ಶ್ಯೂರಿಟಿ ಹಣವನ್ನು ನಟ ವಿಜಯ್ ಕಟ್ಟಿದ್ದರು. ಈ ವೇಳೆ ಸುರೇಶ್‌ಗೂ ಕೂಡ ಮೂರು ಲಕ್ಷ ಶ್ಯೂರಿಟಿ ಹಣ ನೀಡಿ ಜೈಲಿಂದ ಬಿಡುಗಡೆಗೊಳಿಸಿದ್ದರು.

## ನವೆಂಬರ್13ರಂದು ವೇತನ ಸಹಿತ ರಜೆ, ಆದೇಶ

• **ಉದಯವಾಹಿನಿ, ಬೆಂಗಳೂರು**

ಮೂರು ವಿಧಾನಸಭಾ ಕ್ಷೇತ್ರಗಳ ಉಪ ಚುನಾವಣೆಗೆ ಮತದಾನ ನವೆಂಬರ್ 13ರಂದು ನಡೆಯಲಿದೆ. ಬಹಿರಂಗ ಚುನಾವಣಾ ಪ್ರಚಾರಕ್ಕೆ ಸಂಜೆ 6 ಗಂಟೆಗೆ ತೆರೆ ಬೀಳಲಿದೆ. ಸಂಡೂರು, ಚನ್ನಪಟ್ಟಣ, ಶಿಗ್ಗಾವಿ ಕ್ಷೇತ್ರದಲ್ಲಿ ಮತದಾನ ನಡೆಯಲಿದ್ದು, ನವೆಂಬರ್ 23ರ ಶನಿವಾರ ಮತ ಎಣಿಕೆ ನಡೆಯಲಿದೆ. ಮೂರು ಕ್ಷೇತ್ರದಲ್ಲಿ ಮತದಾನ ಮಾಡಲು ಅನುಕೂಲ ವಾಗುವಂತೆ ವೇತನ ಸಹಿತ ರಜೆ ಘೋಷಣೆ ಮಾಡಿ ಅಧಿಸೂಚನೆ ಹೊರಡಿಸಲಾಗಿದೆ. ಈ ಕುರಿತು ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ, ಅವರ ಹೆಸರಿನಲ್ಲಿ ಸರ್ಕಾರದ ಅಧೀನ ಕಾರ್ಯದರ್ಶಿ-1 (ಪ) ಸಿಆಸು ಇಲಾಖೆ (ರಾಜ್ಯ ಶಿಷ್ಟಾಚಾರ) ಅಧಿಸೂಚನೆ ಹೊರಡಿಸಿದ್ದಾರೆ.

**ಅಧಿಸೂಚನೆ ವಿವರ:** ಅಧಿಸೂಚನೆಯಲ್ಲಿ ದಿನಾಂಕ 13.11.2024ರ ಬುಧವಾರದಂದು ಶಿಗ್ಗಾವಿ, ಸಂಡೂರು, ಚನ್ನಪಟ್ಟಣ ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆ ನಡೆಯಲಿದ್ದು, ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿರುವ ಎಲ್ಲಾ ರಾಜ್ಯ ಸರ್ಕಾರಿ ಕಛೇರಿಗಳಿಗೆ, ಶಾಲಾ ಕಾಲೇಜುಗಳಿಗೆ (ಅನುದಾನಿತ ಶಿಕ್ಷಣ ಸಂಸ್ಥೆಗಳು ಒಳಗೊಂಡಂತೆ) ರಾಷ್ಟ್ರೀಕೃತ ಬ್ಯಾಂಕುಗಳು, ಜೀವವಿಮಾ ನಿಗಮ, ಹಣಕಾಸು ಸಂಸ್ಥೆಗಳು ಇನ್ನಿತರೇ ಔದ್ಯಮಿಕ ಸಂಸ್ಥೆಗಳಲ್ಲಿ ಖಾಯಂ ಆಗಿ ಅಥವಾ ದಿನಗೂಲಿ ಮೇಲೆ ಕೆಲಸ ನಿರ್ವಹಿಸುತ್ತಿರುವ ಎಲ್ಲಾ ಅರ್ಹ ಮತದಾರರಿಗೆ ಸೀಮಿತವಾದಂತೆ, ಮತದಾನ ಮಾಡಲು ಅನುಕೂಲವಾಗುವಂತೆ Negotiable Instrument Act 1881, ಕಲಂ 25ರಡಿ, Representation of People Act, 1951 ಕಲಂ 135 ಬಿ ಅಡಿಯಲ್ಲಿನ ಎಲ್ಲಾ ಉಪಬಂದಗಳನ್ವಯ ಒಂದು ದಿನದ ವೇತನ ಸಹಿತ ರಜೆ ಮಂಜೂರು ಮಾಡಲು ಅಧಿಕಾರವುಳ್ಳ ಅಧಿಕಾರಿಗಳು ಮಂಜೂರು ಮಾಡತಕ್ಕದ್ದು ಎಂಬ ಷರತ್ತಿಗೊಳಪಟ್ಟು ಒಂದು ದಿನದ ವೇತನ ಸಹಿತ ರಜೆಯನ್ನು ನೀಡಲು ಆದೇಶಿಸಿದೆ ಎಂದು ಹೇಳಿದೆ.

# ನಿಖಿಲ್ ಗೆಲ್ಲಿಸುವ ಮೂಲಕ ಸಿದ್ದರಾಮಯ್ಯಗೆ ತಕ್ಕ ಪಾಠ ಕಲಿಸಿ

## ಯಡಿಯೂರಪ್ಪ ಆಕ್ರೋಶ , ಒಂದು ರಸ್ತೆ ಗುಂಡಿ ಮುಚ್ಚುವ ಯೋಗ್ಯತೆಯೂ ಈ ಸರ್ಕಾರಕ್ಕೆ ಇಲ್ಲ ಎಂದು ಕಿಡಿ

• **ಉದಯವಾಹಿನಿ, ಬೆಂಗಳೂರು**

ಚನ್ನಪಟ್ಟಣ ಕ್ಷೇತ್ರದಲ್ಲಿ ನಿಖಿಲ್ ಕುಮಾರಸ್ವಾಮಿ ಅವರನ್ನು ಗೆಲ್ಲಿಸುವ ಮೂಲಕ ಸಿಎಂ ಸಿದ್ದರಾಮಯ್ಯಗೆ ತಕ್ಕ ಪಾಠ ಕಲಿಸಬೇಕು ಎಂದು ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪ ಅವರು ಆಕ್ರೋಶ ವ್ಯಕ್ತಪಡಿಸಿದರು.

ಚನ್ನಪಟ್ಟಣದಲ್ಲಿ ನಡೆದ ನಿಖಿಲ್ ಪರ ಬೃಹತ್ ಪ್ರಚಾರ ಸಭೆಯಲ್ಲಿ ಭಾಷಣ ಮಾಡಿದ ಯಡಿಯೂರಪ್ಪ ಅವರು, ಬೊಂಬೆಗಳನಾಡಲ್ಲಿ ಕಾಂಗ್ರೆಸ್ ಕೈಗೊಂಬೆ ಸಿಪಿ ಯೋಗೇಶ್ವರ್ ಅವರು ಗೆಲ್ಲುವುದರಿಂದ ಉಪಯೋಗವಿಲ್ಲ. ಒಂದು ರಸ್ತೆ ಗುಂಡಿ ಮುಚ್ಚುವ ಯೋಗ್ಯತೆಯೂ ಈ ಸರ್ಕಾರಕ್ಕೆ ಇಲ್ಲ ಎಂದು ಕಿಡಿಕಾರಿದರು.



ಉದಯವಾಹಿನಿ ಚಿತ್ರ

**ಪರಿಷತ್ ಸದಸ್ಯ ರವಿ ಕುಮಾರ್ ಮನವಿ**

ಕರ್ನಾಟಕದಲ್ಲಿ ಭ್ರಷ್ಟಾಚಾರ ತಂಡವಾಡುತ್ತಿದೆ. ನಾನು ಭಾಗ್ಯಲಕ್ಷ್ಮಿ ಯೋಜನೆ ನಿಲ್ಲಿಸಿದ್ದಾರೆ. ಅನೇಕ ಜನಪರ ಯೋಜನೆಯನ್ನು ನಿಲ್ಲಿಸಿದ್ದಾರೆ. ಅವರಿಗೆ ಹಣ ಕೊಡುವ ಯೋಗ್ಯತೆ ಇಲ್ಲ.ಈ ಸರ್ಕಾರ ದಿವಾಳಿ ಆಗಿದೆ. ಮುಂದಿನ ದಿನಗಳು ಒಳ್ಳೆಯದಿದೆ. ನಿಖಿಲ್ ಅವರ ಗೆಲುವಿಗೆ ಮನೆ ಮನೆಗೆ ಹೋಗಿ ಪ್ರಚಾರ ಮಾಡಿ. ಪ್ರಾಮಾಣಿಕ ಕೆಲಸ ಮಾಡಿದರೆ ನಿಖಿಲ್ ಅವರು 25 ಸಾವಿರ ಹೆಚ್ಚಿನ ಮತಗಳಿಂದ ನಿಖಿಲ್ ಗೆಲ್ಲುತ್ತಾರೆ ಎಂದು ಯಡಿಯೂರಪ್ಪ ಕರೆ ನೀಡಿದರು.

ಕಾಲ ಬದಲಾಗಿದೆ, ಜನ ಎಲ್ಲವನ್ನು ಯೋಚನೆ ಮಾಡುತ್ತಾರೆ. ಕೇಂದ್ರದಲ್ಲಿ ದೇವೇಗೌಡರಿಗೆ ಮತ್ತು ಮೋದಿ ಅವರಿಗೆ ಯಾವಾ ರೀತಿ ಇದೇ ಇಲ್ಲರಿಗೂ ಗೊತ್ತು. ಈ ಕ್ಷೇತ್ರವನ್ನು ಗೆಲ್ಲುವುದಾರ ಮೂಲಕ ಸಿದ್ದರಾಮಯ್ಯಗೆ ಪಾಠವನ್ನು ಕಲಿಸಬೇಕು. ನಾಳೆ ಒಂದು ದಿನ ಮನೆ ಮನೆಗೆ ಹೋಗಿ ನಿಖಿಲ್ ಪರ ಮತಯಾಚನೆ ಮಾಡಿ. ನಿಮ್ಮ ಸೇವೆ ಮಾಡುವುದಕ್ಕೆ ಅವಕಾಶ ಮಾಡಿ ಎಂದು ಮಾಜಿ ಮುಖ್ಯಮಂತ್ರಿ ಬಿ ಎಸ್ ಯಡಿಯೂರಪ್ಪ ಅವರು ಮನವಿ ಮಾಡಿದರು.ಇನ್ನು ಈ ವೇಳೆ ವಿಧಾನ ಪರಿಷತ್ ಸದಸ್ಯ ರವಿ ಕುಮಾರ್ ಅವರು ಮಾತನಾಡಿ, ಎರಡು ಬಾರಿ ನಿಖಿಲ್ ಕುಮಾರಸ್ವಾಮಿ ಪೆಟ್ಟು ತಿಂದಿದ್ದಾರೆ. ಹಗಲು ದರೋಡೆ ಮಾಡುತ್ತಿರುವ ಕಾಂಗ್ರೆಸ್ ಸರ್ಕಾರ ವಿರುದ್ಧ ಸ್ಪರ್ಧೆಗೆ ಎದೆಗಾರಿಕೆ ಬೇಕು. ಆ ಎದೆಗಾರಿಕೆ ಇರುವ ನಾಯಕ ಬೇಕು ಅಂತ ದೇವೆಗೌಡರು, ಮೋದಿ ಹಾಗೂ ಕುಮಾರಸ್ವಾಮಿ ಅವರನ್ನು ನಿಖಿಲ್ ಕುಮಾರಸ್ವಾಮಿ ಅವರನ್ನು ನಿಲ್ಲಿಸಿದ್ದಾರೆ ಎಂದು ಹೇಳಿದರು.

ಯೋಗೇಶ್ವರ್ ಜಂಪಿಗ್ ಸ್ಟಾರ್. ಒಳ ಒಪ್ಪಂದವನ್ನು ಮುರಿಯುತ್ತೇವೆ. ಒಳ ಒಪ್ಪಂದದ ವಿರುದ್ಧ ನಡೆಯುತ್ತಿರುವ ಚುನಾವಣೆಯಲ್ಲಿ ನಿಖಿಲ್ ಕುಮಾರಸ್ವಾಮಿ ಗೆಲ್ಲಿಸಬೇಕು ನಿಮಗೆ ದೀರ್ಘ ದಂಡ ನಮಸ್ಕಾರ ಹಾಕಿ ಚನ್ನಪಟ್ಟಣ ಜನತೆಗೆ ಅವರು ಮನವಿ ಮಾಡಿದರು. ನಿಖಿಲ್ ಗೆದ್ದರೆ ನರೇಂದ್ರ ಮೋದಿ ಅವರಿಗೆ ಗೌರವ ಕೊಟ್ಟಂತೆ, ದೇವೇಗೌಡರು ಕಳೆದ ಒಂದು ವಾರದಿಂದ ನಿಖಿಲ್ ಕುಮಾರಸ್ವಾಮಿ ಪರವಾಗಿ ಮತಯಾಚನೆ ಮಾಡುತ್ತಿದ್ದಾರೆ. ನಿಖಿಲ್ ಕುಮಾರಸ್ವಾಮಿ ನಮ್ಮ ಬೂತ್ ನಲ್ಲಿ ನಿಖಿಲ್ ಕುಮಾರಸ್ವಾಮಿ ಹಾಗೂ ದೇವೇಗೌಡರನ್ನು ಗೆಲ್ಲಿಸ್ತೇವೆ, ಒಳ್ಳೆಯ ಲೀಡ್ ಕೊಡುತ್ತೇವೆ ಎಂದು ಹೇಳಿದರು.

> **ಎಲ್ಲಾ ಸಮಾಜದ ಜನರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳಿ. ಬಿಜೆಪಿ ಜೆಡಿಎಸ್ ಕಾರ್ಯಕರ್ತರು ಬೂತ್ ಮಟ್ಟದಲ್ಲಿ ಕೆಲಸ ಮಾಡಿ. ಕಾಡುಗೊಲ್ಲ ಜನಾಂಗದವರನ್ನು ಎಸ್ ಟಿ ಸಮುದಾಯಕ್ಕೆ ಸೇರಿಸಲು ದೇವೇಗೌಡರು ಪ್ರಯತ್ನಸುತ್ತಿದ್ದಾರೆ. ಬೆಸ್ತರು ಮತ್ತು ಗಂಗಾಮತ ಸಮಾಜದವರನ್ನ ಎಸ್ ಟಿ ಸೇರಿಸ್ತೇವೆ ಎಂದು ತಿಳಿಸಿದರು.**

> **ಬೆಸ್ತ ಸಮಾಜದ ಎಲ್ಲಾ ಮತಗಳನ್ನು ಜೆಡಿ ಎಸ್ ನಿಖಿಲ್ ಕುಮಾರಸ್ವಾಮಿಗೆ ಹಾಕಬೇಕು. ದೇವೇಗೌಡರು ಎಲ್ಲಾ ಸಮುದಾಯವನ್ನ ಮೇಲೆತ್ತಿದವ್ರು. ಒಕ್ಕಲಿಗ ಸಮಾಜದವ್ರು ಮನಸ್ಸು ಮಾಡಿದ್ರೆ ಎಲ್ಲಾ ಸಮುದಾಯದವರನ್ನ ಒಟ್ಟಿಗೆ ಸೇರಿಸಿ NDA ಅಭ್ಯರ್ಥಿಯನ್ನಗೆಲ್ಲಿಸ ಬೇಕೆಂದು ವಿಧಾನ ಪರಿಷತ್ ಸದಸ್ಯ ರವಿ ಕುಮಾರ್ ಅವರು ಮನವಿ ಮಾಡಿದರು.**

# ಉಪಚುನಾವಣೆ ಬಳಿಕ ಗೃಹಲಕ್ಷ್ಮಿ ಯೋಜನೆ ರದ್ದು?

## ಉಪಚುನಾವಣೆ ದೃಷ್ಟಿಯಿಂದ ಚನ್ನಪಟ್ಟಣ ಕ್ಷೇತ್ರದ ಮಹಿಳೆಯರ ಬ್ಯಾಂಕ್ ಖಾತೆಗಳಿಗೆ ಮಾತ್ರ ಹಣ ಜಮೆ

• **ಉದಯವಾಹಿನಿ, ಚನ್ನಪಟ್ಟಣ**

ರಾಜ್ಯ ಕಾಂಗ್ರೆಸ್ ಸರ್ಕಾರ ಖಜಾನೆಯನ್ನು ದಿವಾಳಿ ಎಬ್ಬಿಸಿದೆ. ಮಹಿಳೆಯರ ಬ್ಯಾಂಕ್ ಖಾತೆಗಳಿಗೆ ಗೃಹಲಕ್ಷ್ಮಿ ಹಣವಿಲ್ಲ, ಆದರೆ ಉಪಚುನಾವಣೆ ದೃಷ್ಟಿಯಿಂದ ಚನ್ನಪಟ್ಟಣ ಕ್ಷೇತ್ರದ ಮಹಿಳೆಯರ ಬ್ಯಾಂಕ್ ಖಾತೆಗಳಿಗೆ ಮಾತ್ರ ಹಣ ಜಮೆ ಮಾಡಿದ್ದಾರೆ ಎಂದು ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡ ಆರೋಪಿಸಿದರು.

ಕಾಂಗ್ರೆಸ್ ಸರ್ಕಾರ ಚುನಾವಣಾ ಅಕ್ರಮಗಳನ್ನು ಎಸಗುತ್ತಿದೆ. ಅದಕ್ಕೆ ಗ್ಯಾರಂಟಿ ಯೋಜನೆಗಳನ್ನು ಕೂಡ ಬಳಕೆ ಮಾಡಿಕೊಳ್ಳುತ್ತಿದೆ. ಈ ಸರ್ಕಾರ ದಿವಾಳಿಯಾಗಿದ್ದು, ಚುನಾವಣೆ ಮುಗಿದ ಮೇಲೆ ಹಣ ಜಮೆ ಮಾಡುವುದನ್ನು ಮತ್ತೆ ನಿಲ್ಲಿಸುತ್ತಾರೆ.

ಐದು ಗ್ಯಾರಂಟಿಗಳಲ್ಲಿ ಒಂದು ಗ್ಯಾರಂಟಿ ಕಸಿದುಕೊಂಡು ಹೋಗಿದ್ದಾರೆ ಎಂದು ಹೆಚ್ ಡಿ ದೇವೇಗೌಡರು ಹೇಳಿದರು.ನಿಖಿಲ್ ಅವರನ್ನು ವಿಧಾನಸೌಧಕ್ಕೆ ಕಳಿಸಿ. ಆ ಹುಡುಗ ನಿಮ್ಮ ಪರವಾಗಿ ದನಿ ಎತ್ತುತ್ತಾನೆ.

**ನಿಖಿಲ್ ಕುಮಾರಸ್ವಾಮಿ ಅವರು 2028ಕ್ಕೆ ಸ್ಪರ್ಧೆ ಮಾಡುತ್ತೇನೆ, ನಾನು ಪಕ್ಷ ಕಟ್ಟುತ್ತೇನೆ ಎಂದರು. ನಾಮಪತ್ರ ಸಲ್ಲಿಸುವ ಹಿಂದಿನ ದಿನ ಪ್ರಧಾನಿ ನರೇಂದ್ರ ಮೋದಿ, ನಡ್ಡಾ, ಅಮಿಶ್ ಶಾ ಅವರೆಲ್ಲರೂ ಸೇರಿ ನಿಖಿಲ್ ಕುಮಾರಸ್ವಾಮಿ ಅವರನ್ನು ನಿಲ್ಲಿಸಲು ತೀರ್ಮಾನ ಮಾಡಿದರು. ಈ ಯುವಕ ನಿಮ್ಮ ಮೊಮ್ಮಗನಿದ್ದ ಹಾಗೆ,ವಿಧಾನಸಭೆಗೆ ಆಯ್ಕೆ ಮಾಡಿ ಆಶೀರ್ವಾದ ಮಾಡಿ. ಕೈಮುಗಿದು ಪ್ರಾರ್ಥನೆ ಮಾಡುತ್ತೇನೆ. ನಮ್ಮ ಹೆಣ್ಣು ಮಕ್ಕಳು ಮನಸ್ಸು ಮಾಡಿದರೆ ನಿಖಿಲ್ ಕುಮಾರಸ್ವಾಮಿ ವಿಧಾನಸೌಧಕ್ಕೆ ಹೋಗುವುದು 100ಕ್ಕೆ 100 ಸತ್ಯ ಎಂದು ಮಾಜಿ ಪ್ರಧಾನಿಗಳು ಹೇಳಿದರು.**

ಇದರಲ್ಲಿ ನಿಮಗೆ ಯಾವುದೇ ಸಂಶಯ ಬೇಡ ಎಂದ



ಉದಯವಾಹಿನಿ ಚಿತ್ರ

ಅವರು, ನಾನು ಒಬ್ಬ ರೈತನ ಮಗ, ನೀವು ರೈತನ ಮಕ್ಕಳು. ಇಗ್ಗಲೂರು ಅಣೆಕಟ್ಟು ಕಟ್ಟಿಸಿದ್ದು ಈ ದೇವೇಗೌಡ, ಬದುಕಿದ್ದಾನೆ. ಹದಿನೇಳು ಕೆರೆಗಳಿಗೆ ನೀರು ಹರಿಸಿದ್ದ ವ್ಯಕ್ತಿಯನ್ನು ಭಗೀರಥ ಅಂತಾರೆ. ಈ ಅಣೆಕಟ್ಟು ಕಟ್ಟಿಲ್ಲ ಅಂದರೆ ನೀರು ಹರಿಸೋಕೆ ಸಾಧ್ಯ ಆಗುತ್ತಿತ್ತಾ? ಎಂದು ಹೆಚ್ ಡಿ ದೇವೇಗೌಡ್ರು ಕೇಳಿದರು. ಚನ್ನಪಟ್ಟಣ ಕ್ಷೇತ್ರದಲ್ಲಿ ಕುಮಾರಸ್ವಾಮಿ ಅವರು 1600 ಕೋಟಿಯಷ್ಟು ಅಭಿವೃದ್ಧಿ ಕೆಲಸ ಮಾಡಿದ್ದಾರೆ. ಈಗಿರುವ ಸರ್ಕಾರ ಸಣ್ಣಪುಟ್ಟ ಕೆಲಸ ಮಾಡುತ್ತಿದೆ. ಪ್ರತಿಗ್ರಾಮಕ್ಕೆ ನೀರಾವರಿ ಸೌಲಭ್ಯ ಕೊಡಬೇಕಾದ

### ಕರ್ನಾಟಕಕ್ಕೆ ಹಾಲಿನ ಡೈರಿ ತಂದಿದ್ದು ಯಾರು?

**ಚನ್ನಪಟ್ಟಣದಲ್ಲಿ ಎರಡು ಲಕ್ಷ ಲೀಟರ್ ಹಾಲು ಉತ್ಪಾದನೆ ಆಗುತ್ತದೆ. ಮಾಸಿಕ 80 ಲಕ್ಷ ತಾಲ್ಲೂಕಿಗೆ ಬರುತ್ತದೆ. ಕರ್ನಾಟಕಕ್ಕೆ ಹಾಲಿನ ಡೈರಿ ತಂದಿದ್ದು ಯಾರು? ಅದನ್ನು ತಂದ ಈ ದೇವೇಗೌಡ ಇನ್ನೂ ಬದುಕಿದ್ದೇನೆ. ಇಗ್ಗಲೂರು ಡ್ಯಾಂನಿಂದ ಎಲ್ಲರಿಗೂ ನೀರು ಸಿಗಲ್ಲ, ಅದಕ್ಕಾಗಿ ಹೈನುಗಾರಿಕೆ ಮಾಡಿ ಕೆಲವರು ಜೀವನ ಮಾಡುತ್ತಿದ್ದಾರೆ. ನಮ್ಮ ಹುಟ್ಟುಗುಣ ಬೇರೆಯವರಿಂದ ಕಿತ್ತುಕೊಳ್ಳುವುದಲ್ಲ. ನಮ್ಮದು ಕೊಡುವ ಕೈ. ಈ ಹಣ ಶಾಶ್ವತವಾಗಿ ಚನ್ನಪಟ್ಟಣಕ್ಕೆ ಬರುತ್ತಿದೆ ಎಂದು ಮಾಜಿ ಪ್ರಧಾನಿ ಹೆಚ್ ಡಿ ದೇವೇಗೌಡ್ರು ಹೇಳಿದರು.**

ಹಿನ್ನೆಲೆಯಲ್ಲಿ ಕುಮಾರಸ್ವಾಮಿ ಅವರು ಇಷ್ಟು ಹಣವನ್ನು ಕ್ಷೇತ್ರಕ್ಕೆ ಕೊಟ್ಟರು. ರಾಷ್ಟ್ರದ ಹಿತದೃಷ್ಟಿಯಿಂದ, ಮೋದಿ ಅವರ ಒತ್ತಾಸೆಯಿಂದ ಕುಮಾರಸ್ವಾಮಿ ಅವರು ದೆಹಲಿಗೆ ಹೋಗಿ ಸಚಿವರಾಗಿದ್ದಾರೆ ಎಂದು ಅವರು ಹೇಳಿದರು.

**ಮಹಿಳೆಯರಿಗೆ ಕಾದಿದ್ಯಾ ಬಿಗ್ ಶಾಕ್**

ಕುಮಾರಸ್ವಾಮಿ ಅವರು ಚನ್ನಪಟ್ಟಣ ಕ್ಷೇತ್ರಕ್ಕೆ ರಾಜೀನಾಮೆ ಕೊಟ್ಟ ಮೇಲೆ ಯಾರು ಅಭ್ಯರ್ಥಿಯಾಗಿ ನಿಲ್ಲಬೇಕು ಎಂದು ಚರ್ಚೆ ನಡೆಯಿತು. ಡಿ.ಕೆ.ಶಿವಕುಮಾರ್ ನಾನೇ ಅಭ್ಯರ್ಥಿ ಎಂದು ಹೇಳಿಕೊಂಡು ಓಡಾಡಿದರು. ಹಾಗಂತ ಎಲ್ಲರನ್ನೂ ನಂಬಿಸಿದರು. ನಾಮಪತ್ರ ಸಲ್ಲಿಸುವ ಒಂದು ದಿನಕ್ಕೆ ಮೊದಲು ಇದ್ದಕ್ಕಿದ್ದ ಹಾಗೆ ತಮ್ಮ ತೀರ್ಮಾನ ಬದಲಾಯಿಸಿ ಮತ್ತೊಬ್ಬ ಸ್ನೇಹಿತರನ್ನು ನಿಲ್ಲಿಸಿದ್ದಾರೆ. ಬಿಜೆಪಿಯಿಂದ ಅಭ್ಯರ್ಥಿಯನ್ನು ಹೈಜಾಕ್ ಮಾಡಿಕೊಂಡು ಹೋಗಿದ್ದಾರೆ ಎಂದು ಅವರು ಟೀಕಿಸಿದರು.

# ರಾಜ್ಯದ ಸೌಹಾರ್ದ ಸಹಕಾರ ಸಂಸ್ಥೆಗಳಲ್ಲಿ 2,650 ಕೋಟಿ ಅವ್ಯವಹಾರ: ಕೆ.ಎನ್.ರಾಜಣ್ಣ

• **ಉದಯವಾಹಿನಿ, ತುಮಕೂರು**

ರಾಜ್ಯದ ಸೌಹಾರ್ದ ಸಹಕಾರ ಸಂಸ್ಥೆಗಳಲ್ಲಿ ಸುಮಾರು 2,650 ಕೋಟಿ ಅವ್ಯವಹಾರವಾಗಿದೆ. ಸುಮಾರು 45 ಸೌಹಾರ್ದ ಸಹಕಾರ ಸಂಸ್ಥೆಗಳು ಗ್ರಾಹಕರ ಹಣ ಮರಳಿಸದ ಸ್ಥಿತಿಯಲ್ಲಿವೆ ಎಂದು ಸಹಕಾರ ಸಚಿವ ಕೆ.ಎನ್.ರಾಜಣ್ಣ ಹೇಳಿದ್ದಾರೆ ನಗರದಲ್ಲಿ ನಡೆದ ವೈಶ್ಯ ಕೋ-ಆಪರೇಟಿವ್ ಬ್ಯಾಂಕ್ ಶತಮಾನೋತ್ಸವ ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು, ಅನಗತ್ಯ ಸ್ಪರ್ಧೆಯಿಂದ ಇಂತಹ ಪರಿಸ್ಥಿತಿ ನಿರ್ಮಾಣವಾಗಿದೆ ಎಂದರು. ಹಲವಾರು ಬ್ಯಾಂಕ್ ವಿಲೀನವಾಗುತ್ತಿದ್ದು, ಇಂತಹ ಸಂದರ್ಭದಲ್ಲಿ ಸಹಕಾರ ಸಂಸ್ಥೆಗಳ ಅಸ್ತಿತ್ವ ಉಳಿಸಿಕೊಳ್ಳುವುದು ಸವಾಲಾಗಿ ಪರಿಣಮಿಸಿದೆ ಎಂದು ಆತಂಕ ವ್ಯಕ್ತಪಡಿಸಿದರು.



**ಹಲವಾರು ಬ್ಯಾಂಕ್ ವಿಲೀನ**

ಕೆಲವು ಸಹಕಾರ ಸಂಸ್ಥೆಗಳು ಗ್ರಾಹಕರಿಂದ ಶೇ16ರಷ್ಟು ಬಡ್ಡಿ ಪಡೆದು ಶೋಷಿಸುತ್ತಿವೆ. ಇದನ್ನು ತಪ್ಪಿಸಬೇಕು ಎಂದು ರಾಜಣ್ಣ ಸಲಹೆ ಮಾಡಿದರು. ಹಣಕಾಸಿನ ಸಂಸ್ಥೆಗಳಲ್ಲಿ ಸರ್ಕಾರದ ಹಸ್ತಕ್ಷೇಪ ಇರಬಾರದು. ಸಾಲ ವಸೂಲಿಗೆ ನೋಟಿಸ್ ಕೊಡಬಾರದು, ಗ್ರಾಹಕರ ಮೇಲೆ ಒತ್ತಡ ಹೇರಬಾರದು ಎಂದು ಹೇಳಿದರೆ ಇಡೀ ವ್ಯವಸ್ಥೆ ಹಾಳಾಗುತ್ತದೆ. ಸಂಸ್ಥೆಗಳ ನಿರ್ಧಾರಕ್ಕೆ ಆಡಳಿತ ವರ್ಗ ವಿರೋಧ ವ್ಯಕ್ತಪಡಿಸಬಾರದು. ಸರ್ಕಾರ ಸಹಕಾರ ಸಂಸ್ಥೆಗಳಿಗೆ ಮಾರಕ ವಾಗುವ, ಪ್ರಗತಿಗೆ ಅಡ್ಡಿಯಾಗುವ ಯಾವುದೇ ತೀರ್ಮಾನ ತೆಗೆದುಕೊಳ್ಳಬಾರದು. ಸಾಲ ಪಡೆದವರು ಕಟ್ಟಿದರೆ ಆಯಿತು ಎಂದು ಉದಾಸೀನ ಮನಸ್ಥಿತಿ ತೋರಬಾರದು ಎಂದು ಸಲಹೆ ಮಾಡಿದರು.

ಉತ್ತಮ ಸಾಲಗಾರರನ್ನು ಹುಡುಕುವುದು ದೊಡ್ಡ ಸವಾಲಾಗಿದೆ. ಫೋರ್ಜರಿ ದಾಖಲೆ ಸಲ್ಲಿಸಿ ಸಾಲ ಪಡೆಯುವುದು ಹೆಚ್ಚಾಗುತ್ತಿದೆ. ಅಸಲಿಗಿಂತ ನಕಲಿ ದಾಖಲೆ ಬಹಳ ಚೆನ್ನಾಗಿರುತ್ತವೆ. ನಕಲಿ ದಾಖಲೆ ಕಂಡು ಹಿಡಿಯುವುದು ಕಷ್ಟವಾಗುತ್ತಿದೆ. ಎಲ್ಲಾ ಸವಾಲು ಎದುರಿಸಿ ಬ್ಯಾಂಕ್ ನಡೆಸುವುದು ಸುಲಭದ ಕೆಲಸವಲ್ಲ ಎಂದರು.

# ಕೊಳೆಗೇರಿಯಾದ ಚೇಳೂರಿನ 2ನೇ ಬ್ಲಾಕ್

• **ಉದಯವಾಹಿನಿ, ಚೇಳೂರು**

ಚೇಳೂರು, ಇದು ತಾಲ್ಲೂಕು ಕೇಂದ್ರ. ಆದರೆ ಪಟ್ಟಣದ ಎರಡನೇ ಬ್ಲಾಕ್‌ನ ಬೀದಿಗಳಲ್ಲಿ ಓಡಾಡಿದರೆ, ಇದು ತಾಲ್ಲೂಕು ಕೇಂದ್ರವೊ ಕೊಳೆಗೇರಿಯೊ ಎನ್ನುವಂತೆ ಭಾಸವಾಗುತ್ತದೆ. ಎರಡನೇ ಬ್ಲಾಕ್ ಬಡಾವಣೆಯಲ್ಲಿ 100ಕ್ಕೂ ಹೆಚ್ಚು ಕುಟುಂಬಗಳು ವಾಸಿಸುತ್ತಿವೆ. ಸುಸಜ್ಜಿತ ಚರಂಡಿ ವ್ಯವಸ್ಥೆ, ಸಂಚಾರಕ್ಕೆ ಉತ್ತಮ ರಸ್ತೆ ಸೇರಿದಂತೆ ಕನಿಷ್ಠ ಮೂಲಸೌಕರ್ಯಗಳು ಸಹ ತಾಲ್ಲೂಕು ಕೇಂದ್ರದ ಈ ಬಡಾವಣೆಯಲ್ಲಿ ಇಲ್ಲ.

ಅನೈರ್ಮಲ್ಯದ ವಾತಾವರಣ ಎದ್ದು ಕಾಣುತ್ತದೆ. ಮಡುಗಟ್ಟಿದ ಕೊಳಚೆ ನೀರು ಇಲ್ಲಿನ ಅಧ್ವಾನಗಳನ್ನು ಹೇಳುತ್ತದೆ.

ಬಾಗೇಪಲ್ಲಿ ಮುಖ್ಯ ರಸ್ತೆಯಿಂದ ಒಳಭಾಗದಲ್ಲಿ ಈ ಬಡಾವಣೆ ಇದೆ. 15 ವರ್ಷಗಳ ಹಿಂದೆ ಈ ಬಡಾವಣೆಯಲ್ಲಿ ನೆಲಮಟ್ಟಕ್ಕೆ ಕಲ್ಲುಹಾಸಿನ ಚರಂಡಿ ನಿರ್ಮಿಸಲಾಗಿತ್ತು. ಆದರೆ ಈ ಚರಂಡಿಗಳ ಸ್ಥಿತಿ ಅಯೋಮಯ ಎನ್ನುವಂತೆ ಇದೆ.

ರಸ್ತೆ ಸೌಕರ್ಯವೂ ಬಡಾವಣೆ ನಿವಾಸಿಗಳಿಗೆ ಮರೀಚಿಕೆಯಾಗಿದೆ. ಮಣ್ಣು ಮಿಶ್ರಿತ ಕಚ್ಚಾ ರಸ್ತೆಯಲ್ಲಿ ಸಂಚಾರ ಮಾಡುವ ದಯನೀಯ


ಉದಯವಾಹಿನಿ ಚಿತ್ರ

ವಾತಾವರಣ ಇಲ್ಲಿದೆ. ಮಳೆಬಂದರೆ ಮಳೆಯ ನೀರು ನಿವಾಸಿಗಳ ಮನೆಮುಂದೆ ನಿಲ್ಲುತ್ತದೆ. ಆ ಸಂದರ್ಭದಲ್ಲಿ ಸಂಚಾರ ಕಡುಕಷ್ಟ. ಕೆಸರಿನಲ್ಲಿಯೇ ವೃದ್ಧರು, ಮಕ್ಕಳು ನಡೆದು ಹೋಗುವರು.

ಸ್ವಲ್ಪ ಮಳೆ ಬಂದರೆ ಕೆಸರು ಹೆಚ್ಚುತ್ತದೆ. ಜೋರು ಮಳೆ ಬಂದರೆ ಪರಿಸ್ಥಿತಿ ಮತ್ತಷ್ಟು ಅಧ್ವಾನ. ಬಡಾವಣೆಗೆ ಸಂಪರ್ಕ ಕಲ್ಪಿಸುವ ರಸ್ತೆ ಇಳಿಜಾರಾಗಿದೆ. ಮಳೆನೀರು ಬಡಾವಣೆಗೆ ತಗ್ಗು ಪ್ರದೇಶಗಳತ್ತ ಹರಿಯಲಿದೆ.

ಬಡಾವಣೆಯ ಸುತ್ತಮುತ್ತಲೇ ಗ್ರಾಮ ಪಂಚಾಯಿತಿ ಅಧಿಕಾರಿಗಳು, ಜನಪ್ರತಿನಿಧಿಗಳು ಓಡಾಟ ನಡೆಸಿದರೂ ಇದಕ್ಕೂ ತಮಗೂ ಸಂಬಂಧವೇ ಇಲ್ಲ ಎನ್ನುವಂತೆ ಜಾಣ ಕುರುಡರಾಗಿ ನಡೆಯುವರು.

### ಸಾಂಕ್ರಾಮಿಕ ರೋಗದ ಭೀತಿ

**ಕೊಳಚೆ ನೀರು ಚರಂಡಿಯಲ್ಲಿ ಹರಿಯುತ್ತಿಲ್ಲ. ಕೊಳಚೆ ರಸ್ತೆಗೆ ಹರಿಯುತ್ತಿದೆ. ರಸ್ತೆಯಲ್ಲಿಯೇ ಕೊಳಚೆ ಮಡುಗಟ್ಟಿದ ಪರಿಣಾಮ ದುರ್ನಾತ ಬರುತ್ತಿದೆ. ಚರಂಡಿ ನೀರು ಹರಿಯಲು ಅವಕಾಶವಿಲ್ಲದೆ ಕುಂಟೆಯಲ್ಲಿ ನೀರು ನಿಲ್ಲುವಂತೆ ಕೊಳಚೆ ನೀರು ರಸ್ತೆಯಲ್ಲಿ ನಿಂತಿದೆ. ಈ ಕೊಳಚೆಗೆ ಕಸಕಡ್ಡಿ ತ್ಯಾಜ್ಯ ಸೇರಿದೆ. ಬಡಾವಣೆಯ ಬೀದಿಗಳಿಂದ ಹರಿದುಬಂದ ಚರಂಡಿಯ ಕೊಳಚೆ ನೀರು ಖಾಲಿ ನಿವೇಶನದಲ್ಲಿ ಕುಂಟೆಯಂತೆ ಸಂಗ್ರಹವಾಗುತ್ತಿದೆ. ಈ ಪರಿಣಾಮ ಸೊಳ್ಳೆಗಳು ಹೆಚ್ಚಿವೆ. ಜನರಲ್ಲಿ ಸಾಂಕ್ರಾಮಿಕ ರೋಗದ ಭೀತಿ ಮನೆ ಮಾಡಿದೆ.**

# ಅಲ್ಪಸಂಖ್ಯಾತರ ಪ್ರದೇಶದಲ್ಲಿ ಹಣ ಹಂಚಿಕೆ ಆರೋಪ

• **ಉದಯವಾಹಿನಿ, ಚನ್ನಪಟ್ಟಣ**

ಉಪ ಚುನಾವಣೆ ಮತದಾನಕ್ಕೆ ಇನ್ನೂ 2 ದಿನ ಬಾಕಿ ಇರುವಾಗಲೇ ಪಟ್ಟಣದ ಅಲ್ಪಸಂಖ್ಯಾತರ ಪ್ರದೇಶದಲ್ಲಿ ಹಣ ಹಂಚಿಕೆ ಆರೋಪ ಕೇಳಿ ಬಂದಿದೆ. ಉರ್ದು ಭಾಷೆಯಲ್ಲಿ ಮುದ್ರಿತವಾದ ಕವರ್‌ನಲ್ಲಿ ಜೆಡಿಎಸ್ ಮತ್ತು ಕಾಂಗ್ರೆಸ್ ಕರಪತ್ರದ ಜೊತೆ 500 ಮುಖಬೆಲೆಯ ಎರಡು ನೋಟುಗಳಿರುವ ಚಿತ್ರಗಳು ಸಾಮಾಜಿಕ ಜಾಲತಾಣದಲ್ಲಿ ಹರಿದಾಡುತ್ತಿವೆ.ಎರಡೂ ಪಕ್ಷಗಳ ಕರಪತ್ರಗಳ ಜೊತೆಗಿರುವ ನೋಟಿನ ಚಿತ್ರ, ನೋಟಿನ ಸಂಖ್ಯೆ ಒಂದೇ ಆಗಿದೆ. ಈ ವಿಷಯ ಉಭಯ ಪಕ್ಷಗಳ ಕಾರ್ಯಕರ್ತರ ನಡುವೆ ಕೆಸರೆರಚಾಟಕ್ಕೂ ಕಾರಣವಾಗಿದೆ.

ಮತ್ತೊಂದೆಡೆ ವಸತಿ ಸಚಿವ ಜಮೀರ್ ಅಹಮದ್ ಖಾನ್ ರಾತ್ರಿ ಪಟ್ಟಣದ ಅಲ್ಪಸಂಖ್ಯಾತರ ಪ್ರದೇಶಗಳಲ್ಲಿ ನಡೆಸಿದ ಪ್ರಚಾರದ ವೇಳೆ ಬಹಿರಂಗವಾಗಿ ಹಣ ನೀಡುವ ಮೂಲಕ ನೀತಿ ಸಂಹಿತೆ ಉಲ್ಲಂಘಿಸಿದ್ದಾರೆ ಎಂಬ ಆರೋಪ ಕೇಳಿ ಬಂದಿದೆ.ಪ್ರಚಾರದ ವೇಳೆ ಜಮೀರ್ ಹಣ ನೀಡುವ ವಿಡಿಯೋವನ್ನು ತನ್ನ 'ಎಕ್ಸ್'


ಉದಯವಾಹಿನಿ ಚಿತ್ರ

**ಕವರ್‌ನಲ್ಲಿ ಮತದಾರರಿಗೆ ಹಣ**

ಖಾತೆಯಲ್ಲಿ ಪೋಸ್ಟ್ ಮಾಡಿರುವ ಜೆಡಿಎಸ್, 'ಕಾಂಗ್ರೆಸ್ ಸರ್ಕಾರ ತನ್ನ ಆಡಳಿತ ಯಂತ್ರ ಮತ್ತು ಅಧಿಕಾರ ದುರ್ಬಳಕೆ ಮಾಡಿಕೊಂಡು ಚುನಾವಣೆಯಲ್ಲಿ ಮತದಾರರಿಗೆ ಆಮಿಷವೊಡ್ಡುತ್ತಿದೆ. ಪ್ರಚಾರದ ವೇಳೆ ಸಾರ್ವಜನಿಕವಾಗಿ ಸಚಿವ ಜಮೀರ್ ಅಹಮದ್ ಗರಿ ಗರಿ ನೋಟುಗಳನ್ನು ಕೊಟ್ಟು ಜನರಿಗೆ ಮತ ಹಾಕುವಂತೆ ಒತ್ತಡ ಹೇರಿದ್ದಾರೆ' ಎಂದು ಆರೋಪಿಸಿದೆ.

ಚುನಾವಣಾ ಆಯೋಗವು ಕಾಂಗ್ರೆಸ್ ನಾಯಕರ ಹಣ ಹಂಚಿಕೆಯನ್ನು ಗಂಭೀರವಾಗಿ ಪರಿಗಣಿಸಿ ಸ್ವಯಂಪ್ರೇರಿತವಾಗಿ ದೂರು ದಾಖಲಿಸಿಕೊಂಡು ಸಚಿವರ ಮೇಲೆ ಸೂಕ್ತ ಕ್ರಮ ಜರುಗಿಸಬೇಕು' ಎಂದು ಆಗ್ರಹಿಸಿದೆ.

ಪಟ್ಟಣದ ಮೆಹದಿನಗರದಲ್ಲಿ ವ್ಯಕ್ತಿಯೊಬ್ಬ ಸ್ಥಳೀಯರೊಬ್ಬರಿಗೆ 500 ಮುಖಬೆಲೆಯ ಎರಡು ನೋಟುಗಳನ್ನು ಉರ್ದು ಭಾಷೆಯ ಕವರ್‌ನಲ್ಲಿ ಜೆಡಿಎಸ್ ಅಭ್ಯರ್ಥಿಯ ಕರಪತ್ರದೊಂದಿಗೆ ಕೊಟ್ಟು ಹೋಗಿರುವ ದೂರು ಬಂದಿದೆ. ಅದೇ ನೋಟು ಮತ್ತು ಕವರ್ ಕಾಂಗ್ರೆಸ್ ಅಭ್ಯರ್ಥಿಯ ಕರಪತ್ರದ ಜೊತೆಗಿರುವ ಚಿತ್ರಗಳು ಸಾಮಾಜಿಕ ಜಾಲತಾಣದಲ್ಲಿ ಹರಿದಾಡುತ್ತಿರುವ ಮಾಹಿತಿ ಬಂದಿದೆ. ಸಚಿವ ಜಮೀರ್ ಅವರು ಪ್ರಚಾರದ ವೇಳೆ ಹಣ ಹಂಚಿರುವ ದೂರು ಬಂದಿದೆ. ಎರಡೂ ಘಟನೆಗಳ ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸಲಾಗುವುದು' ಎಂದು ಚುನಾವಣಾ ಅಧಿಕಾರಿಗಳು ಮತ್ತು ಪೊಲೀಸರು ತಿಳಿಸಿದ್ದಾರೆ.

# ಕಾಂಗ್ರೆಸ್ ಕೊಟ್ಟ ಒಂದು ಯೋಜನೆಯನ್ನೂ ಜೆಡಿಎಸ್ ಕೊಟ್ಟಿಲ್ಲ

• **ಉದಯವಾಹಿನಿ, ಚನ್ನಪಟ್ಟಣ**

ಕಾಂಗ್ರೆಸ್‌ನವರು ಕೊಟ್ಟಂತ ಒಂದು ಯೋಜನೆಯನ್ನೂ ಎಚ್.ಡಿ. ಕುಮಾರಸ್ವಾಮಿ ಕೊಟ್ಟಿಲ್ಲ. ಈಗ ನೋಡಿದರೆ ರಾಮನಗರ ಹಾಗು ಚನ್ನಪಟ್ಟಣ ನಡುವೆ ಕಾರ್ಖಾನೆ ಮಾಡ್ತಾರಂತೆ' ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ವಾಗ್ದಾಳಿ ನಡೆಸಿದರು. ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದ ಉಪಚುನಾವಣೆಯ ಪ್ರಚಾರದಲ್ಲಿ ಸೋಮವಾರ ಪಾಲ್ಗೊಂಡು ಮಾತನಾಡಿದ ಅವರು, ಒಂದೊಮ್ಮೆ ಕಾರ್ಖಾನೆ ಮಾಡುವುದಾದರೆ ಬಿಡದಿಯ ಕೇತಗಾನಹಳ್ಳಿಯ ಜಮೀನು ಕೊಡಿ. ಈಗಲೇ ಐದು ಪಟ್ಟು ಹಣ ಕೊಟ್ಟು ಖರೀದಿ ಮಾಡ್ತೀವಿ ಎಂದರು.

ಹಿಂದೆ ಕಾಂಗ್ರೆಸ್‌ಗೆ ಬನ್ನಿ ಎಂದು ಹಲವು ಬಾರಿ ಯೋಗೇಶ್ವರ್ ಅವರಿಗೆ ಆಹ್ವಾನ ನೀಡಲಾಗಿತ್ತು. ಆದರೆ ಅದನ್ನು ಕೇಳದೆ ಬಿಜೆಪಿಗೆ ಹೋಗಿ ಸೋತರು. ಆಗಿನ ಅವರ ಸೋಲಿಗೆ ಅವರೇ ಕಾರಣ. ಈಗ ಅವರಿಗೆ ಎಲ್ಲವೂ ಅರ್ಥವಾಗಿದೆ. ಯೋಗೇಶ್ವರ್ ನಿಲ್ಲದಿದ್ದರೆ ನಾನೇ ಅಭ್ಯರ್ಥಿಯಾಗಿ ಸ್ಪರ್ಧಿಸುತ್ತಿದೆ. ಆದರೆ ಯೋಗೇಶ್ವರ್ ತಮ್ಮ ಸ್ಪರ್ಧೆ ಖಚಿತಪಡಿಸಿದ್ದರಿಂದ ನಾನು ಬಿಟ್ಟುಕೊಟ್ಟೆ. ಹಳೆಯದನ್ನು ಮರೆತು ಮುಂದೆ ಆಗಬೇಕಾದ್ದನ್ನು ನೋಡೋಣ' ಎಂದು ಶಿವಕುಮಾರ್ ಹೇಳಿದರು. ಕಾಂಗ್ರೆಸ್ ಅಭ್ಯರ್ಥಿ ಯೋಗೇಶ್ವರ್ ಮಾತನಾಡಿ,


ಉದಯವಾಹಿನಿ ಚಿತ್ರ

**ನನ್ನ ರಾಜಕೀಯ ನಿರ್ಣಯಗಳು ನನ್ನ ತಾಲ್ಲೂಕಿನ ಜನರ ಹಿತಕ್ಕಾಗಿಯೇ ಹೊರತು ವೈಯಕ್ತಿಕ ಉದ್ದೇಶಕ್ಕಲ್ಲ. ಸತತ ಎರಡು ಸೋಲು ನನ್ನ ಆತ್ಮವಿಶ್ವಾಸವನ್ನು ಸ್ವಲ್ಪ ಕುಗ್ಗಿಸಿದ್ದು ಸುಳ್ಳಲ್ಲ. ಕುಮಾರಸ್ವಾಮಿ ಕುಟುಂಬಕ್ಕೆ ನಾನೇನು ಅನ್ಯಾಯ ಮಾಡಿದ್ದೆ ಅವರಿಂದ ತೆರವಾದ ಸ್ಥಾನವನ್ನು ನನಗೆ ಬಿಡುತ್ತಾರೆಂದರೆ, ಅವರ ಪುತ್ರನ ಕರೆದುಕೊಂಡು ಬಂದಿದ್ದಾರೆ -ಯೋಗೇಶ್ವರ್**

ಬಾಲಗಂಗಾಧರನಾಥ ಸ್ವಾಮೀಜಿ ಅವರ ಆಶೀರ್ವಾದದೊಂದಿಗೆ ರಾಜಕೀಯ ಶುರು ಮಾಡಿದೆ. ಟಿಕೆಟ್ ವಿಷಯದಲ್ಲಿ ನನ್ನನ್ನು ಅತಂತ್ರ ಮಾಡಿ ರಾಜಕೀಯವಾಗಿ ಮುಗಿಸಲು ಕುಮಾರಸ್ವಾಮಿ ತಂತ್ರ ಮಾಡಿದರು. ನನ್ನನ್ನು ಹರಕೆಯ ಕುರಿ ಮಾಡುತ್ತಿರುವವರ ಕುರಿತು ಗೊತ್ತಾಗಿ ನಾನು ನನ್ನ ಮೂಲ ಪಕ್ಷ ಕಾಂಗ್ರೆಸ್‌ಗೆ ಬಂದೆ ಎಂದು ಹೇಳಿದರು.

# ತುಮುಲ್ ಚುನಾವಣೆ: ಅಭ್ಯರ್ಥಿಗಳ ಭವಿಷ್ಯ ಮತಪೆಟ್ಟಿಗೆಯಲ್ಲಿ ಭದ್ರ

• **ಉದಯವಾಹಿನಿ, ತುಮಕೂರು**

ತುಮಕೂರು ಜಿಲ್ಲಾ ಸಹಕಾರ ಹಾಲು ಉತ್ಪಾದಕರ ಸಂಘಗಳ ಒಕ್ಕೂಟದ (ತುಮುಲ್) 10 ನಿರ್ದೇಶಕ ಸ್ಥಾನಗಳಿಗೆ ಮತದಾನ ನಡೆಯಿತು. 10 ತಾಲ್ಲೂಕುಗಳ 21 ಮಂದಿ ಅಭ್ಯರ್ಥಿಗಳ ಭವಿಷ್ಯ ಮತಪೆಟ್ಟಿಗೆಯಲ್ಲಿ ಭದ್ರವಾಯಿತು. ನಗರದ ಎಂಪ್ರೆಸ್ ಕಾಲೇಜಿನ ಮತಗಟ್ಟೆಯಲ್ಲಿ ಬೆಳಿಗ್ಗೆ 9ರಿಂದ ಸಂಜೆ 4 ಗಂಟೆವರೆಗೆ ಮತದಾನ ನಡೆಯಿತು.ಪ್ರಾರಂಭದಲ್ಲಿ 1,146 ಜನ ಮತದಾನದ ಹಕ್ಕು ಪಡೆದಿದ್ದರು.

ನಂತರ 45 ಮಂದಿ ಹೈಕೋರ್ಟ್ ಮೊರೆ ಹೋಗಿ ಮತದಾನ ಮಾಡಲು ಅವಕಾಶ ಪಡೆದರು. ಒಟ್ಟು 1,191 ಮಂದಿ ಪೈಕಿ 1,188 ಜನ ಮತ ಚಲಾಯಿಸಿದರು. ತುಮಕೂರಿನ ಇಬ್ಬರು, ಗುಬ್ಬಿಯ ಒಬ್ಬರು ಮತದಾನದಿಂದ ದೂರು ಉಳಿದರು. ಶೇ 99.74 ರಷ್ಟು ಮತದಾನವಾಯಿತು.ಅನರ್ಹಗೊಂಡಿದ್ದ ಹಾಲು ಉತ್ಪಾದಕರ ಸಹಕಾರ ಸಂಘಗಳು (ಡೇರಿ) ಹೈಕೋರ್ಟ್ ಮೂಲಕ ಮತದಾನಕ್ಕೆ ಅವಕಾಶ ಪಡೆದುಕೊಂಡಿವೆ. ಕುಣಿಗಲ್ ಹಾಗೂ ಚಿಕ್ಕನಾಯಕನಹಳ್ಳಿ ತಾಲ್ಲೂಕಿನಿಂದ ಯಾರೊಬ್ಬರೂ


ಉದಯವಾಹಿನಿ ಚಿತ್ರ

ನ್ಯಾಯಾಲಯದ ಮೊರೆ ಹೋಗಿಲ್ಲ. ಈ ಎರಡು ತಾಲ್ಲೂಕು ಹೊರತುಪಡಿಸಿ ಉಳಿದ 8 ತಾಲ್ಲೂಕುಗಳಿಗೆ ಪ್ರತಿ ತಾಲ್ಲೂಕಿಗೆ ಎರಡು ಪ್ರತ್ಯೇಕ ಮತಪೆಟ್ಟಿಗೆ ಸ್ಥಾಪಿಸಲಾಗಿತ್ತು. ಕೋರ್ಟ್‌ನಿಂದ ಅನುಮತಿ ಪಡೆದವರಿಗೆ ಪ್ರತ್ಯೇಕ ಮತಪೆಟ್ಟಿಗೆಯ ವ್ಯವಸ್ಥೆ ಮಾಡಲಾಗಿತ್ತು.

ಬೆಳಿಗ್ಗೆ ಮಂದಗತಿಯಲ್ಲಿ ಆರಂಭವಾದ ಮತದಾನ ಬಿಸಿಲು ಏರಿಕೆಯಾಗುತ್ತಿದ್ದಂತೆ ಚುರುಕು ಪಡೆಯಿತು. 11 ಗಂಟೆಯ ನಂತರ ಹೆಚ್ಚಿನ ಮತದಾರರು ಮತಗಟ್ಟೆಯ ಕಡೆ ಹೆಜ್ಜೆ ಹಾಕಿದರು. ಆಯಾ ತಾಲ್ಲೂಕಿನ ಮತದಾರರು ಪ್ರತ್ಯೇಕ ವಾಹನಗಳಲ್ಲಿ ಮತ ಕೇಂದ್ರದತ್ತ ಆಗಮಿಸುತ್ತಿದ್ದ ದೃಶ್ಯಗಳು ಕಂಡು ಬಂದವು.

# ವಿವಿಧೆಡೆ ಕಳ್ಳತನ: ಜನರಲ್ಲಿ ಆತಂಕ

• **ಉದಯವಾಹಿನಿ, ಸುಂಟಿಕೊಪ್ಪ**

ಹೋಬಳಿ ವ್ಯಾಪ್ತಿಯ ಕೆಲವು ಗ್ರಾಮಗಳಲ್ಲಿ ಇತ್ತೀಚೆಗೆ ಕಳವು ಪ್ರಕರಣಗಳು ಹೆಚ್ಚಿದ್ದು, ಜನರಲ್ಲಿ ಆತಂಕ ಮೂಡಿಸಿದೆ.

ಕಳೆದ ಹಲವು ವರ್ಷಗಳಿಂದ ಕಳವು ಪ್ರಕರಣಗಳು ಕಡಿಮೆಯಾಗಿದ್ದವು. ಇದೀಗ ಇದ್ದಕ್ಕಿದ್ದಂತೆ ಹೆಚ್ಚಾಗಿವೆ. ಅದರಲ್ಲೂ ಕಳೆದ ಒಂದು ವಾರಗಳಿಂದ ಏಳನೇ ಹೊಸಕೋಟೆ, ಕಂಬಿಬಾಣೆ ವ್ಯಾಪ್ತಿಯಲ್ಲಿ ಹೆಚ್ಚು ಕಳ್ಳತನದ ಪ್ರಕರಣಗಳು ನಡೆದಿವೆ.ರಾತ್ರಿ ಗಸ್ತನ್ನು ಪೊಲೀಸರು ಹೆಚ್ಚಿಸಬೇಕು ಮತ್ತು ಗ್ರಾಮ ಪಂಚಾಯಿತಿ ವತಿಯಿಂದ ಸಿಸಿಟಿವಿ ಕ್ಯಾಮೆರಾಗಳನ್ನು ಹೆಚ್ಚಾಗಿ ಅಳವಡಿಸಬೇಕು ಎಂಬ ಒತ್ತಾಯ ಸಾರ್ವಜನಿಕರಿಂದ ವ್ಯಕ್ತವಾಗಿದೆ.

ಸದ್ಯ, ಇರುವ ಸಿಸಿಟಿವಿಗಳು ಸಾಕಾಗುತ್ತಿಲ್ಲ. ರಸ್ತೆಗಳಲ್ಲಿ, ವೃತ್ತಗಳಲ್ಲಿ, ಆಯಾಕಟ್ಟಿನ ಜಾಗಗಳಲ್ಲಿ ಗ್ರಾಮ ಪಂಚಾಯಿತಿ ಅತ್ಯಾಧುನಿಕ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಬೇಕು


ಉದಯವಾಹಿನಿ ಚಿತ್ರ

ಎಂದು ಪೊಲೀಸರೇ ಹೇಳುತ್ತಾರೆ.

ಸಮೀಪದ ಅತ್ತೂರು ನಲ್ಲೂರುವಿನ ಕಂಬಿಬಾಣೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಮಧ್ಯರಾತ್ರಿ ಕಳ್ಳತನವಾಗಿದೆ.

ಮಧ್ಯರಾತ್ರಿ ವೇಳೆ ಶಾಲೆಯ ಮುಖ್ಯಶಿಕ್ಷಕರ ಕೊಠಡಿಯ ಬಾಗಿಲು ಮುರಿದು ಒಳ ನುಗ್ಗಿದ ಕಳ್ಳರು 2 ಸಾವಿರ ನಗದು ಹಣವನ್ನು ಅಪಹರಿಸಿದರು ಮಾತ್ರವಲ್ಲ, ತರಗತಿಯ ಕೊಠಡಿಗಳ ಬೀಗವನ್ನೂ ಮುರಿದಿದ್ದಾರೆ. ಅಲ್ಲದೇ ಮುಖ್ಯ ಶಿಕ್ಷಕರಕೊಠಡಿಯಿಂದ ಟೇಬಲ್ ಬಟ್ಟೆಯನ್ನು ಹೊರತಂದು ವರಾಂಡದಲ್ಲಿ ಮಲಗಿ ಹೋಗಿರುವ ಕುರುಹುಗಳೂ ಕಂಡು ಬಂದಿದೆ.

### ಬೀಗ ಮುರಿಯಲು ವಿಫಲ

**ಶಾಲೆಯ ಅಕ್ಷರ ದಾಸೋಹ ಅಡುಗೆ ಕೋಣೆಯ ಬೀಗ ಮುರಿಯಲು ಪ್ರಯತ್ನಿಸಿ ವಿಫಲರಾಗಿದ್ದಾರೆ. ಶಾಲಾ ಮುಖ್ಯೋಪಾಧ್ಯಾಯನಿ ನಯನಾ ಅವರು ದೂರು ನೀಡಿದ ಮೇರೆಗೆ ಸುಂಟಿಕೊಪ್ಪ ಪಿಎಸ್‌ಐಗಳಾದ ಚಂದ್ರಶೇಖರ್, ಭಾರತಿ, ಹಾಗೂ ಸಿಬ್ಬಂದಿಗಳು ಹಾಗೂ ಶ್ವಾನದಳ ತಂಡದವರು ಸ್ಥಳಕ್ಕೆ ಆಗಮಿಸಿ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.**

# ಪೂರ್ವದಲ್ಲಿ ಸೂರ್ಯ ಹುಟ್ಟುವುದು ಎಷ್ಟು ಸತ್ಯವೋ ಸಿಪಿವೈ ಗೆಲುವು ಅಷ್ಟೇ ಸತ್ಯ

## ಯೋಗೇಶ್ವರ್ ಕ್ಷೇತ್ರಕ್ಕೆ ಹೊಸಬರಲ್ಲ, ಮಾಡಿರುವ ನೀರಾವರಿ ಕೆಲಸ ಗಮನಿಸಿ ಜನರೇ ಅವರನ್ನು ಆಧುನಿಕ ಭಗೀರಥ ಅಂತ ಕರೆಯುತ್ತಾರೆ

• **ಉದಯವಾಹಿನಿ, ಚನ್ನಪಟ್ಟಣ**

ಪೂರ್ವದಲ್ಲಿ ಸೂರ್ಯ ಹುಟ್ಟುವುದು ಎಷ್ಟು ಸತ್ಯವೂ ಯೋಗೇಶ್ವರ್ ಗೆಲ್ಲುವುದು ಅಷ್ಟೇ ಸತ್ಯ. ಕ್ಷೇತ್ರದ ಜನರಿಗೆ ಯಾರು ಕೆಲಸ ಮಾಡುತ್ತಾರೆ ಎಂಬುದು ಗೊತ್ತಾಗಿದೆ ಎಂದು ಚನ್ನಪಟ್ಟಣದಲ್ಲಿ ಮುಖ್ಯಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ.

**ನಾವೆಂದೂ ಜಾತಿ ಮತ್ತು ಧರ್ಮದ ಬೇಧ ಮಾಡಿಲ್ಲ**

ಬಹಿರಂಗ ಪ್ರಚಾರದ ಕೊನೆಯ ದಿನ ಅವರು ಯೋಗೇಶ್ವರ್ ಪರ ಮತಯಾಚಿಸಿದರು.

ಯೋಗೇಶ್ವರ್ ಕ್ಷೇತ್ರಕ್ಕೆ ಹೊಸಬರಲ್ಲ. ಅವರು ಮಾಡಿರುವ ನೀರಾವರಿ ಕೆಲಸ ಗಮನಿಸಿ ಜನರೇ ಅವರನ್ನು ಆಧುನಿಕ ಭಗೀರಥ ಅಂತ ಕರೆಯುತ್ತಾರೆ. ವರದೇಗೌಡರ ಕಾಲದಲ್ಲಿ ನಾನು ಪ್ರಚಾರಕ್ಕೆ ಬಂದಾಗಿಗೂ, ಈಗಿಗೂ ಬಹಳ ವ್ಯತ್ಯಾಸವಾಗಿದೆ. ಅದಕ್ಕೆ ಯೋಗೇಶ್ವರ್ ಮಾಡಿರುವ ಕೆಲಸ ಕಾರಣ.

ಹಾಲಿನ ಪ್ರೋತ್ಸಾಹಧನವನ್ನು ಐದು ರೂಪಾಯಿ ಏರಿಕೆ ಮಾಡಿ. ಅಕ್ಕಪಕ್ಕದ ರಾಜ್ಯಗಳಲ್ಲಿ ಹಾಲಿನ ದರ ಹೆಚ್ಚು ಇದೆ. ನಮ್ಮಲ್ಲಿ ಕಡಿಮೆ ಇದೆ ಎಂದು ಮನವಿ ಮಾಡಿದ್ದಾರೆ. ಈಗ ಚುನಾವಣೆ ನೀತಿ ಸಂಹಿತೆ ಇರುವುದರಿಂದ ಆ ಬಗ್ಗೆ ಯಾವುದೇ ಭರವಸೆ ನೀಡದೆ, ರೈತಪರ ತೀರ್ಮಾನ ಮಾಡುವೆ ಎಂದಿದ್ದಾರೆ. ಯೋಗೇಶ್ವರ್ ಸಾಮಾನ್ಯ ಕುಟುಂಬದಿಂದ ಬಂದಿರುವ ಅಭ್ಯರ್ಥಿ. ನಿಖಿಲ್ ಕುಮಾರಸ್ವಾಮಿ ಅವರು ಅವರಪ್ಪ ಮುಖ್ಯಮಂತ್ರಿ ಆಗಿದ್ದಾಗಲೇ ಮಂಡ್ಯದಲ್ಲಿ ಸೋತರು. ರಾಮನಗರದಲ್ಲಿ ಸಹ ಸೋತರು. ಪುತ್ರ ವ್ಯಾಮೋಹದಿಂದ ಕುಮಾರಸ್ವಾಮಿ ತಮ್ಮ ಮಗನನ್ನು ಕರೆದುಕೊಂಡು ಬಂದು ನಿಲ್ಲಿಸಿದ್ದಾರೆ ಎಂದು ಕುಟುಕಿದರು.

ದೇವೇಗೌಡರಿಗೆ ಮೊಮ್ಮಗ ಮತ್ತು ಕುಮಾರಸ್ವಾಮಿ ಅವರಿಗೆ ಪುತ್ರ ವ್ಯಾಮೋಹ ಇದೆ. ದೇವೇಗೌಡರ ಜೊತೆಗಿದ್ದವ ನಾನು. ಅವರು ಎಂದಿಗೂ ಬುದ್ದಿವಂತ ಮತ್ತು ದಕ್ಷ ಒಕ್ಕಲಿಗ ನಾಯಕರನ್ನು ಬೆಳೆಸುವುದಿಲ್ಲ. ನಾನು ಹಿಂದುಳಿದ ವರ್ಗದವ ಬಿಡಿ. ಆದರೆ, ಒಕ್ಕಲಿಗರನ್ನು ಸಹ ಬಿಡುತ್ತಿಲ್ಲವಲ್ಲ.


ಉದಯವಾಹಿನಿ ಚಿತ್ರ

**ನಾವೆಂದೂ ಜಾತಿ ಮತ್ತು ಧರ್ಮದ ಬೇಧ ಮಾಡಿಲ್ಲ. ಹಿಂದುಳಿದ ವರ್ಗದ ಸಿದ್ದರಾಮಯ್ಯ ಎರಡನೇ ಸಲ ಮುಖ್ಯಮಂತ್ರಿ ಆದನಲ್ಲ ಅಂತ ದೇವೇಗೌಡರಿಗೆ ಹೊಟ್ಟೆ ಉರಿ. ನಾನು ಕೇವಲ ಒಂದು ವರ್ಷ, ನನ್ನ ಮಗ ಕೇವಲ ಒಂದೂವರೆ ವರ್ಷ ಆದರು. ಅವರ ಹೊಟ್ಟೆ ಉರಿ ಅವರನ್ನೇ ಸುಡುತ್ತದೆಯೇ ವಿನಾ ನನ್ನನ್ನಲ್ಲ ಎಂದಿದ್ದಾರೆ.**

ಯಾವ ಒಕ್ಕಲಿಗರನ್ನು ಬೆಳೆಸಿದ್ದಾರೆ ಹೇಳಿ. ಈಗ ಆ ಜಿ.ಟಿ. ದೇವೇಗೌಡಗೆ ಶುರು ಮಾಡಿಕೊಂಡಿದ್ದಾರೆ.

### 1994ರಲ್ಲಿ ದೇವೇಗೌಡರು ಸಿ.ಎಂ ಆಗಲು ಸಾಧ್ಯವಾಗುತ್ತಿರಲಿಲ್ಲ

**ಈಗ ಮೇಕೆದಾಟುಗೆ ಡಿಎಂಕೆ ಒಪ್ಪಿಸಿ ಅಂತಾರೆ. ಲೋಕಸಭಾ ಚುನಾವಣೆ ಸಂದರ್ಭದಲ್ಲಿ ಕುಮಾರಸ್ವಾಮಿ ಮೋದಿ ಮಹಾ ಸುಳ್ಳುಗಾರ ಎಂದಿದ್ದರು. ನಾನು ಮತ್ತು ಜಾಲಪ್ಪ ಇಲ್ಲದಿದರೆ 1994ರಲ್ಲಿ ದೇವೇಗೌಡರು ಸಿ.ಎಂ ಆಗಲು ಸಾಧ್ಯವಾಗುತ್ತಿರಲಿಲ್ಲ. ಆಗ ರಾಮಕೃಷ್ಣ ಹೆಗಡೆ ಆಗುತ್ತಿದ್ದರು. ಬೊಮ್ಮಾಯಿ ಸರ್ಕಾರ ಕೆಡವಿದ್ದರಿಂದ ಅವರು ಸಹ ದೇವೇಗೌಡರನ್ನು ಒಪ್ಪಿರಲಿಲ್ಲ. ನಾನು, ಎಂ.ಪಿ. ಪ್ರಕಾಶ್ ಸೇರಿದಂತೆ ಹಲವರು ಅವರನ್ನು ಒಪ್ಪಿಸಿದೆವು.**

ಬಿ.ಎಲ್. ಶಂಕರ್ ಮನೆ ಮಗ ಅಂತಿದ್ದರು. ಜಿ. ವಿಜಯ ಬಂಟ ಅಂತಿದ್ದರು. ಅವರನ್ನು ಬೆಳೆಸಿದ್ರಾ? ಹಾಗಾಗಿ ಜಾತಿ ವ್ಯಾಮೋಹ ಬಿಡಿ. ದ್ವೇಷದ ರಾಜಕಾರಣದಲ್ಲಿ ದೇವೇಗೌಡರು ನಂಬರ್ ಒನ್. ಒಕ್ಕಲಿಗರನ್ನೇ ಅವರು ಮೊದಲು ಮುಗಿಸುವುದು ಎಂದು ಕಿಡಿಕಾರಿದ್ದಾರೆ.

ದೇವೇಗೌಡರೇ ಸುಳ್ಳು ಹೇಳಿದರೆ ಇತಿಹಾಸ ಬದಲಾಗುವುದಿಲ್ಲ. ಸಿದ್ದರಾಮಯ್ಯ ಸೊಕ್ಕು ಮುರಿಯಬೇಕು ಎನ್ನುವ ನಿಮ್ಮ ಮಾತು ಪಾಳೇಗಾರಿಕೆ ಅಲ್ಲವೇ? ದಲಿತರು, ಹಿಂದುಳಿದವರು, ಅಲ್ಪಸಂಖ್ಯಾತರನ್ನು ಕಂಡರೆ ಆಗದ ಅವರು ಇಂದಿಗೂ ಪಾಳೇಗಾರಿಕೆ ಪ್ರವೃತ್ತಿ ಬಿಟ್ಟಿಲ್ಲ. ನಮ್ಮ ಸರ್ಕಾರ ಕಿತ್ತೊಗೆಯುತ್ತೇವೆ ಅಂತೀರಾ? ಆಳುವುದು ನಮ್ಮ ಪರಂಪರೆ ಅನ್ನುವ ಅವರು, ಪಾಪ ಆ ನಿಖಿಲ್‌ಗೂ ಕಲಿಸಿ ಕೊಟ್ಟಿದ್ದಾರೆ. ಹಾಸನದಲ್ಲಿ ಕಣ್ಣೀರಿನಿಂದ ಕೈ ತೊಳೆಯುತ್ತಿರುವ ಹೆಣ್ಣು ಮಕ್ಕಳ ಪರವಾಗಿ ಕಣ್ಣೀರು ಹಾಕಿ.ಯೋಗೇಶ್ವರ್ ಅಭ್ಯರ್ಥಿ ಆಗಿದ್ದರೆ ದೇವೇಗೌಡರು ಇಷ್ಟು ದಿನ ಇಲ್ಲಿ ಇರುತ್ತಿದ್ರಾ? ದೇವೇಗೌಡರು, ಕುಮಾರಸ್ವಾಮಿ ಸೇರಿದಂತೆ ಯಾರೂ ನಮ್ಮ ಸರ್ಕಾರ ತೆಗೆಯಲು ಸಾಧ್ಯವಿಲ್ಲ.

## ಮಿನಿ ನ್ಯೂಸ್

### ಅಂಗವಿಕಲರ ಮಾಸಿಕ ಪಿಂಚಣಿ ಹೆಚ್ಚಳಕ್ಕೆ ಕ್ರಮ: ಶಾಸಕ ಟಿ.ಬಿ.ಜಯಚಂದ್ರ

• **ಉದಯವಾಹಿನಿ, ಶಿರಾ**

ಅಂಗವಿಕರಿಗೆ ಸರ್ಕಾರ ಮಾಸಿಕ 1,400 ಪಿಂಚಣಿ ನೀಡುತ್ತಿದ್ದು, ಇದು ಅವರಿಗೆ ಯಾವುದಕ್ಕೂ ಸಾಲುತ್ತಿಲ್ಲ.

ಆದ್ದರಿಂದ ಅವರ ಪಿಂಚಣಿ ಹೆಚ್ಚಿಸಲು ಸರ್ಕಾರದ ಗಮನ ಸೆಳೆಯುವುದಾಗಿ ಶಾಸಕ ಟಿ.ಬಿ.ಜಯಚಂದ್ರ ಹೇಳಿದರು. ನಗರದ ತಾಲ್ಲೂಕು ಪಂಚಾಯಿತಿ ಆವರಣದಲ್ಲಿ ಅಂಗವಿಕಲರಿಗೆ ಯಂತ್ರಚಾಲಿತ ದ್ವಿಚಕ್ರ ವಾಹನ ವಿತರಿಸಿ ಮಾತನಾಡಿದರು.ಪೌಷ್ಟಿಕಾಂಶದ ಕೊರತೆಯಿಂದ ಅನೇಕ ಮಂದಿ ಅಂಗವಿಕಲತೆಗೆ ಗುರಿಯಾಗುತ್ತಿದ್ದು, ಮನೆಯಲ್ಲಿ ಸಹ ಅವರನ್ನು ನಿರ್ಲಕ್ಷ್ಯ ಮಾಡುತ್ತಿದ್ದಾರೆ. ಅಂತಹವರಿಗೆ ಬದುಕು ಕಟ್ಟಿಕೊಡುವ ಮೂಲಕ ಸಮಾಜದ ಮುಖ್ಯವಾಹಿನಿಗೆ ತರಬೇಕು ಎಂದರು. ಅಂಗವಿಕಲ ವಿದ್ಯಾರ್ಥಿಗಳು ತಮ್ಮ ಭವಿಷ್ಯ ರೂಪಿಸಿಕೊಳ್ಳಲು ಅನುಕೂಲವಾಗುವಂತೆ ಶಾಸಕರ ಅನುದಾನದಲ್ಲಿ 10 ಲಕ್ಷ ಅನುದಾನವನ್ನು ಯಂತ್ರಚಾಲಿತ ದ್ವಿಚಕ್ರ ವಾಹನಕ್ಕೆ ಮೀಸಲಿರಿಸುವ ಭರವಸೆ ನೀಡಿದರು. ಅಂಗವಿಕಲರಿಗೆ ಕುಂದುಕೊರತೆಗಳನ್ನು ವಿಚಾರಿಸಿದ ಶಾಸಕರು 56 ಮಂದಿಗೆ ಯಂತ್ರಚಾಲಿತ ದ್ವಿಚಕ್ರ ವಾಹನಗಳನ್ನು ವಿತರಿಸಿದರು.

### ರಸ್ತೆ ದುರಸ್ತಿಗೆ ಶಾಸಕ ಮಂಜು ಸೂಚನೆ

• **ಉದಯವಾಹಿನಿ, ಸಂತೇಬಾಚಹಳ್ಳಿ**

ಕೊಚ್ಚಿಹೋದ ರಸ್ತೆ ದುರಸ್ತಿ ಮಾಡಬೇಕೆಂದು ಸಣ್ಣ ನೀರಾವರಿ ಅಧಿಕಾರಿಗಳಿಗೆ' ಶಾಸಕ ಎಚ್.ಟಿ.ಮಂಜು ಸೂಚಿಸಿದರು. ಇಲ್ಲಿನ ನಾಗರಘಟ್ಟ ಹಾಗೂ ಹಲಸನಹಳ್ಳಿ ಮಾರ್ಗ ಮಧ್ಯ ಸೇತುವೆ ಬಳಿ ರಸ್ತೆ ಕೊಚ್ಚಿಹೋಗಿ ಮೂರು ವರ್ಷವಾಗಿದ್ದರೂ ದುರಸ್ತಿ ಮಾಡದ' ಸಣ್ಣ ನೀರಾವರಿ ಅಧಿಕಾರಿಗಳಿಗೆ ಖಡಕ್ ಎಚ್ಚರಿಕೆ ನೀಡಿದ್ದಾರೆ. ಶ್ರವಣಬೆಳಗೊಳ, ನಾಗರಘಟ್ಟ ಸೇರಿ ವಿವಿಧ ಗ್ರಾಮಗಳಿಗೆ ತೆರಳಲು ಸಾರ್ವಜನಿಕರಿಗೆ ತೊಂದರೆಯಾಗುತ್ತಿದೆ. ಸೂಚನೆ ನೀಡಿದ್ದರು ಕಾಮಗಾರಿ ಆರಂಭ ಮಾಡದ ಅಧಿಕಾರಿಗಳ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದರು.

'ಶೀಘ್ರದಲ್ಲಿ ಕಾಮಗಾರಿ ಆರಂಭಿಸಿ ಪೂರ್ಣಗೊಳಿಸಿ ಪ್ರಯಾಣಿಕರಿಗೆ ಅನುಕೂಲ ಮಾಡಿಕೊಡಬೇಕು' ಎಂದು ಸಣ್ಣ ನೀರಾವರಿ ಇಲಾಖೆ ಅಧಿಕಾರಿ ನಿರ್ಮಲೇಶ್ ಅವರಿಗೆ ನಿರ್ದೇಶನ ನೀಡಿದರು. ತಹಶೀಲ್ದಾರ್ ಅಶೋಕ್, ಲೋಕೋಪಯೋಗಿ ಇಲಾಖೆ ಎಂಜಿನಿಯರ್ ಮಂಜುನಾಥ್, ಶ್ರೀನಿವಾಸ್, ಸಣ್ಣ ನೀರಾವರಿ ಎಂಜಿನಿಯರ್ ನಿರ್ಮಲೇಶ್, ತೋಟಗಾರಿಕೆ ಉಪ ನಿರ್ದೇಶಕ ಲೋಕೇಶ್, ಕೃಷಿ ಅಧಿಕಾರಿ ಅಭಿಷೇಕ್, ಮುಖಂಡ ಜಾನಕಿರಾಮ್, ರವಿಕುಮಾರ್, ಶಾಸಕರ ಆಪ್ತ ಕಾರ್ಯದರ್ಶಿ ಅರಳಕುಪ್ಪೆ ಪ್ರತಾಪ್ ಇದ್ದರು.

### ಸೇತುವೆಗೆ ದ್ವಿಚಕ್ರ ವಾಹನ ಡಿಕ್ಕಿ ಹಿಂಬದಿ ಸವಾರ ಸಾವು

• **ಉದಯವಾಹಿನಿ, ಸಂತೇಮರಹಳ್ಳಿ**

ಸೇತುವೆಗೆ ದ್ವಿಚಕ್ರ ವಾಹನ ಡಿಕ್ಕಿ ಹೊಡೆದ ಪರಿಣಾಮ ಹಿಂಬದಿ ಸವಾರ ಸ್ಥಳದಲ್ಲೇ ಮೃತಪಟ್ಟಿರುವ ಘಟನೆ ಸಮೀಪದ ಕಮರವಾಡಿ ಗೇಟ್ ಬಳಿ ನಡೆದಿದೆ. ಚಂದ್ರನಾಯ್ಕ (30) ಮೃತಪಟ್ಟವರು. ಸವಾರ ನರೇಂದ್ರ ಜತೆಗೆ ಶ್ರೀರಂಗಪಟ್ಟಣದಿಂದ ಗಾರೆ ಕೆಲಸ ಮುಗಿಸಿಕೊಂಡು ಸ್ವಗ್ರಾಮ ಪಣ್ಯದ ಹುಂಡಿ ಗ್ರಾಮಕ್ಕೆ ತೆರಳುವಾಗ ಕಮರವಾಡಿ ಗೇಟ್ ಬಳಿ ಹಳ್ಳದ ಗುಂಡಿಗೆ ದ್ವಿಚಕ್ರ ಇಳಿದು ಸೇತುವೆಗೆ ಡಿಕ್ಕಿ ಹೊಡೆದಿದೆ. ಸವಾರನಿಗೆ ಸಣ್ಣಪುಟ್ಟ ಗಾಯಗಳಾಗಿವೆ. ಸ್ಥಳಕ್ಕೆ ಸಂತೇಮರಹಳ್ಳಿ ಪೊಲೀಸರು ಭೇಟಿ ನೀಡಿದರು. ಪ್ರಕರಣ ದಾಖಲಾಗಿದೆ.

### ಗಿರಿಜನ ಕಾರ್ಮಿಕರಿಗೆ ಬಿಪಿಎಲ್ ಕಾರ್ಡ್ ನೀಡುವ ಅಭಿಯಾನ

• **ಉದಯವಾಹಿನಿ ಚಾಮರಾಜನಗರ**

ಇ-ಶ್ರಮ್ ಕಾರ್ಡ್ ಹೊಂದಿ ಬಿಪಿಎಲ್ ಕಾರ್ಡ್‌ನಿಂದ ವಂಚಿತರಾಗಿದ್ದ ಗಿರಿಜನ ಸಮುದಾಯಕ್ಕೆ ಸೇರಿದ ಕಾರ್ಮಿಕ ಬೂದಿಪಡಗದ ರುದ್ರೇಗೌಡರಿಗೆ ಪಡಿತರ ಚೀಟಿಗೆ ಅರ್ಜಿ ಸಲ್ಲಿಸಿದ ದಿನವೇ ಆಹಾರ ಇಲಾಖೆಯ ಉಪ ನಿರ್ದೇಶಕ ಯೋಗಾನಂದ ಬಿಪಿಎಲ್ ಕಾರ್ಡ್ ವಿತರಿಸಿದರು. ನಗರದ ತಾಲ್ಲೂಕು ಆಡಳಿತ ಕಚೇರಿಯಲ್ಲಿರುವ ಆಹಾರ ಶಾಖೆಯಲ್ಲಿ ಇ-ಶ್ರಮ್ ನೋಂದಾಯಿತರಿಗೆ ಪಡಿತರ ಕಾರ್ಡ್ ನೀಡುವ ಶಿಬಿರದಲ್ಲಿ ಕಾರ್ಮಿಕರಿಗೆ ಬಿಪಿಎಲ್ ಕಾರ್ಡ್‌ಗಳನ್ನು ವಿತರಿಸಿ ಮಾತನಾಡಿದ ಅವರು, ಜಿಲ್ಲೆಯಲ್ಲಿ 2 ಸಾವಿರಕ್ಕೂ ಹೆಚ್ಚು ಇ-ಶ್ರಮ್ ಕಾರ್ಡು ಹೊಂದಿರುವ ಅರ್ಹ ಕಾರ್ಮಿಕರು ಪಡಿತರ ಕಾರ್ಡ್‌ಗಳಿಂದ ವಂಚಿತರಾಗಿದ್ದು ಅವರಿಗೆ ಬಿಪಿಎಲ್ ಕಾರ್ಡ್ ನೀಡುವಂತೆ ಸುಪ್ರೀಂ ಕೋರ್ಟ್ ನಿರ್ದೇಶನ ನೀಡಿರುವ ಹಿನ್ನೆಲೆಯಲ್ಲಿ ಜಿಲ್ಲೆಯಾದ್ಯಂತ ಮೂರು ದಿನಗಳ ಶಿಬಿರ ಆಯೋಜನೆ ವಿತರಣೆ ಮಾಡಲಾಗುತ್ತಿದೆ. ಇ- ಶ್ರಮ್ ಕಾರ್ಡ್ ಹೊಂದಿರುವ ಫಲಾನುಭವಿಗಳಿಗೆ ಕಾರ್ಮಿಕ ಇಲಾಖೆ, ಕಂದಾಯ ಇಲಾಖೆ ಹಾಗೂ ಆಹಾರ ಇಲಾಖೆ ಅಧಿಕಾರಿಗಳು ಆಯಾ ಗ್ರಾಮಗಳ ನ್ಯಾಯಬೆಲೆ ಅಂಗಡಿಗಳ ಮಾಲೀಕರ ಮೂಲಕ ಮೊಬೈಲ್ ಫೋನ್ ಕರೆ ಮಾಡಿಸಿ, ಬಿಪಿಎಲ್ ಕಾರ್ಡ್ ಪಡೆದುಕೊಳ್ಳಲು ಸೂಚನೆ ಕೊಡಿಸಲಾಗುತ್ತಿದೆ ಎಂದರು.

### ಚನ್ನಪಟ್ಟಣದಲ್ಲಿ ರೇವತಿ ಭರ್ಜರಿ ಪ್ರಚಾರ

• **ಉದಯವಾಹಿನಿ, ರಾಮನಗರ**

ಚನ್ನಪಟ್ಟಣ ಉಪ ಚುನಾವಣೆಯಲ್ಲಿ ಮೈತ್ರಿ ಅಭ್ಯರ್ಥಿ ನಿಖಿಲ್ ಕುಮಾರಸ್ವಾಮಿ ಪರ ಕೆಲಸ ಮಾಡಲು ಈ ಬಾರಿ ನಿಖಿಲ್ ಧರ್ಮಪತ್ನಿ ರೇವತಿ ನಿಖಿಲ್ ಕುಮಾರಸ್ವಾಮಿ ಸಹ ಚುನಾವಣಾ ಕಣಕ್ಕಿಳಿದಿದ್ದಾರೆ. ಈ ಹಿಂದಿನ ಚುನಾವಣೆಗಳಲ್ಲಿ ಭವಾನಿ ರೇವಣ್ಣ ಹಾಗೂ ಅನಿತಾ ಕುಮಾರಸ್ವಾಮಿ ಮಾತ್ರ ಅಭ್ಯರ್ಥಿ ಆಗುವುದರ ಜೊತೆಗೆ ರಾಜಕೀಯ ಪ್ರಚಾರದಲ್ಲಿ ಭಾಗಿಯಾಗುತ್ತಿದ್ದರು.ಇದೀಗ ದೇವೇಗೌಡರ ಕುಟುಂಬದ ಇನ್ನೊಬ್ಬ ಸೊಸೆ ಚುನಾವಣಾ ಪ್ರಚಾರದಲ್ಲಿ ಭಾಗಿಯಾಗುತ್ತಿದ್ದಾರೆ.ನಿಖಿಲ್ ಕುಮಾರಸ್ವಾಮಿ ಗೆಲ್ಲಿಸಲು ಇದೇ ಮೊದಲ ಬಾರಿ ರೇವತಿ ನಿಖಿಲ್ ಸಹ ಪ್ರಚಾರದಲ್ಲಿ ಭಾಗವಹಿಸುತ್ತಿದ್ದಾರೆ.

ಬಹಿರಂಗ ಪ್ರಚಾರದ ಕೊನೆ ದಿನವಾದ ಸೋಮವಾರ ಎನ್‌ಡಿಎ ಅಭ್ಯರ್ಥಿ ನಿಖಿಲ್ ಕುಮಾರಸ್ವಾಮಿ ಪರವಾಗಿ ಅವರ ಧರ್ಮಪತ್ನಿ ರೇವತಿ ನಿಖಿಲ್ ಕುಮಾರಸ್ವಾಮಿ ಅವರು ಪಟ್ಟಣದಲ್ಲಿ ಪ್ರಚಾರ ನಡೆಸಿದರು. ಬೆಳ್ಳಂಬೆಳಗ್ಗೆಯೇ ರೇವತಿ ನಿಖಿಲ್ ಕುಮಾರಸ್ವಾಮಿ ಚನ್ನಪಟ್ಟಣದ ರೈಲು ನಿಲ್ದಾಣ, ಬಸ್ ನಿಲ್ದಾಣ ಹಾಗೂ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಮೀಪ ಅವರು ನಿಖಿಲ್ ಅವರ ಪರವಾಗಿ ಮತ ಕೇಳಿದರು. ರೈಲ್ವೆ ಪ್ರಯಾಣಿಕರು ಮತ್ತು ವಿದ್ಯಾರ್ಥಿಗಳು, ಪಟ್ಟಣದ ಸಾರ್ವಜನಿಕರನ್ನು ಭೇಟಿಯಾದ ರೇವತಿ ಅವರು, ಕರಪತ್ರಗಳನ್ನು ನೀಡಿ ಎನ್‌ಡಿಎ ಅಭ್ಯರ್ಥಿಗೆ ಮತ ಹಾಕುವಂತೆ ಮನವಿ ಮಾಡಿದರು. ರೇವತಿ ನಿಖಿಲ್ ಕುಮಾರಸ್ವಾಮಿ ರೈಲ್ವೆ ನಿಲ್ದಾಣದ ಬಳಿ ಟೀ ಸವಿದು ಪ್ರಚಾರ ಮಾಡಿದರು. ಅಲ್ಲಿನ ಸ್ಥಳೀಯರಿಗೆ ಕರಪತ್ರ ನೀಡಿ ನಿಖಿಲ್ ಅವರಿಗೆ ಮತ ನೀಡುವಂತೆ ಮನವಿ ಮಾಡಿದರು.

ಅಂತರಾಳದಿಂದ.. EDITORIAL

# ಖಾಸಗಿ ಸ್ವತ್ತಿನ ಸ್ವಾಧೀನ ವಿಷಯ
## ಕಾಲಕ್ಕೆ ಅನುಗುಣವಾದ ತೀರ್ಪು

ವ್ಯಕ್ತಿಯ ಎಲ್ಲಾ ಸ್ವತ್ತುಗಳನ್ನು 'ಸಮುದಾಯದ ಭೌತಿಕ ಸಂಪನ್ಮೂಲ' ಎಂದು ಪರಿಗಣಿಸಲು ಸಾಧ್ಯವಿಲ್ಲ ಎಂದು ಸುಪ್ರೀಂ ಕೋರ್ಟ್‌ನ ಒಂಬತ್ತು ನ್ಯಾಯಮೂರ್ತಿಗಳಿದ್ದ ಸಂವಿಧಾನ ಪೀಠವು ತೀರ್ಪು ನೀಡಿದೆ. ಈಗಿನ ಕಾಲದ ಸಾಮಾಜಿಕ ಮತ್ತು ಆರ್ಥಿಕ ನಿಲುವುಗಳಿಗೆ ಅನುಗುಣವಾಗಿ ಈ ತೀರ್ಪು ಇದೆ. ಮೂರು ದಶಕಗಳಿಂದ ಈ ಪ್ರಕರಣ ನ್ಯಾಯಾಲಯದಲ್ಲಿ ಬಾಕಿ ಇತ್ತು. ಸಮುದಾಯದ ಭೌತಿಕ ಸಂಪನ್ಮೂಲದ ಮಾಲೀಕತ್ವ ಮತ್ತು ನಿಯಂತ್ರಣವು ಸಮಾಜದ ಅತ್ಯುತ್ತಮ ಹಿತಕ್ಕಾಗಿ ಮರುಹಂಚಿಕೆ ಆಗುವಂತೆ ಸರ್ಕಾರವು ನೀತಿ ರೂಪಿಸಬೇಕು ಎಂದು ಈ ವಿಧಿಯ ನಿರ್ದೇಶನಾತ್ಮಕ ತತ್ವವು ಹೇಳುತ್ತದೆ. ಈ ವಿಷಯಕ್ಕೆ ಸಂಬಂಧಿಸಿ ಈ ಹಿಂದೆ ಭಿನ್ನವಾದ ಮತ್ತು ಪರಸ್ಪರ ವಿರುದ್ಧವಾದ ತೀರ್ಪುಗಳು ಬಂದಿವೆ. ಹಾಗಾಗಿ, ಈ ವಿಚಾರವನ್ನು ವಿಸ್ತ್ರತ ಪೀಠಕ್ಕೆ ವಹಿಸಲಾಗಿತ್ತು. ಈ ವಿಚಾರದಲ್ಲಿ ಸಂದರ್ಭಕ್ಕೆ ಅನುಗುಣವಾದ ನಿರ್ಧಾರವನ್ನು ತೆಗೆದುಕೊಳ್ಳಬೇಕು. ಅದು ಪ್ರಕರಣದಿಂದ ಪ್ರಕರಣ ಕ್ಕೆ ಭಿನ್ನವಾಗಿರಬಹುದು ಎಂದು ಸಂವಿಧಾನ ಪೀಠವು ಹೇಳಿದೆ. ಈ ಹಿಂದೆ ಈ ವಿಚಾರವನ್ನು ನ್ಯಾಯಮೂರ್ತಿ ವಿ.ಆರ್. ಕೃಷ್ಣ ಅಯ್ಯರ್ ಅವರು ರಂಗನಾಥ ರೆಡ್ಡಿ ಪ್ರಕರಣದಲ್ಲಿ 1978ರಲ್ಲಿ ವ್ಯಾಖ್ಯಾನಕ್ಕೆ ಒಳಪಡಿಸಿದ್ದರು. ಈ ವ್ಯಾಖ್ಯಾನವು ಸಂವಿಧಾನದ ಉದ್ದೇಶಕ್ಕೆ ವಿರುದ್ಧವಾಗಿದ್ದು, ನಿರ್ದಿಷ್ಟ ಆರ್ಥಿಕ ಸಿದ್ಧಾಂತವನ್ನು ಹೇರುವಂತಿದೆ ಎಂದು ಬಹುಮತದ ತೀರ್ಪಿನಲ್ಲಿ ಸಂವಿಧಾನ ಪೀಠವು ಹೇಳಿದೆ. ಸಾರ್ವಜನಿಕ ಉದ್ದೇಶಕ್ಕಾಗಿ ಸಂಪತ್ತಿನ ಮರುಹಂಚಿಕೆಗೆ ಹೆಚ್ಚಿನ ಮಹತ್ವ ಇರಬೇಕು ಎಂಬುದು ಆ ಕಾಲದ ಚಿಂತನೆಯಾಗಿತ್ತು; ಈ ಸಾಮಾಜಿಕ ತತ್ವಗಳು ಅಯ್ಯರ್ ಅವರ ವ್ಯಾಖ್ಯಾನದಲ್ಲಿ ಪ್ರತಿಫಲಿತವಾಗಿರಬಹುದು ಎಂದು ತೀರ್ಪಿನಲ್ಲಿ ಹೇಳಲಾಗಿದೆ. ಆರ್ಥಿಕ ನೀತಿಗೆ ಸಂಬಂಧಿಸಿ ಯಾವುದೇ ಸಿದ್ಧಾಂತ ಅಥವಾ ತತ್ವಗಳು ಸಂವಿಧಾನದಲ್ಲಿ ಉಲ್ಲೇಖವಾಗಿಲ್ಲ ಎಂಬುದನ್ನು ನ್ಯಾಯಾಲಯವು ಗುರುತಿಸಿದೆ. ಹಾಗಾಗಿ, ವ್ಯಕ್ತಿಗಳ ಖಾಸಗಿ ಸ್ವತ್ತುಗಳಿಗೆ ಸಂಬಂಧಿಸಿ ನಿರ್ದೇಶನಾತ್ಮಕ ತತ್ವಗಳಿಗೆ ಮಹತ್ವ ನೀಡುವುದು ಸರಿಯಲ್ಲ. ಸಂಪನ್ಮೂಲವು ನ್ಯಾಯಯುತವಾಗಿ ಹಂಚಿಕೆ ಆಗುವಂತೆ ನೋಡಿಕೊಳ್ಳಬೇಕಾದುದು ಸರ್ಕಾರದ ಹೊಣೆಗಾರಿಕೆ. ಆದರೆ, ಅದು ವೈಯಕ್ತಿಕ ಹಕ್ಕುಗಳಿಗೆ ಸಂಬಂಧಿಸಿದ ನಿಯಮಗಳ ಮಿತಿಯಲ್ಲಿಯೇ ಇರಬೇಕು. ಖಾಸಗಿ ಸಂಪನ್ಮೂಲವು ಸಮುದಾಯದ ಭೌತಿಕ ಸಂಪನ್ಮೂಲದ ಪರಿಧಿಯಲ್ಲಿ ಇದೆಯೇ ಎಂಬುದನ್ನು ನಿರ್ಧರಿಸಲು ನ್ಯಾಯಾಲಯವು ನಿರ್ದಿಷ್ಟ ಮಾನದಂಡಗಳನ್ನು ನೀಡಿದೆ. ಸಂಪನ್ಮೂಲದ ಲಕ್ಷಣಗಳು, ಅಂತಹ ಸಂಪನ್ಮೂಲದ ತೀವ್ರ ಕೊರತೆ ಮತ್ತು ಸಮಾಜದ ಅಭಿವೃದ್ಧಿಯ ಮೇಲೆ ಉಂಟಾಗುವ ಪರಿಣಾಮಗಳಂತಹ ಅಂಶಗಳನ್ನು ಗಣನೆಗೆ ತೆಗೆದುಕೊಳ್ಳಬಹುದು ಎಂದು ಹೇಳಿದೆ. ಖಾಸಗಿ ಮಾಲೀಕತ್ವಕ್ಕೆ ರಕ್ಷಣೆ ನೀಡಿದಾಗಲೂ ಸಾರ್ವಜನಿಕ ಬಳಕೆಗೆ ಲಭ್ಯವಿರುವ ನೈಸರ್ಗಿಕ ನಿಕ್ಷೇಪಗಳು ಅಥವಾ ಸ್ಪೆಕ್ಟ್ರಂನಂತಹ ಸಂಪನ್ಮೂಲಗಳ ವಿಚಾರದಲ್ಲಿ ಈ ತೀರ್ಪು ಅಡ್ಡಿಯಾಗುವುದಿಲ್ಲ. ಸಂವಿಧಾನವು ನೀಡಿರುವ ವೈಯಕ್ತಿಕ ಹಕ್ಕುಗಳಿಗೆ ಅನುಗುಣವಾಗಿ ಆರ್ಥಿಕ ನೀತಿಯನ್ನು ರೂಪಿಸಬೇಕು ಎಂಬುದಕ್ಕೆ ತೀರ್ಪಿನಲ್ಲಿ ಮಹತ್ವ ನೀಡಲಾಗಿದೆ. ಈವರೆಗೆ ಇದ್ದ ಅಸಮತೋಲನವನ್ನು ಸರಿಪಡಿಸುವಂತೆಯೂ ನ್ಯಾಯಾಲಯ ಸೂಚಿಸಿದೆ. 'ಆರ್ಥಿಕ ಪ್ರಜಾತಂತ್ರದ ನೆಲಗಟ್ಟು ರೂಪಿಸುವ ನೀತಿ ನಿರೂಪಕರ ಇಂಗಿತಕ್ಕೆ ನೆರವಾಗುವುದು ತನ್ನ ಕೆಲಸವೇ ಹೊರತು ಆರ್ಥಿಕ ನೀತಿ ರೂಪಿಸುವುದು ಅಲ್ಲ' ಎಂದು ಕೋರ್ಟ್ ಹೇಳಿದೆ. ಮುಂದಿನ ದಿನಗಳಲ್ಲಿ ರೂಪುಗೊಳ್ಳುವ ಕಾಯ್ದೆಗಳು ಮತ್ತು ಸರ್ಕಾರದ ನಿರ್ಧಾರಗಳನ್ನು ಈ ತೀರ್ಪಿನ ಆಧಾರದಲ್ಲಿ ನಿಕಷಕ್ಕೆ ಒಳಪಡಿಸಬಹುದು.

> **ಈ ಮೂರು ದಶಕಗಳು ಆರ್ಥಿಕ ಉದಾರೀಕರಣದ ಯುಗ. ಈ ಯುಗವು ವ್ಯಕ್ತಿಯ ಆಸ್ತಿ ಹೊಂದುವ ಹಕ್ಕು ಮತ್ತು ಅದನ್ನು ಅನುಭವಿಸುವ ಅವಕಾಶಕ್ಕೆ ಹೆಚ್ಚು ಮಹತ್ವ ಕೊಡುತ್ತದೆಯೇ ವಿನಾ ಸಾರ್ವಜನಿಕ ಬಳಕೆಗಾಗಿ ಸಮಾಜಕ್ಕೆ ಅದರ ಮೇಲೆ ಹಕ್ಕಿದೆ ಎಂಬುದಕ್ಕೆ ಅಲ್ಲ. ಸಂವಿಧಾನದ 39 (ಬಿ) ವಿಧಿಯ ಅಡಿಯಲ್ಲಿ, ಎಲ್ಲಾ ಖಾಸಗಿ ಸ್ವತ್ತುಗಳನ್ನು 'ಸಮುದಾಯದ ಭೌತಿಕ ಸಂಪನ್ಮೂಲ' ಎಂದು ಪರಿಗಣಿಸಿ ಮರು ಹಂಚಿಕೆ ಮಾಡಲು ಸಾಧ್ಯವಿಲ್ಲ ಎಂದು ನ್ಯಾಯಾಲಯವು ತೀರ್ಪಿನಲ್ಲಿ ಹೇಳಿದೆ.**

# ಕಡಲೆಕಾಯಿ ಪರಿಷೆ, 200ರ ಹುಣ್ಣಿಮೆ ಹಾಡು ಸಂಭ್ರಮಾಚರಣೆ
## ರೈತಸ್ನೇಹಿ ಮಲ್ಲೇಶ್ವರ ಕಡಲೆಕಾಯಿ ಪರಿಷೆ ಕನ್ನಡ ರಾಜ್ಯೋತ್ಸವ ಸ್ವಾಭಿಮಾನ ಆಚರಣೆ

• ಉದಯವಾಹಿನಿ, ಮಲ್ಲೇಶ್ವರ

ಶ್ರೀ ಭ್ರಮರಾಂಭ ಸಮೇತ ಶ್ರೀ ಕಾಡುಮಲ್ಲಿಕಾರ್ಜುನ ಸ್ವಾಮಿ ದೇವಸ್ಥಾನ ಮತ್ತು ಕಾಡುಮಲ್ಲೇಶ್ವರ ಗೆಳೆಯರ ಬಳಗ (ರಿ) ನೆಲ ಜಲ ಹಸಿರು ಸಂಸ್ಕೃತಿ ಮತ್ತು ಪರಂಪರೆ ಉಳಿಸುವ ನಮ್ಮ ಧ್ಯೆಯದಲ್ಲಿ ನೀವೂ ಭಾಗಿಯಾಗಿ

ಸಾಂಸ್ಕೃತಿಕ ದಾಖಲೆ ಬರೆದು ಬೆಳದಿಂಗಳ ಬೆಸದ 200ರಹುಣ್ಣಿಮೆ ಹಾಡು 2024 ರ ನವೆಂಬರ್ 15 ರಿಂದ 18 ರವರೆಗೆ 8ನೇ ರೈತಸ್ನೇಹಿ ಮಲ್ಲೇಶ್ವರ ಕಡಲೆಕಾಯಿ ಪರಿಷೆ ಕನ್ನಡ ರಾಜ್ಯೋತ್ಸವ ಸ್ವಾಭಿಮಾನ ಆಚರಣೆ ಕಾರ್ಯಕ್ರಮದ ಕುರಿತು ಮಾಧ್ಯಮಗೋಷ್ಠಿ.

ಕಾಡು ಮಲ್ಲೇಶ್ವರ ಗೆಳೆಯರ ಬಳಗದ ಅಧ್ಯಕ್ಷರಾದ ಬಿ.ಕೆ.ಶಿವರಾಂರವರು ಮತ್ತು ಸಮಾಜ ಸೇವಕರಾದ ಅನೂಪ್ ಅಯ್ಯಂಗಾರ್ ರವರು ಭಾಗವಹಿಸಿದ್ದರು, ಪದಾಧಿಕಾರಿಗಳಾದ ಚಂದ್ರಶೇಖರ್ ನಾಯ್ಡು, ಶ್ರೀವಲ್ಲಭ, ಚಂದ್ರಮೌಳಿ, ಎಲ್.ಎನ್.ಪ್ರಭು, ರಾಜಶಿಧರ್, ಡಾ||ಲೀಲಾ ಸಂಪಿಗೆ, ಹೇಮಂತ್ ರವರು ಉಪಸ್ಥಿತರಿದ್ದರು. ಇದೇ ಸಂದರ್ಭದಲ್ಲಿ ಅಧ್ಯಕ್ಷರಾದ ಬಿ.ಕೆ.ಶಿವರಾಂರವರು ಮಾತನಾಡಿ ಕನ್ನಡ ನಾಡಿನ ಕಲೆ, ಸಾಹಿತ್ಯ ಮತ್ತು ಸಂಸ್ಕೃತಿ ಉಳಿಯಬೇಕು ಮುಂದಿನ ಪೀಳಿಗೆಗೆ ಅದರ ಅರಿವು ಮೂಡಿಸಬೇಕು ಎಂಬ ಉದ್ದೇಶದಿಂದ ಜನವರಿ 30, 2010ರಲ್ಲಿ ಹುಣ್ಣಿಮೆ ಹಾಡು ಕಾರ್ಯಕ್ರಮ ಆರಂಭಿಸಲಾಯಿತು 14ವರ್ಷಗಳ ಕಾಲ ಸಾಗಿ ಬಂದಿದೆ 2024ರ ನವಂಬರ್ ನಲ್ಲಿ 200ನೇ ಹುಣ್ಣಿಮೆ ಹಾಡಿನ ಕಾರ್ಯಕ್ರಮ ಸಂಭ್ರಮಾಚರಣೆ.




ಉದಯವಾಹಿನಿ ಚಿತ್ರ

> **8ಲಕ್ಷಕ್ಕೂ ಹೆಚ್ಚು ಜನರು ಭಾಗವಹಿಸುವ ಸಾಧ್ಯತೆ**

ಯಕ್ಷಗಾನ, ನಾಟಕ, ಕರ್ನಾಟಕ ಸಂಗೀತ, ಬುಡ ಕಟ್ಟುಗಳ ಕಲಾಪ್ರದರ್ಶನ, ವಚನಗಾಯನ, ನೃತ್ಯ ನೂರಾರು ಕಾರ್ಯಕ್ರಮಗಳ ಹುಣ್ಣಿಮೆ ಹಾಡಿನಲ್ಲಿ ಕಲಾವಿದರು ಕಲಾ ಪ್ರದರ್ಶನ ಮಾಡಿದ್ದಾರೆ. ಜನರಿಗೆ ಅರಿವು ಮೂಡಿಸುವ ಜೊತೆಯಲ್ಲಿ ಕಲಾವಿದರಿಗೂ ಪ್ರೋತ್ಸಾಹ, ಸಹಕಾರ ನೀಡಲಾಗುತ್ತಿದೆ. ಬೆಂಗಳೂರಿನ ಬಸವನಗುಡಿ ಕಡಲೆಕಾಯಿ ಪರಿಷೆಯಂತೆ ಮಲ್ಲೇಶ್ವರಂ ಕಡಲೆಕಾಯಿ ಪರಿಷೆ ಪ್ರಸಿದ್ದಿ ಪಡೆದಿದೆ. ಕಳೆದ 8ವರ್ಷಗಳಿಂದ ಕಡಲೆಕಾಯಿ ಪರಿಷೆ ಕಾರ್ಯಕ್ರಮ ಯಶ್ವಸಿಯಾಗಿ ನಡೆಸಿಕೊಂಡು ಬರಲಾಗುತ್ತಿದೆ.

ನಾಲ್ಕು ದಿನಗಳ ಕಡಲೆಕಾಯಿ ಪರಿಷೆಯಲ್ಲಿ ಕರ್ನಾಟಕ, ತಮಿಳುನಾಡು, ಆಂಧ್ರ, ತೆಲಂಗಾಣದಿಂದ ರೈತರು ಕಡಲೆಕಾಯಿ ತಂದು ಮಾರಾಟ ಮಾಡಲಿದ್ದಾರೆ, ರೈತರು, ಬೀದಿ ಬದಿಯ ವ್ಯಾಪಾರಿಗಳಿಗೆ 400ಕ್ಕೂ ಹೆಚ್ಚು ಮಳಿಗೆಗಳಿಗೆ ಅವಕಾಶ ನೀಡಲಾಗಿದೆ.

> **ಈ ಬಾರಿ ಕಡಲೆಕಾಯಿ ಪರಿಷೆಯಲ್ಲಿ 8ಲಕ್ಷಕ್ಕೂ ಹೆಚ್ಚು ಜನರು ಭಾಗವಹಿಸುವ ಸಾಧ್ಯತೆ ಇದೆ, ಸೂಕ್ತ ರಕ್ಷಣಾ ವ್ಯವಸ್ಥೆ ಮಾಡಲಾಗಿದೆ ಹಾಗೂ ಬಂದ ಭಕ್ತಾಧಿಗಳಿಗೆ ಯಾವುದೇ ತೊಂದರೆಯಾಗದಂತೆ ನಿರ್ವಹಿಸಲು ನೂರಾರು ಸ್ವಯಂ ಸೇವಕರು ಕಾರ್ಯನಿರ್ವಹಿಸುತ್ತಿದ್ದಾರೆ ಎಂದು ಹೇಳಿದರು.**

ಪರಿಸರ ಸ್ನೇಹಿ ,ಸ್ವಚ್ಚತೆಗೆ ಆದ್ಯತೆ ನೀಡಲಾಗಿದೆ, ಪ್ಲಾಸ್ಟಿಕ್ ಮುಕ್ತ, ಕೈ ಬಟ್ಟೆ ಚೀಲ, ಪೇಪರ್ ಕವರ್‌ಗಳನ್ನು ಬಳಸಿ ಎಂದು ಸಾರ್ವಜನಿಕರಿಗೆ ಉಚಿತವಾಗಿ ನೀಡಲಾಗುತ್ತಿದೆ. ದಿನಾಂಕ 15.11.2024ನೇ ಶುಕ್ರವಾರ ಸಂಜೆ 6.30ಕ್ಕೆ

ಹುಣ್ಣಿಮೆ ಹಾಡು-200 ಹರಿದಾಸ-ಶಿವಶರಣ ಸಂಗಮ (ಹಿಂದುಸ್ತಾನಿ - ಕರ್ನಾಟಕ ಶಾಸ್ತ್ರೀಯ ಸಂಗೀತ ಜುಗಲ್ ಬಂದಿ ಕಾರ್ಯಕ್ರಮ) ಪಂಡಿತ್ ರವೀಂದ್ರ ಸೊರಗಾಂವಿ, ಹಿಂದುಸ್ತಾನಿ ಶಾಸ್ತ್ರೀಯ ಕಲಾವಿದರಿಂದ ''ವಚನ ಗಾಯನ'' ವಿದ್ವಾನ್ ಸಾಯಿತೇಜಸ್ ಚಂದ್ರಶೇಖರ್, ಕರ್ನಾಟಕ ಶಾಸ್ತ್ರೀಯ ಸಂಗೀತ ಕಲಾವಿದರಿಂದ ದಿನಾಂಕ 16.11.2024ನೇ ಶನಿವಾರ ಸಂಜೆ 6.30ಕ್ಕೆ ಹುಣ್ಣಿಮೆ ಹಾಡು-201 ಬೆಳದಿಂಗಳ ಬೆಸದ ಹುಣ್ಣಿಮೆ ಹಾಡು 200 ರ ಸಂಭ್ರಮದಲ್ಲಿ ಡಾ.ಹಂಸಲೇಖ ಮತ್ತು ತಂಡದವರಿಂದ ಸಂಗೀತ ಕಾರ್ಯಕ್ರಮ. ದಿನಾಂಕ 17.11.2024ನೇ ಭಾನುವಾರ ಬೆಳಗ್ಗೆ 11.00ಕ್ಕೆ ಹುಣ್ಣಿಮೆ ಹಾಡು-202 ಮಧು ಮನೋಹರನ್ ಮತ್ತು ಕಾರ್ತಿಕ್ ಪಾಂಡವಪುರ ತಂಡದವರಿಂದ ಅಪರೂಪದ ಭಾವಗೀತೆಗಳ ಕಾರ್ಯಕ್ರಮ

> **15-11-2024ರ ಶುಕ್ರವಾರ 4-30ಕ್ಕೆ ಮಾಜಿ ಕೇಂದ್ರ ಸಚಿವರಾದ ವೀರಪ್ಪಮೊಯ್ಲಿರವರು ಉದ್ಘಾಟನೆ ಮಾಡಲಿದ್ದಾರೆ. ಉಪಮುಖ್ಯಮಂತ್ರಿಗಳಾದ ಡಿ.ಕೆ.ಶಿವಕುಮಾರ್, ಸಾರಿಗೆ ಮತ್ತು ಮುಜರಾಯಿ ಸಚಿವರಾದ ರಾಮಲಿಂಗಾರೆಡ್ಡಿ, ಕನ್ನಡ ಸಂಸ್ಕೃತಿ ಇಲಾಖೆ ಸಚಿವ ಶಿವರಾಜ್ ತಂಗಡಗಿ, ವಿಧಾನಪರಿಷತ್ ಸದಸ್ಯ ಬಿ.ಕೆ. ಹರಿಪ್ರಸಾದ್, ಕೇಂದ್ರ ಸಚಿವೆ ಶೋಭ ಕರಂದ್ಲಾಜೆ, ಶಾಸಕರುಗಳಾದ ಡಾ||ಸಿ.ಎನ್. ಅಶ್ವಥ್ ನಾರಾಯಣ್, ಮುನಿರತ್ನರವರು ಭಾಗವಹಿಸಲಿದ್ದಾರೆ.**

ದಿನಾಂಕ 17.11.2024ನೇ ಭಾನುವಾರ ಸಂಜೆ 6.30ಕ್ಕೆ ಹುಣ್ಣಿಮೆ ಹಾಡು-203 ಸೃಷ್ಟಿ ನಿರಂತರ ಮತ್ತು ತಂಡದವರಿಂದ ಡಾ, ರಾಜ್ ನೆನಪಿನಲ್ಲಿ ವಿಶೇಷ ಸಂಗೀತ ಕಾರ್ಯಕ್ರಮ ದಿನಾಂಕ 18.11.2024ನೇ ಸೋಮವಾರ ಸಂಜೆ 4.30ಕ್ಕೆ ಶ್ರೀ ಭ್ರಮರಾಂಭ ಸಮೇತ ಶ್ರೀ ಕಾಡುಮಲ್ಲಿಕಾರ್ಜುನ ಸ್ವಾಮಿಯವರಿಗೆ ''ಕಡಲೆಕಾಯಿ ಅಭಿಷೇಕ ದಿನಾಂಕ 18.11.2024ನೇ ಸೋಮವಾರ ಸಂಜೆ 6.00ಕ್ಕೆ ಹುಣ್ಣಿಮೆ ಹಾಡು-204 ಭಾರತದ ಪ್ರಸಿದ್ಧ ಸಾರಂಗಿ ವಾದಕರು ಹಾಗೂ ಹಿಂದುಸ್ತಾನಿ ಗಾಯಕರಾದ ಉಸ್ತಾದ್ ಫಯಾಜ್‌ಖಾನ್ ರವರಿಂದ ''ಸಾರಂಗಿ ವಾದನ ಹಾಗೂ ಸಂಗೀತ ಕಾರ್ಯಕ್ರಮ ಮುಖ್ಯ ಅತಿಥಿಗಳು

# ತುಳಸಿಯೊಂದಿಗೆ ಶ್ರೀವಿಷ್ಣುವಿನ ಬಾಲಕೃಷ್ಣನ ಮೂರ್ತಿಯ ವಿವಾಹ

• ಉದಯವಾಹಿನಿ, ವಿಶೇಷ

**ತಿಥಿ :** ಈ ವಿಧಿಯನ್ನು ಕಾರ್ತಿಕ ಶುಕ್ಲ ದ್ವಾದಶಿಯಿಂದ ಹುಣ್ಣಿಮೆಯ ವರೆಗಿನ ಯಾವುದಾದರೊಂದು ದಿನ ಮಾಡುತ್ತಾರೆ.

**ಪೂಜೆ:** ತುಳಸಿಯೊಂದಿಗೆ ಶ್ರೀವಿಷ್ಣುವಿನ (ಬಾಲಕೃಷ್ಣನ ಮೂರ್ತಿಯ) ವಿವಾಹವನ್ನು ಮಾಡುವುದೇ ತುಳಸಿ ವಿವಾಹದ ವಿಧಿಯಾಗಿದೆ. ವಿವಾಹದ ಹಿಂದಿನ ದಿನ ತುಳಸಿ ಬೃಂದಾವನವನ್ನು ಬಣ್ಣ ಹಚ್ಚಿ ಅಲಂಕರಿಸುತ್ತಾರೆ. ಬೃಂದಾವನದಲ್ಲಿ ಕಬ್ಬು, ಚೆಂಡು ಹೂವುಗಳನ್ನು ಹಾಕುತ್ತಾರೆ ಮತ್ತು ಅದರ ಬುಡದಲ್ಲಿ ಹುಣಸೇಕಾಯಿ ಮತ್ತು ನೆಲ್ಲಿಕಾಯಿಗಳನ್ನು ಇಡುತ್ತಾರೆ. ಈ ವಿವಾಹದ ವಿಧಿಯನ್ನು ಸಾಯಂಕಾಲ ಮಾಡುತ್ತಾರೆ.

**ವೈಶಿಷ್ಟ್ಯ:** ತುಳಸಿ ವಿವಾಹದ ಬಳಿಕ ಚಾತುರ್ಮಾಸದಲ್ಲಿ ಕೈಗೊಂಡ ಎಲ್ಲಾ ವ್ರತಗಳನ್ನು ಸಮಾಪ್ತಗೊಳಿಸುತ್ತಾರೆ. ಚಾತುರ್ಮಾಸದಲ್ಲಿ ಯಾವ ಪದಾರ್ಥಗಳನ್ನು ವರ್ಜ್ಯ ಮಾಡಿರುತ್ತಾರೆಯೋ, ಆ ಪದಾರ್ಥಗಳನ್ನು ಬ್ರಾಹ್ಮಣರಿಗೆ ದಾನ ಮಾಡಿ ನಂತರ ತಾವೂ ಸೇವಿಸುತ್ತಾರೆ. ದೀಪಾವಳಿ ಹಬ್ಬದ ನಂತರ ಬರುವ ಇನ್ನೊಂದು ಹಬ್ಬ ತುಳಸಿ ಹಬ್ಬ ಅಥವಾ ತುಳಸಿ ಮದುವೆ. ಕಾರ್ತಿಕ ಮಾಸದ ಶುಕ್ಲ ಪಕ್ಷದ ದ್ವಾದಶಿಯಂದು ಈ ಪವಿತ್ರ ದಿನವನ್ನು ತುಳಸಿ ಮದುವೆಯನ್ನಾಗಿ ಆಚರಿಸುವರು.



ಅಂದಿನ ದಿನ ರೇವತಿ ನಕ್ಷತ್ರದ ಯೋಗವಿದ್ದರೆ ಇನ್ನೂ ಶ್ರೇಷ್ಠ. ಉತ್ಥಾನವೆಂದರೆ ಏಳು ಎಂಬರ್ಥ. ಶ್ರೀಮನ್ನಾರಾಯಣನು ತನ್ನ ನಿದ್ರಾವಸ್ಥೆಯಿಂದ ಹೊರ ಬಂದು ತನ್ನ ಭಕ್ತಾದಿಗಳಿಗೆ ದರ್ಶನ ಕೊಡುವನೆಂಬ ಪ್ರತೀತಿ ಇದೆ. ಆ ಭಗವಂತನು ಹಾಲ್ಗಡಲಿನಲ್ಲಿ ಮಲಗಿದ್ದು, ಅವನನ್ನು ಸುಪ್ರಭಾತ ಸೇವೆಯ ಮೂಲಕ ಎಬ್ಬಿಸುವುದರಿಂದ ಈ ವ್ರತವನ್ನು ಕ್ಷೀರಾಬ್ಧಿ ವ್ರತವೆಂದೂ ಕರೆಯುವರು. ಕಾರ್ತಿಕ ಶುಕ್ಲ ಪಕ್ಷ ಏಕಾದಶಿಯಂದು ಪ್ರಾತಃಕಾಲದಲ್ಲಿ ಕುಂಭದಾನವನ್ನು ಮಾಡಿ ಉಪವಾಸ ವ್ರತವನ್ನಾಚರಿಸಬೇಕು. ಅಂದು ಸೋಮವಾರವಾಗಿದ್ದು, ಉತ್ತರಾಷಾಢ ನಕ್ಷತ್ರವಾಗಿದ್ದರೆ ತುಂಬಾ ಶ್ರೇಷ್ಠ. ಅಂದಿನ ರಾತ್ರಿಯಂದೇ ವಿಷ್ಣುವನ್ನು ಎಬ್ಬಿಸಬೇಕು. ಹಾಗೆ ಎಬ್ಬಿಸುವಾಗ ಈ ಕೆಳಕಂಡ ವೇದೋಕ್ತ ಮಂತ್ರವನ್ನು ಹೇಳಬೇಕು.

**ಇದಂ ವಿಷ್ಣುರ್ವಿಚಕ್ರಮೇ ತ್ರೇಧಾ ನಿದಧೇ ಪದಮ್ ॥**

**ಸಮೂಢಮಸ್ಯ ಪಾಂಸುರೇ ॥**

ಮಳೆಗಾಲದ ನಾಲ್ಕು ತಿಂಗಳುಗಳಲ್ಲಿ ಮಳೆಯು ಹೆಚ್ಚಾಗಿದ್ದು, ಜನಜೀವನ ಅಸ್ತವ್ಯಸ್ತವಾಗಿರುತ್ತದೆ. ಇಂತಹ ಸಂದರ್ಭದಲ್ಲಿ ಸನ್ಯಾಸಿಗಳು ದೇಶ ಸಂಚಾರವನ್ನು ಮಾಡದೇ ಒಂದೆಡೆಯಲ್ಲಿ, ಚಾತುರ್ಮಾಸ್ಯ ವ್ರತವನ್ನು ಆಚರಿಸುವರು. ಆ ಸಂದರ್ಭದಲ್ಲಿ ಶ್ರೀಮನ್ನಾರಾಯಣನು ನಿದ್ರಾವಸ್ಥೆಯಲ್ಲಿರುತ್ತಾನೆಂದೂ, ಚಾತುರ್ಮಾಸ್ಯ ಮುಗಿಯುವ ವೇಳೆಯಲ್ಲಿ ಅವನನ್ನು ಎಬ್ಬಿಸಲು ಸುಪ್ರಭಾತವನ್ನು ಹಾಡುವರು. ಅದು ಸಂಕ್ಷಿಪ್ತವಾಗಿ ಹೀಗಿದೆ.

**ಉತ್ತಿಷ್ಠೋತ್ತಿಷ್ಠ ಗೋವಿಂದ ಉತ್ತಿಷ್ಠ ಗರುಡಧ್ವಜ ॥**
**ಉತ್ತಿಷ್ಠ ಕಮಲಾಕಾಂತ ತ್ರೈಲೋಕ್ಯಂ ಮಂಗಲಂಕುರು ॥**

ಚಾತುರ್ಮಾಸ್ಯದ ಕೊನೆಯ ಹಂತದ ಏಕಾದಶಿಯ ರಾತ್ರಿ ಒಂದು ಕುಂಭದಲ್ಲಿ ಉದ್ದಿನಕಾಳಿನ ಪ್ರಮಾಣದ ಚಿನ್ನದ ಮೀನಿನ ಮೂರ್ತಿಗೆ ಪಂಚಾಮೃತ ಅಭಿಷೇಕ ಮಾಡಿ, ಪೂಜಿಸಿ, ಅಂದು ಜಾಗರಣೆಯನ್ನು ಮಾಡಿ, ದ್ವಾದಶಿಯ ಬೆಳಗ್ಗೆ ಮತ್ತೆ ಪೂಜಿಸಿ ಬ್ರಾಹ್ಮಣರಿಗೆ ದಕ್ಷಿಣೆ ಸಮೇತವಾಗಿ ದಾನ ಮಾಡಬೇಕು. ಅಂದು ಧಾತ್ರೀ ದೇವಿಯ ಸ್ವರೂಪವಾದ ನೆಲ್ಲಿಯ ಮರವನ್ನು ಪೂಜಿಸಿ, ಧಾತ್ರೀ, ಶಾಂತಿ, ಮೇಧಾ, ಪ್ರಕೃತಿ, ವಿಷ್ಣುಪತ್ನೀ, ಮಹಾಲಕ್ಷ್ಮೀ, ರಮ್ಯಾ, ಕಮಲಾ, ಇಂದಿರಾ, ಲೋಕಮಾತಾ, ಕಲ್ಯಾಣೀ, ಕಮನೀಯಾ, ಸಾವಿತ್ರೀ, ಜಗದ್ಧಾತ್ರೀ, ಗಾಯತ್ರೀ, ಸುಧೃತೀ, ಅವ್ಯಕ್ತಾ, ವಿಶ್ವರೂಪಾ, ಸುರೂಪಾ ಮತು ಅಬ್ಧಿಭವಾ ಎಂಬ ಹೆಸರುಗಳಿಂದ ಅರ್ಚಿಸಬೇಕು. ಕೆಲವು ಮನೆಗಳಲ್ಲಿ ತುಲಸೀ ಮತ್ತು ಶ್ರೀಮನ್ನಾರಾಯಣನಿಗೆ ವಿವಾಹವನ್ನು ಮಾಡುವ ಪದ್ಧತಿಯೂ ಇದೆ.

ಭಗವಂತನಿಗೆ ಪುರುಷಸೂಕ್ತದಿಂದಲೂ ಮತ್ತು ತುಲಸಿ ದೇವಿಗೆ ಶ್ರೀಸೂಕ್ತದಿಂದಲೂ ಅರ್ಚನೆ ಮಾಡಬೇಕು. ತುಲಸಿಯ ಎದುರಿಗೆ ಶ್ರೀ ಕೃಷ್ಣನ ಪ್ರತಿಮೆಯನ್ನಿರಿಸಿ ಮಧ್ಯದಲ್ಲಿ ಅಂತರಪಟವನ್ನು ಹಿಡಿದು ಮದುವೆ ಮಾಡಿಸುತ್ತಾರೆ. ನೆಲ್ಲಿಯಲ್ಲಿ ವಾತ ಪಿತ್ತಗಳನ್ನು ಶಮನ ಮಾಡುವ ಶಕ್ತಿಯಿದೆ.

ರಕ್ತದೋಷವನ್ನೂ ನಿವಾರಿಸುವ ಶಕ್ತಿಯಿದೆ. ಅದರ ಹಾರವನ್ನು ತುಲಸೀ ಮತ್ತು ನಾರಾಯಣನಿಗೆ ಹಾಕುವುದು ಪದ್ಧತಿ. ಪ್ರಾತಃಕಾಲದಲ್ಲಿ ಪೂಜೆಯನ್ನು ಮಾಡಿದರೆ, ಸಂಜೆಯ ಸಮಯದಲ್ಲಿ ತುಲಸಿ ವಿವಾಹವನ್ನು ಮಾಡುವರು.

# 40 ಪರ್ಸೆಂಟ್ ಆರೋಪಕ್ಕೆ ಅಶೋಕ್ ಕಿಡಿ

• ಉದಯವಾಹಿನಿ, ಬೆಂಗಳೂರು

40 ಪರ್ಸೆಂಟ್ ಲಂಚ ಆರೋಪ ಮಾಡಿದ್ದ ಕಾಂಗ್ರೆಸ್‌ಗೆ ವಿಪಕ್ಷ ನಾಯಕ ಆರ್. ಅಶೋಕ್ ತಿರುಗೇಟು ನೀಡಿದ್ದಾರೆ. ನಮ ಸರ್ಕಾರದ ಮೇಲೆ 40 ಪರ್ಸೆಂಟ್ ಲಂಚ ಆರೋಪ ಮಾಡಿದ್ದ ಕಾಂಗ್ರೆಸ್ ಅಧಿಕಾರಕ್ಕೆ ಬಂದು ಒಂದೂವರೆ ವರ್ಷದ ಒಳಗೆ 60 ಪರ್ಸೆಂಟ್ ಲಂಚ ಪಡೆದು ರಾಜ್ಯವನ್ನು ಲೂಟಿ ಮಾಡುತ್ತಿದೆ ಎಂದು ವಾಗ್ದಾಳಿ ಮಾಡಿದ್ದಾರೆ.



> **ಸರ್ಕಾರದ ವಿರುದ್ಧ ಅಶೋಕ್ ಕಿಡಿ**

ಈ ಕುರಿತು ಸಾಮಾಜಿಕ ಮಾಧ್ಯಮ ಎಕ್ಸ್‌ನಲ್ಲಿ ಟ್ವೀಟ್ ಮಾಡಿ ಕಾಂಗ್ರೆಸ್ ಸರ್ಕಾರದ ವಿರುದ್ಧ ಹರಿಹಾಯ್ದಿದ್ದಾರೆ. 40 ಪರ್ಸೆಂಟ್ ಸರ್ಕಾರ ಎಂದು ಹಿಂದಿನ ಬಿಜೆಪಿ ಸರ್ಕಾರದ ವಿರುದ್ಧ ಸುಳ್ಳು, ಅಪಪ್ರಚಾರದ ಮೂಲಕ ಅಧಿಕಾರಕ್ಕೆ ಬಂದ ಕಾಂಗ್ರೆಸ್ ಪಕ್ಷ, 60 ಪರ್ಸೆಂಟ್ ಲಂಚ ಹೊಡೆದು ರಾಜ್ಯವನ್ನು ಲೂಟಿ ಮಾಡುತ್ತಿದೆ ಎಂದು ತಿರುಗೇಟು ನೀಡಿದ್ದಾರೆ. ನಗರಾಭಿವೃದ್ಧಿ ಇಲಾಖೆಯ ಮುಖ್ಯ ಕಾರ್ಯದರ್ಶಿಗಳಿಗೆ ಖಾಸಗಿ ಕಂಪನಿಯೊಂದು ಏಪ್ರಿಲ್ 22 ರಂದು ಬರೆದಿರುವ ಪತ್ರದಲ್ಲಿ ಕಾಂಗ್ರೆಸ್ ಸರ್ಕಾರದ 60 ಪರ್ಸೆಂಟ್ ಲಂಚಾವತಾರದ ಮುಖವಾಡವನ್ನು ಬಯಲು ಮಾಡಿದೆ.

ಸಿಎಂ ಸಿದ್ದರಾಮಯ್ಯನವರೇ, ಕರ್ನಾಟಕ ರಾಜ್ಯ ಮದ್ಯ ಮಾರಾಟಗಾರ ಸಂಘ ಬರೆದಿರುವ ಪತ್ರದಲ್ಲಿ 700 ಕೋಟಿ ರೂಪಾಯಿ ಲಂಚದ ಬಗ್ಗೆ ಆರೋಪ ಮಾಡಿದ್ದಾರೆ, ಈಗ ಖಾಸಗಿ ಕಂಪನಿಯೊಂದು 60 ಪರ್ಸೆಂಟ್ ಕಮಿಷನ್ ಆರೋಪ ಮಾಡುತ್ತಿದೆ. ದಿನ ಬೆಳಗಾದರೆ ಒಂದು ಹೊಸ ಹಗರಣದ ಕಥೆ ಕೇಳಿ ಕೇಳಿ ಕನ್ನಡಿಗರು ರೋಸಿ ಹೋಗಿದ್ದಾರೆ.

ಕನ್ನಡಿಗರ ತಾಳೆ ಪರೀಕ್ಷೆ ಮಾಡಬೇಡಿ. ಸಿದ್ದರಾಮಯ್ಯ ಅವರೇ ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ಕೊಟ್ಟು ಇರುವ ಅಲ್ಪ ಸ್ವಲ್ಪ ಗೌರವವನ್ನದರೂ ಉಳಿಸಿಕೊಳ್ಳಿ ಎಂದು ಆಗ್ರಹಿಸಿದ್ದಾರೆ.

## ಹೆಚ್ಚು ಆಸ್ತಿ ತೆರಿಗೆ ಬಾಕಿ ಉಳಿಸಿಕೊಂಡವರಿಗೆ ಬಿಗ್ ಶಾಕ್
# ಬಿಬಿಎಂಪಿಯಿಂದ ಕಟ್ಟಡಗಳಿಗೆ ಬೀಗ ಮುದ್ರೆ

• ಉದಯವಾಹಿನಿ, ಬೆಂಗಳೂರು

ಬಿಬಿಎಂಪಿ ವ್ಯಾಪ್ತಿಯಲ್ಲಿ ಹೆಚ್ಚು ಬಾಕಿ ಆಸ್ತಿ ತೆರಿಗೆ ಉಳಿಸಿಕೊಂಡಿರುವ ವಸತಿಯೇತರ ಕಟ್ಟಡಗಳಿಗೆ ಬೀಗ ಮುದ್ರೆ, ಹಾಕಿ ಬಾಕಿ ವಸೂಲಿ ಮಾಡಲು ಮುಖ್ಯ ಆಯುಕ್ತರಾದ ತುಷಾರ್ ಗಿರಿನಾಥ್ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಪಾಲಿಕೆ ವ್ಯಾಪ್ತಿಯಲ್ಲಿ ವಿವಿಧ ವಿಷಯಗಳಿಗೆ ಸಂಬಂಧಿಸಿದಂತೆ ಇಂದು ಮಲ್ಲೇಶ್ವರಂ ಐಪಿಪಿ ಸಭಾಂಗಣ ಕೊಠಡಿಯಲ್ಲಿ ನಡೆದ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ಹೆಚ್ಚು ಬಾಕಿ ಉಳಿಸಿಕೊಂಡಿರುವ ಸುಸ್ತಿದಾರರು ಹಾಗೂ ಪರಿಷ್ಕರಣೆ ಪ್ರಕರಣಗಳಿಗೆ ಸಂಬಂಧಿಸಿದಂತೆ ಆಯಾ ವಲಯ ವ್ಯಾಪ್ತಿಯಲ್ಲಿ ಸೂಕ್ತ ಕ್ರಮಗಳನ್ನು ಕೈಗೊಂಡು ಬಾಕಿ ಆಸ್ತಿ ತೆರಿಗೆಯನ್ನು ವಸೂಲಿ ಮಾಡಲು ಸೂಚನೆ ನೀಡಿದರು. ಬಿಬಿಎಂಪಿ ವ್ಯಾಪ್ತಿಯಲ್ಲಿ ಒಂದು ಬಾರಿ ಪರಿಹಾರ ಯೋಜನೆಯಡಿ ಆಸ್ತಿ ತೆರಿಗೆಯ ಬಾಕಿದಾರರಿಗೆ ಬಡ್ಡಿ ಮತ್ತು ದಂಡ ಮನ್ನಾ ಮಾಡಲಾಗಿದ್ದು, ಈ ಯೋಜನೆಯು 30ನೇ ನವೆಂಬರ್ ವರೆಗೆ ಮಾತ್ರ ಜಾರಿಯಲ್ಲಿರಲಿದೆ. ಈ ಸಂಬಂಧ ಪ್ರತಿಯೊಬ್ಬರೂ ಬಾಕಿ ಆಸ್ತಿ ತೆರಿಗೆಯನ್ನು 30ನೇ ನವೆಂಬರ್ ಒಳಗಾಗಿ BBMPtax.karnataka.gov.in ಗೆ ಭೇಟಿ ನೀಡಿ ಪಾವತಿಸಬೇಕು. ಇಲ್ಲವಾದಲ್ಲಿ 1ನೇ ಡಿಸೆಂಬರ್ 2024 ರಿಂದ ಪಾವತಿಸಬೇಕಿರುವ ಬಾಕಿ ಆಸ್ತಿ ತೆರಿಗೆಯು ದುಪ್ಪಟ್ಟಾಗಲಿದೆ ಎಂಬುದರ ಬಗ್ಗೆ ನಾಗರೀಕರಿಲ್ಲಿ ಅರಿವು ಮೂಡಿಸಬೇಕೆಂದು ಸೂಚಿಸಿದರು. ಈ ವೇಳೆ ವಿಶೇಷ ಆಯುಕ್ತರಾದ ಮುನೀಶ್ ಮೌದ್ಗಿಲ್, ಸುರಳ್ಕರ್ ವಿಕಾಸ್ ಕಿಶೋರ್, ಡಾ. ಕೆ ಹರೀಶ್ ಕುಮಾರ್, ಅವಿನಾಶ್ ಮೆನನ್ ರಾಜೇಂದ್ರನ್, ಪ್ರೀತಿ ಗೆಹ್ಲೋಟ್, ವಲಯ ಆಯುಕ್ತರಾದ ವಿನೋತ್ ಪ್ರಿಯಾ, ಸತೀಶ್, ಸ್ನೇಹಲ್, ಕರೀಗೌಡ, ಅರ್ಚನಾ, ರಮೇಶ್, ಗಿರೀಶ್, ಪ್ರಧಾನ ಅಭಿಯಂತರರು, ಮುಖ್ಯ ಅಭಿಯಂತರರು ಸೇರಿದಂತೆ ಇನ್ನಿತರೆ ಸಂಬಂಧಪಟ್ಟ ಅಧಿಕಾರಿಗಳು ಪಾಲ್ಗೊಂಡಿದ್ದರು.



ಉದಯವಾಹಿನಿ ಚಿತ್ರ

> **ಆಯಾ ವಲಯಗಳ ಸಹಾಯಕ ಕಂದಾಯ ಅಧಿಕಾರಿ ವ್ಯಾಪ್ತಿವಾರು ಸಭೆ ನಡೆಸಿ, ಉಪ ವಿಭಾಗಗಳ ವ್ಯಾಪ್ತಿಯಲ್ಲಿ ಹೆಚ್ಚು ಆಸ್ತಿ ತೆರಿಗೆ ಬಾಕಿ ಉಳಿಸಿಕೊಂಡಿರುವ ಹಾಗೂ ಪರಿಷ್ಕರಣೆ ಪ್ರಕರಣಗಳ ಪಟ್ಟಿಯ ಅನುಸಾರ ಬಾಕಿ ಆಸ್ತಿ ತೆರಿಗೆ ವಸೂಲಿ ಮಾಡಲು ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳಲು ಸೂಚನೆ ನೀಡಿದರು.**

# ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ
## ಶ್ರೀ ವಿಜಯದಾಸರ ಆರಾಧನಾ ಮಹೋತ್ಸವ ವಿಶೇಷ ಪೂಜೆ

• ಉದಯವಾಹಿನಿ, ಬೆಂಗಳೂರು

ಜಯನಗರ ಐದನೇ ಬಡಾವಣೆಯಲ್ಲಿರುವ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪರಮಪೂಜ್ಯ ಶ್ರೀ 1008 ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಆದೇಶಾನುಸಾರ ಶ್ರೀ ಮಠದ ಹಿರಿಯ ವ್ಯವಸ್ಥಾಪ ಕರಾದ ಆರ್‌ಕೆ ವಾದೀಂದ್ರಾಚಾರ್ ಅವರ ನೇತೃತ್ವದಲ್ಲಿ ಶ್ರೀ ವಿಜಯದಾಸರ ಆರಾಧನಾ ಮಹೋತ್ಸವದ ವಿಶೇಷ ಉತ್ಸವದ ಅಂಗವಾಗಿ ಮಹಾರಥೋತ್ಸವ ಶ್ರೀ ಹರಿ ಭಜನೆಯೊಂದಿಗೆ ವಿಶೇಷವಾಗಿ ನೆರವೇರಿತು ಎಂದು ಶ್ರೀ ನಂದಕಿಶೋರ ಆಚಾರ್ಯರು ತಿಳಿಸಿದರು

ಈ ಸಂದರ್ಭದಲ್ಲಿ ಭಕ್ತರು ಅನ್ನ ಸಂತರ್ಪಣೆಯ ಪ್ರಸಾದ ಸ್ವೀಕರಿಸಿ ಶ್ರೀ ಹರಿ ವಾಯು ಗುರುಗಳ ದಾಸರ ಅನುಗ್ರಹಕ್ಕೆ ಪಾತ್ರರಾದರು.



ಉದಯವಾಹಿನಿ ಚಿತ್ರ



# ರಾಮಾಯಣ
## ವಿಶ್ವಾಮಿತ್ರನ ವೃತ್ತಾಂತ

• ಹಿಂದಿನ ಸಂಚಿಕೆಯಿಂದ 23ನೆಯ ಅಧ್ಯಾಯ

ಆ ಕುಮಾರನಿಂದ ನಿನ್ನ ಕೀರ್ತಿಯು ಪ್ರಕಾಶವಾಗುವುದು' ಎಂದು ನುಡಿದು ಅಂತರಿಕ್ಷಮಾರ್ಗವಾಗಿ ಬ್ರಹ್ಮಲೋಕ ವನ್ನೈದಿದನು, ಕೆಲವು ದಿವಸಗಳ ಮೇಲೆ ಕುಶನಾಭನಿಗೆ ಧರ್ಮಿಷ್ಠನಾದ ಗಾಧಿಯು ಜನಿಸಿದನು. ಆತನು ನನಗೆ ತಂದೆಯು. ನಾನು ಕುಶವಂಶದಲ್ಲಿ ಜನಿಸಿದವನಾದ ಕಾರಣ ನನಗೆ ಕೌಶಿಕನೆಂಬ ಹೆಸರಾಯಿತು ಎಂದು ವಿಶ್ವಾಮಿತ್ರನು ರಘುನಾಥನಿಗೆ ಹೇಳಿದನು. ಈ ಪ್ರಕಾರದಲ್ಲಿ ಶ್ರೀರಾಮನಿಗೆ ತನ್ನ ವಂಶಾವಳಿಯನ್ನು ಹೇಳಿ ವಿಶ್ವಾಮಿತ್ರನು ಮತ್ತೆ ಆತನನ್ನು ನೋಡಿ ಕೇಳ್ಳಿ ರಘುನಾಥನೆ, ನನ್ನ ಒಡಹುಟ್ಟಿದವಳಾದ ಸತ್ಯವತೀ ಎಂಬವಳು ನನಗಿಂತಲೂ ಹಿರಿಯವಳು ಆಕೆಯನ್ನು ನಮ್ಮ ತಂದೆಯಾದ ಗಾಧಿಯು ಋಚೀಕನೆಂಬ ಮುನಿಗೆ ವಿವಾಹಮಾಡಿ ಕೊಟ್ಟನು, ಸತ್ಯವತಿಯು ತನ್ನ ಪತಿಯನ್ನು ಕೂಡಿ ಶರೀರಸಹಿತಳಾಗಿ ಸ್ವರ್ಗವನ್ನೈದಿದಳು ಆಕೆಯು ಕುಶವಂಶದಲ್ಲಿ ಜನಿಸಿದವಳಾದ ಕಾರಣ ಕೌಶಿಕೀ ಎನಿಸಿಕೊಂಡಳು.

ಆಕೆಯು ನದೀಸ್ವರೂಪಳಾಗಿ ಕೌಶಿಕೀ ಎನಿಸಿಕೊಂಡು ಜಗದ್ಧಿತಾರ್ಥವಾಗಿ ಪ್ರವಹಿಸುತ್ತಿದ್ದಾಳೆ. ಕೌಶಿಕಿಯು ನನ್ನ ಒಡಹುಟ್ಟಿದವಳಾದ ಕಾರಣ ಆ ನದಿಯು ಪ್ರವಹಿಸುವ ಬಳಿಯಲ್ಲಿ ಹಿಮವತ್ಪರ್ವತದ ತಪ್ಪಲಲ್ಲಿ ನಾನು ನಿಯಮಸ್ಥನಾಗಿದ್ದೆನು. ಕೌಶಿಕೀ ಎಂಬ ನದಿಯು ಪುಣ್ಯೋದಕವುಳ್ಳದ್ದು. ಅದನ್ನು ಒಂದು ನಿಯಮಕ್ಕಾಗಿ ಬಿಟ್ಟು ನಾನು ಸಿದ್ಧಾಶ್ರಮಕ್ಕೆ ಬಂದು ನನ್ನ ಸಾಮರ್ಥ್ಯದಿಂದ ಸಿದ್ಧನಾದೆನು ಶ್ರೀರಾಮ, ಇದು ನನ್ನ ಪೂರ್ವವೃತ್ತಾಂತ. ಈಗ ನನ್ನ ಆಶ್ರಮಕ್ಕೆ ಬಂದೆವು. ಸಾಯಂಕಾಲವು ಕಳೆಯಿತು. ಈವರೆಗೂ ಕಥೆಗಳನ್ನು ಹೇಳುತ್ತಲೇ ಅರ್ಧರಾತ್ರಿ ಕಳೆದುಹೋಯಿತು.

ವಿಶ್ವಾಮಿತ್ರನು ಅವರನ್ನು ನೋಡಿ ರಘುನಾಥ, ಸ್ವರ್ಣಾದಿ ಸಮಸ್ತ ಧಾತುಗಳಿಗೂ ಉತ್ಪತ್ತಿ ಸ್ಥಾನವಾದ ಹಿಮವತ್ಪರ್ವತಕ್ಕೆ ರೂಪಲಾವಣ್ಯಗಳುಳ್ಳ ಇಬ್ಬರು ಕುಮಾರಿಯರಾದರು. ಹಿಮವಂತನ ಹೆಂಡತಿಯಾದ ಮೇನಕೆಯಲ್ಲಿ ಮೊದಲು ಗಂಗೆಯೆಂಬ ಹಿರಿಯ ಕುಮಾರಿಯು ಜನಿಸಿದಳು. ಆ ಗಂಗೆಯನ್ನು ದೇವತೆಗಳು ಜಗದ್ಧಿತಾರ್ಥವಾಗಿ ಬೇಡಿದರು ಆಕೆಯ ತಂದೆಯು ಭಕ್ತರ ಇಷ್ಟವನ್ನು ಸಲ್ಲಿಸಬೇಕೆಂದು ಗಂಗೆಯನ್ನು ದೇವತೆಗಳಿಗೆ ಕೊಟ್ಟನು.

ಗಂಗೆಯು ಮೂರುಲೋಕಗಳನ್ನೂ ಪವಿತ್ರ ಮಾಡಬೇಕೆಂದು ದೇವತೆಗಳು ಬಯಸಿದರು ಎರಡನೆಯ ಕುಮಾರಿಯಾದ ಪಾರ್ವತೀದೇವಿಯು ಈಶ್ವರನನ್ನು ಕುರಿತು ತಪಸ್ಸು ಮಾಡಲು ಆಕೆಯನ್ನು ಈಶ್ವರನು ವಿವಾಹ ಮಾಡಿಕೊಂಡನು. ಈ ಇಬ್ಬರು ಕುಮಾರಿಯರೂ ಲೋಕಕ್ಕೆ ಜನನಿಯಾದರು. ಗಂಗಾನದಿಯು ಮೂರು ಲೋಕಗಳಲ್ಲಿಯೂ ಪ್ರವಾಹವುಳ್ಳವಳು. ಮೊದಲು ಆಕಾಶಮಾರ್ಗದಲ್ಲಿ ಪ್ರವಹಿಸಿ ಸ್ವರ್ಗಲೋಕವನ್ನು ಪವಿತ್ರ ಮಾಡಿದಳು ಎಂದು ಹೇಳಿದನು.

ಮುಂದುವರಿಯುವುದು...



## ಸಾಮಾಜಿಕ ಕಳಕಳಿ

**ಹೆಚ್.ಎಸ್.ಪ್ರತಿಮಾ ಹಾಸನ್**
ಸಾಹಿತಿ,ಶಿಕ್ಷಕಿ,ಸಾಮಾಜಿಕ ಚಿಂತಕಿ.ಹಾಸನ

**ಉದಯವಾಹಿನಿ, ವಿಶೇಷ**

ಮಾನಿನಿಯು ಕಳಿಸುತಲಿ ಸಾಗುವಳು ತಾಯಿನುಡಿ
ಗಾನವದು ಸುಮಧುರವು ಕೇಳುವುದಕೆ
ದಾನವದು ಎನ್ನದಿರು ಜೀವನಲಿ ಮುಖ್ಯವದು
ಮಾನವದು ಕರುನಾಡ ಲಕ್ಷ್ಮಿ ದೇವಿ........

ಮನೆಯಲ್ಲಿ ಹೆಣ್ಣು ಮಕ್ಕಳು ಪ್ರಥಮ ಭಾಷೆಯಾದಂತಹ ಕನ್ನಡವನ್ನು ಕಲಿಸುತ್ತಾ ಸಾಗುತ್ತಾರೆ. ಕನ್ನಡದ ಭಾಷೆಯು ತಾಯಿ ಭಾಷೆಯಾಗಿದ್ದು . ಕೇಳುವುದಕ್ಕೆ ಗಾನದ ರೂಪದಲ್ಲಿ ಸುಮಧುರವಾಗಿರುತ್ತದೆ. ಕನ್ನಡವನ್ನು ಕಲಿಸುವುದನ್ನ ದಾನವೆನ್ನದೆ ಪ್ರೀತಿಯಲ್ಲಿ ಸಾಗುತ್ತಾರೆ. ನಮ್ಮ ಕರುನಾಡಿನ ಮಾನವಾಗಿ ಅದು ಉಳಿಯಬೇಕೆಂಬುದು ಪ್ರತಿಯೊಬ್ಬರ ಆಶಯವು ಕೂಡ ಅಂತಹ ಆಶಯದಲ್ಲಿ ಬದುಕುತ್ತಿರುವಾಗ ಪ್ರತಿಯೊಬ್ಬರೂ ಕನ್ನಡವನ್ನು ಕಲಿಸುತ್ತಾ ಸಾಗುವುದು ಮುಖ್ಯವಾಗಿದೆ. ಅದರಲ್ಲಿ ಮನೆಯಲ್ಲಿ ಸ್ತ್ರೀಯಿಂದಲೇ ಆ ಸಮರ ಸಾಗುತ್ತದೆ. ಸಮರ ಎಂದರೆ ಅದು ಕಲಿಸುವಾಗ ತಾಯಿಗೆ ಇರುವ ತಾಳ್ಮೆಯು ಬಹಳಷ್ಟಿರುವುದರಿಂದ ಸಮರ ಎಂದು ಬಳಸಲಾಗುತ್ತದೆ. ಸ್ತ್ರೀ ಮನಸ್ಸು ಮಾಡಿದರೆ ಯಾವುದನ್ನು ಆದರೂ ಸಹ ಕಾರ್ಯರೂಪಕ್ಕೆ ತರುವವಳು ಎಂದರೆ ತಪ್ಪಲ್ಲ ಆ ಕಾರ್ಯಗಳಲ್ಲಿ ಕನ್ನಡವನ್ನು ಮಕ್ಕಳಿಗೆ ಕಲಿಸುವಲ್ಲಿ ಆಕೆಯ ಪಾತ್ರ ಬಹು ಮುಖ್ಯವಾಗಿರುತ್ತದೆ.



**ದಿನಕ್ಕೊಂದು ಮುಕ್ತಕ -22**

# ಜನ ಡಿಕೆಶಿ ಸೊಕ್ಕು ಮುರಿಯುತ್ತಾರೆ: ದೇವೇಗೌಡರು
## ರಾಷ್ಟ್ರೀಯ ಅಧ್ಯಕ್ಷರಾದ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರು ಹೇಳಿಕೆ

• ಉದಯವಾಹಿನಿ, ರಾಮನಗರ

ಜನವರಿಯೊಳಗೆ ರಾಜ್ಯ ಕಾಂಗ್ರೆಸ್ ಸರ್ಕಾರ ಬೀಳಲಿದೆ ಎಂದು ಕೇಂದ್ರ ಸಚಿವ ವಿ.ಸೋಮಣ್ಣ ಹೇಳಿದ್ದಾರೆ. ಅವರು ಭವಿಷ್ಯ ಹೇಳಿಲ್ಲ, ವಾಸ್ತವ ನುಡಿದ್ದಾರೆ ಎಂದು ಜೆಡಿಎಸ್ ರಾಷ್ಟ್ರೀಯ ಅಧ್ಯಕ್ಷರಾದ ಮಾಜಿ ಪ್ರಧಾನಿಗಳ ಹೆಚ್.ಡಿ.ದೇವೇಗೌಡರು ಹೇಳಿದರು. ಡಿಸಿಎಂ ಸೊಕ್ಕು ಮುರಿಯಲು ಚನ್ನಪಟ್ಟಣದ ಮಹಾಜನತೆ ನಿಖಿಲ್ ಕುಮಾರಸ್ವಾಮಿ ಅವರನ್ನು ಗೆಲ್ಲಿಸಬೇಕು ಎಂದು ಅವರು ಮನವಿ ಮಾಡಿದರು.

ಚನ್ನಪಟ್ಟಣದಲ್ಲಿ ಎನ್ ಡಿಎ ಮೈತ್ರಿಕೂಟದ ಅಭ್ಯರ್ಥಿ ನಿಖಿಲ್ ಕುಮಾರಸ್ವಾಮಿ ಅವರ ಪರ ನಡೆದ ಪ್ರಚಾರ ಸಭೆಯಲ್ಲಿ ಮಾತನಾಡಿದ ಅವರು, ಹಾಸನದ ಪ್ರಕರಣವನ್ನು ಬಳಸಿಕೊಂಡು, ಇಡೀ ದೇವೇಗೌಡರ ಕುಟುಂಬ ಮುಗಿಸಲು ಹುನ್ನಾರ ನಡೆದಿತ್ತು. ಜನವರಿಯೊಳಗೆ ರಾಜ್ಯ ಸರ್ಕಾರ ಬೀಳಲಿದೆ ಎಂದು ವಿ.ಸೋಮಣ್ಣ ಅವರು ಹೇಳಿದ ಬಗ್ಗೆ ಪ್ರತಿಕ್ರಿಯಿಸಿದ ಅವರು, ನನ್ನಂತೆಯೇ ಸೋಮಣ್ಣ ಅವರಿಗೂ ಜೋತಿಷ್ಯ ಕೇಳುವ ಅಭ್ಯಾಸ ಇರುವುದೇ ಸೋಜಿಗ. ಆದರೆ ಅವರು ಸತ್ಯವನ್ನೇ ಹೇಳಿದ್ದಾರೆ.

ಈ ಸರ್ಕಾರ ಬಹಳ ದಿನ ಇರುವುದಿಲ್ಲ ಎಂದು ಹೇಳಿದರು. ಒಂದು ಕಾಲದಲ್ಲಿ ನಾನು ಮತ್ತು ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಕಿತ್ತಾಡಿದ್ದೆವು. ಆದರೆ, ನಾವಿಬ್ಬರು ಈಗ ಒಂದಾಗಿರುವುದೇ ಈ ಭ್ರಷ್ಟ ಕಾಂಗ್ರೆಸ್ ಸರ್ಕಾರವನ್ನು ಕಿತ್ತೆಸೆಯಲು ಎಂದು ಅವರು ಯಡಿಯೂರಪ್ಪ ಅವರ ಕೈ ಹಿಡಿದು ಆಕ್ರೋಶ ವ್ಯಕ್ತಪಡಿಸಿದರು. ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರನ್ನು ಅರೆಸ್ಟ್ ಮಾಡಬೇಕು ಎಂದು ಡಿಸಿಎಂ ಡಿಕೆ ಶಿವಕುಮಾರ್ ನೀಡಿರುವ ಹೇಳಿಕೆ ಬಗ್ಗೆ ಆಕ್ರೋಶ ವ್ಯಕ್ತಪಡಿಸಿದ ಅವರು, ಡಿಕೆಶಿ ಅವರಿಗೆ ಅವರ ಮಾತುಗಳೇ ಮುಳುವಾಗಲಿದೆ ಎಂದು ವಾಗ್ದಾಳಿ ನಡೆಸಿದರು. ತಮ್ಮ ಮಗನನ್ನು ಚುನಾವಣೆಗೆ ನಿಲ್ಲಿಸಲು 50 ಕೋಟಿ ಹಣಕ್ಕಾಗಿ ಮಹಾನುಭಾವನೊಬ್ಬನಿಗೆ ಬೆದರಿಕೆ ಹಾಕಿದ್ದಾರೆ ಎಂಬ ಆರೋಪಿ ಸ್ಥಾನದಲ್ಲಿ ಕುಮಾರಸ್ವಾಮಿ ಇದ್ದಾರೆ. ಆದರೆ, ಇದೇ ಚನ್ನಪಟ್ಟಣದ ಮಹಾಜನತೆಯಿಂದಲೇ ಸಿಎಂ ಆಗಿದ್ದ ಕುಮಾರಸ್ವಾಮಿಗೆ ಅಂತಹ ಅನಿವಾರ ಯತೆಯೇ ಇಲ್ಲ. ಕಾಂಗ್ರೆಸ್ ಎಂದಿಗೂ ನಂಬಿಕೆಗೆ ಅರ್ಹರಲ್ಲ ಎಂದು ಅವರ ಜತೆ ಸಹವಾಸವೇ ಬೇಡ ಎಂದು ಕುಮಾರಸ್ವಾಮಿಗೇ ಹೇಳಿದ್ದೆ. ಆದರೆ, ಎಚ್‌ಡಿಕೆ ಮೇಲೆ ಒತ್ತಡ ಹಾಕಿ, ಅವರೊಂದಿಗೆ ಕಾಂಗ್ರೆಸ್ ಸರ್ಕಾರ ರಚಿಸಲಾಗಿತ್ತುಎಂದು ಮಾಜಿ ಪ್ರಧಾನಿಗಳು ವಿಷಾದಿಸಿದರು. ನಿಖಿಲ್ ಕುಮಾರಸ್ವಾಮಿ ಅವರ ನಮ್ಮ ಅಭ್ಯರ್ಥಿ ಎಂದು 11 ದಿನದ ಹಿಂದೆ ಯಾರು ಹೇಳಿರಲಿಲ್ಲ. ಆದರೆ, 6 ತಿಂಗಳಿನಿಂದ ನಾನೇ ಅಭ್ಯರ್ಥಿ ಎಂದು ಹೇಳಿಕೊಳ್ಳುತ್ತಿದ್ದ ಡಿ.ಕೆ.ಶಿವಕುಮಾರ್‌ಗೆ ಈಗ ಏನಾಗಿದೆ? ಅವರ ಬದಲು ಮತ್ತೊಬ್ಬರು ಅಖಾಡದಲ್ಲಿದ್ದಾರೆ ಎಂದು ಅವರು ತಿರುಗೇಟು ಕೊಟ್ಟರು. ಸಿದ್ದರಾಮಯ್ಯ ಅವರನ್ನು ಹಣಕಾಸು ಸಚಿವರನ್ನಾಗಿ ಮಾಡಿದ್ದೆ ಈ ದೇವೇಗೌಡ. ಮತ್ತೆ ಅವರೇನು ಎಂದು ಹೇಳಲು ನಾನು ಹೋಗಲ್ಲ. ನಿಖಿಲ್ ನನ್ನ ಮೊಮ್ಮಗ ಎನ್ನುವ ಮಾತು ಬೇಕಿಲ್ಲ. ನಾಮಪತ್ರ ಸಲ್ಲಿಸುವವರೆಗೂ ನಿಖಿಲ್ ಹೆಸರನ್ನು ನಾನು ಉಲ್ಲೇಖಿಸಲೇ ಇಲ್ಲ.



ಉದಯವಾಹಿನಿ ಚಿತ್ರ

> **ಮಹಾನುಭಾವ ಎನ್ನುವ ಡಿಕೆಶಿಯ ಸೊಕ್ಕು ಮುರಿಯಲು ನಿಖಿಲ್ ಗೆಲುವು ಅನಿವಾರಯ. ಪುಣ್ಯಾತ್ಮರಾದ ಮತದಾರರ ನಿರ್ಣಯವೇ ಎಲ್ಲದಕ್ಕೂ ಉತ್ತರ ನೀಡಲಿದೆ ಎಂದರು. ನಾನು ಮತ್ತೆ ಕ್ಷೇತ್ರಕ್ಕೆ ಬರುತ್ತೇನೆ. ಎಲ್ಲರೂ ತಪ್ಪದೇ ಮತದಾನ ಮಾಡಿ. ಇದೇ ತಿಂಗಳ 24ರ ಬೆಳಗ್ಗೆ ನಾನು ಯಡಿಯೂರಪ್ಪ ಅವರು ಒಟ್ಟಿಗೆ ಬಂದು ಮತದಾರರಿಗೆ ಕೃತಜ್ಞತೆ ಸಲ್ಲಿಸುತ್ತೇವೆ ಎಂದು ದೇವೇಗೌಡರು ಹೇಳಿದರು.**

# ಅಮೆರಿಕದ ಮುಂದಿನ ಅಧ್ಯಕ್ಷರಾಗಿ ಕಮಲಾ ಆಯ್ಕೆ ಸಾಧ್ಯತೆ

## ಸೋತ್ರೂ ಕಮಲಾ ಹ್ಯಾರಿಸ್‌ಗೆ ಖುಲಾಯಿಸ್ತಾ ಅದೃಷ್ಟ? ಡೊನಾಲ್ಡ್ ಟ್ರಂಪ್‌ಗಿಂತ ಮುನ್ನವೇ ಅಮೆರಿಕ ಅಧ್ಯಕ್ಷೆ

**ವಾಷಿಂಗ್ಟನ್:** ತೀವ್ರ ಕುತೂಹಲ ಕೆರಳಿಸಿದ್ದ ಅಮೆರಿಕದ ಅಧ್ಯಕ್ಷೀಯ ಚುನಾವಣೆ ಮುಗಿದಿದೆ. ಡೆಮಾಕ್ರಟಿಕ್‌ನ ಕಮಲಾ ಹ್ಯಾರಿಸ್ ಎದುರು ರಿಪಬ್ಲಿಕನ್ ಪಾರ್ಟಿಯ ಡೊನಾಲ್ಡ್ ಟ್ರಂಪ್ ಭರ್ಜರಿ ಗೆಲುವು ಸಾಧಿಸಿದ್ದಾರೆ. ಡೊನಾಲ್ಡ್ ಟ್ರಂಪ್ ಅಮೆರಿಕದ 47ನೇ ಅಧ್ಯಕ್ಷರಾಗುವುದು ಬಹುತೇಕ ಖಚಿತವಾಗಿದೆ. ಇದರ ನಡುವೆಯೇ ಚುನಾವಣೆ ಸೋತಿರುವ ಹಾಲಿ ಉಪಾಧ್ಯಕ್ಷೆ ಕಮಲಾ ಹ್ಯಾರಿಸ್ 47ನೇ ಅಧ್ಯಕ್ಷರಾಗುವ ಸಾಧ್ಯತೆ ಇದೆ. ಈ ಬಗ್ಗೆ ಅಮೆರಿಕ ಹಾಗೂ ಡೆಮಾಕ್ರಟಿಕ್ ಪಾರ್ಟಿಯಲ್ಲಿ ಭಾರೀ ಚರ್ಚೆ ನಡೆಯುತ್ತಿದ್ದು, ಕಮಲಾ ಹ್ಯಾರಿಸ್‌ಗೆ ಅದೃಷ್ಟ ಖುಲಾಯಿಸುವ ನಿರೀಕ್ಷೆ ಇದೆ. ಇದರೊಂದಿಗೆ ಚುನಾವಣೆಯಲ್ಲಿ ಸೋತರು ಅಧ್ಯಕ್ಷರಾಗಬಹುದಾ ಎಂಬ ಪ್ರಶ್ನೆ ಎಲ್ಲರ ತಲೆಯಲ್ಲೂ ಬಂದಿದೆ.

ಹೌದು, ಅಮೆರಿಕ ಅಧ್ಯಕ್ಷೀಯ ಚುನಾವಣೆಯಲ್ಲಿ ಸೋತಿರುವ ಕಮಲಾ ಹ್ಯಾರಿಸ್ ಮುಂದಿನ ಅಧ್ಯಕ್ಷರಾಗುವ ಎಲ್ಲಾ ಸಾಧ್ಯತೆಯೂ ಇದೆ. ಕಮಲಾ ಹ್ಯಾರಿಸ್‌ನ ಮಾಜಿ ಸಂವಹನ ನಿರ್ದೇಶಕರ ಹೇಳಿಕೆ ಈ ಎಲ್ಲಾ ಸಾಧ್ಯತೆಗಳನ್ನು ತೆರೆದಿಟ್ಟಿದೆ. ಕಮಲಾ ಹ್ಯಾರಿಸ್ ಅವರ ಆಪ್ತರಾಗಿರುವ ಜಮಲ್ ಸಿಮನ್ಸ್ ಹಾಲಿ ಅಧ್ಯಕ್ಷ ಜೋ ಬೈಡೆನ್‌ಗೆ ವಿಚಿತ್ರ ಸಲಹೆ ನೀಡಿದ್ದು, ನೀವು ರಾಜೀನಾಮೆ ನೀಡಿ



ಕಮಲಾ ಹ್ಯಾರಿಸ್ ಅವರನ್ನು ಅಮೆರಿಕದ 47ನೇ ಅಧ್ಯಕ್ಷರನ್ನಾಗಿ ಮಾಡಿ ಎಂದು ಒತ್ತಾಯಿಸಿದ್ದಾರೆ. ಈ ಮೂಲಕ ಕಮಲಾ ಹ್ಯಾರಿಸ್‌ಗೆ ಅಧ್ಯಕ್ಷರಾಗಲು ಇನ್ನೂ ಅವಕಾಶ ಇದೆ ಎಂಬುದನ್ನು ತೆರೆದಿಟ್ಟಿದ್ದಾರೆ.

**ಕಮಲಾ ಹ್ಯಾರಿಸ್ ಆಪ್ತನಿಂದ ಬೈಡೆನ್‌ಗೆ ಬಿಗ್ ಸಲಹೆ:** ಸಿಎನ್‌ಎನ್ ವಾಹಿನಿಯ ಚರ್ಚೆಯಲ್ಲಿ ಭಾಗವಹಿಸಿದ್ದ ಅವರು ಜಮಲ್ ಸಿಮನ್ಸ್ ಮುಂದಿನ 30 ದಿನಗಳಲ್ಲಿ ಜೋ ಬೈಡೆನ್ ಅಧ್ಯಕ್ಷ ಸ್ಥಾನಕ್ಕೆ ರಾಜೀನಾಮೆ ನೀಡಿ ಉಪಾಧ್ಯಕ್ಷೆ ಕಮಲಾ ಹ್ಯಾರಿಸ್ ಅನ್ನು ಅಧ್ಯಕ್ಷರನ್ನಾಗಿ ನೇಮಕ ಮಾಡಬೇಕು ಎಂದು ಹೇಳಿದ್ದಾರೆ. ಮುಂದೆ ಬೈಡೆನ್ ಏನೆಲ್ಲಾ ಕೆಲಸ ಮಾಡಬೇಕು ಎಂಬ ಪ್ರಶ್ನೆಗೆ ಸಿಮನ್ಸ್ ಈ ಉತ್ತರ ನೀಡಿದ್ದಾರೆ. ಜೋ ಬೈಡೆನ್ ಅದ್ಭುತ ಅಧ್ಯಕ್ಷರಾಗಿದ್ದು, ಅವರು ನೀಡಿದ ಹಲವು ಭರವಸೆಗಳನ್ನು ಈಗಾಗಲೇ ಈಡೇರಿಸಿದ್ದಾರೆ. ಇನ್ನೊಂದು ಭರವಸೆಯನ್ನು ಅವರು ಈಡೇರಿಸಲು ಸಾಧ್ಯವಿದೆ. ಅಮೆರಿಕಕ್ಕೆ ಮೊದಲ ಮಹಿಳಾ ಅಧ್ಯಕ್ಷರನ್ನು ಕೊಡುವ ಅವಕಾಶ ಅವರ ಕೈಯಲ್ಲಿ ಇದೆ. ಅವರು ಪರಿವರ್ತನೆಯ ವ್ಯಕ್ತಿ ಎಂದು ಹೇಳಿದ್ದಾರೆ.

### ಹ್ಯಾರಿಸ್‌ಗೆ ಅದೃಷ್ಟ

**ಕೆಲ ದಿನಗಳ ಹಿಂದಷ್ಟೇ ಅಮೆರಿಕ ಅಧ್ಯಕ್ಷೀಯ ಚುನಾವಣೆ ಮುಗಿದಿದ್ದು, ರಿಪಬ್ಲಿಕನ್ ಪಾರ್ಟಿಯ ಡೊನಾಲ್ಡ್ ಟ್ರಂಪ್ ಕಮಲಾ ಹ್ಯಾರಿಸ್ ವಿರುದ್ಧ ಭರ್ಜರಿ ಜಯಗಳಿಸಿದ್ದಾರೆ. ಟ್ರಂಪ್ ಅವರೇ ಅಮೆರಿಕದ 47ನೇ ಅಧ್ಯಕ್ಷರಾಗಲಿದ್ದಾರೆ. ಇದರ ನಡುವೆ ಅಮೆರಿಕದಲ್ಲಿ ಒಂದಿಷ್ಟು ಬೆಳವಣಿಗೆಗಳು ಆಗುತ್ತಿದ್ದು, ಟ್ರಂಪ್‌ಗಿಂತ ಮುನ್ನ ಸೋತ ಕಮಲಾ ಹ್ಯಾರಿಸ್ ಅಮೆರಿಕದ ಅಧ್ಯಕ್ಷರಾಗುವ ನಿರೀಕ್ಷೆ ಇದೆ. ಈ ಬಗ್ಗೆ ಚರ್ಚೆ ನಡೆಯುತ್ತಿದ್ದು, ಜೋ ಬೈಡೆನ್ ಅವರ ನಡೆಯ ಮೇಲೆ ಕಮಲಾ ಹ್ಯಾರಿಸ್‌ಗೆ ಅದೃಷ್ಟ ಖುಲಾಯಿಸುವ ಸಾಧ್ಯತೆ ಇದೆ.**

- **ಚುನಾವಣೆಯಲ್ಲಿ ಸೋತ್ರೂ ಕಮಲಾ ಹ್ಯಾರಿಸ್‌ಗೆ ಲಕ್**
- **ನೀವು ರಾಜೀನಾಮೆ ನೀಡಿ ಹ್ಯಾರಿಸ್‌ಗೆ ಪಟ್ಟ ಕೊಡಿ!**
- **ಕಮಲಾ ಹ್ಯಾರಿಸ್ ಆಪ್ತನಿಂದ ಬೈಡೆನ್‌ಗೆ ಬಿಗ್ ಸಲಹೆ!**

**ಅಮೆರಿಕದಲ್ಲಿ ಸೋತ್ರೂ ಅಧ್ಯಕ್ಷರಾಗಬಹುದಾ?:** ಸಿಮನ್ಸ್ ಹೇಳಿಕೆಯ ಬೆನ್ನಲ್ಲೇ ಅಮೆರಿಕದಲ್ಲಿ ಭಾರೀ ಚರ್ಚೆ ನಡೆಯುತ್ತಿದೆ. ಚುನಾವಣೆಯಲ್ಲಿ ಸೋತರೂ ಕೂಡ ಅಧ್ಯಕ್ಷರಾಗಬಹುದಾ? ಅದಕ್ಕೆ ಕಾನೂನಿನಲ್ಲಿ ಅವಕಾಶ ಇದೆಯಾ? ಎಂಬ ಮಾತುಗಳು ಬರುತ್ತಿವೆ. ಹೌದು, ಚುನಾವಣೆಯಲ್ಲಿ ಸೋತರೂ ಕೂಡ ಉಪಾಧ್ಯಕ್ಷೆಯಾಗಿರುವ ಕಮಲಾ ಹ್ಯಾರಿಸ್ ಮುಂದಿನ ಅಧ್ಯಕ್ಷರಾಗಬಹುದು. ಅಧ್ಯಕ್ಷೀಯ ಚುನಾವಣೆಯಲ್ಲಿ ಡೊನಾಲ್ಡ್ ಟ್ರಂಪ್ ಗೆದ್ದಿದ್ದರು ಕೂಡ ಅವರ ಅಧಿಕೃತ ಆಯ್ಕೆಯಾಗುವುದು ಜನವರಿ 6 ರಂದು. ಅವರು ಅಧಿಕಾರ ಸ್ವೀಕರಿಸೋದು ಜನವರಿ 20ರಂದು. ಅಂದ್ರೇ ಇನ್ನೂ ಎರಡು ತಿಂಗಳ ಕಾಲ ಹಾಲಿ ಅಧ್ಯಕ್ಷ ಜೋ ಬೈಡೆನ್ ಅವರೇ ಅಧಿಕಾರದಲ್ಲಿ ಮುಂದುವರೆಯುತ್ತಾರೆ. ಅವರೇನಾದ್ರೂ ರಾಜೀನಾಮೆ ನೀಡಿದರೆ ಉಪಾಧ್ಯಕ್ಷೆಯಾಗಿರುವ ಕಮಲಾ ಹ್ಯಾರಿಸ್ ಅವರು ಅಧ್ಯಕ್ಷರಾಗಬಹುದು. ಅಧ್ಯಕ್ಷರಾದರು ಕೂಡ ಜನವರಿ 6ರವರೆಗೆ ಮಾತ್ರ ಅವರ ಅಧಿಕಾರಾವಧಿ ಇರುತ್ತದೆ.

**ಚುನಾವಣೆಯಲ್ಲಿ ಡೊನಾಲ್ಡ್ ಟ್ರಂಪ್‌ಗೆ ಜಯ:** ಇದು ಸಿಮನ್ಸ್ ಹೇಳಿಕೆ ಮಾತ್ರ ಆಗಿದ್ದು, ಡೆಮಾಕ್ರಟಿಕ್ ಪಕ್ಷದಲ್ಲಿ ಈ ಬಗ್ಗೆ ಚರ್ಚೆ ನಡೆಯುತ್ತಿರುವ ರೀತಿ ಕಾಣುತ್ತಿಲ್ಲ. ಅಮೆರಿಕದ ಮೊದಲ ಮಹಿಳಾ ಅಧ್ಯಕ್ಷೆಯನ್ನು ಕೊಟ್ಟು ಇತಿಹಾಸ ಸೃಷ್ಟಿಸಬೇಕು ಎಂಬ ಇರಾದೆ ಇದ್ದರೆ, ಜೋ ಬೈಡೆನ್ ರಾಜೀನಾಮೆ ನೀಡಿ ಕಮಲಾ ಹ್ಯಾರಿಸ್ ಅನ್ನು ಹೊಸ ಅಧ್ಯಕ್ಷರನ್ನಾಗಿ ಮಾಡಬಹುದು.

ಆಗ ಡೊನಾಲ್ಡ್ ಟ್ರಂಪ್ ಅಮೆರಿಕದ 48ನೇ ಅಧ್ಯಕ್ಷರಾಗಿ ಅಧಿಕಾರ ಸ್ವೀಕರಿಸಲಿದ್ದಾರೆ. ಇತ್ತೀಚೆಗೆ ನಡೆದ ಅಧ್ಯಕ್ಷೀಯ ಚುನಾವಣೆಯಲ್ಲಿ 538 ಎಲೆಕ್ಟ್ರೋಲ್ ವೋಟ್‌ಗಳ ಪೈಕಿ ಡೊನಾಲ್ಡ್ ಟ್ರಂಪ್ 312 ಎಲೆಕ್ಟ್ರೋಲ್ ವೋಟ್‌ಗಳನ್ನು ಪಡೆದು ಗೆಲುವು ಸಾಧಿಸಿದ್ದರೆ, ಕಮಲಾ ಹ್ಯಾರಿಸ್ 226 ಎಲೆಕ್ಟ್ರೋಲ್ ವೋಟ್‌ಗಳನ್ನು ಪಡೆದು ಸೋಲು ಅನುಭವಿಸಿದ್ದಾರೆ.

---

## ಫಡ್ನವಿಸ್ ಪೂರ್ವಜರು ಆಂಗ್ಲರಿಗೆ ಪ್ರೇಮ ಪತ್ರ ಬರೆದಿದ್ದರು: ಅಸಾದುದ್ದೀನ್ ಓವೈಸಿ

**ಛತ್ರಪತಿ ಸಂಭಾಜಿನಗರ:** ಮಹಾರಾಷ್ಟ್ರ ಉಪಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ಅವರ ವೋಟ್ ಜಿಹಾದ್ ಹೇಳಿಕೆಯನ್ನು ಗುರಿಯಾಗಿಸಿಕೊಂಡಿರುವ ಎಐಎಂಐಎಂ ಮುಖ್ಯಸ್ಥ ಅಸಾದುದ್ದೀನ್ ಓವೈಸಿ ಅವರು ಬಿಜೆಪಿ ನಾಯಕನ ಪೂರ್ವಜರು ಬ್ರಿಟಿಷರ ವಿರುದ್ಧ ಹೋರಾಡುವ ಬದಲು ಅವರಿಗೆ ಪ್ರೇಮ ಪತ್ರಗಳನ್ನು ಬರೆದಿದ್ದರು ಎಂದು ಟಾಂಗ್ ನೀಡಿದ್ದಾರೆ.

ಸಾರ್ವಜನಿಕ ಸಭೆಯನ್ನುದ್ದೇಶಿಸಿ ಮಾತನಾಡಿದ ಓವೈಸಿ, ಪ್ರಧಾನಿ ನರೇಂದ್ರ ಮೋದಿಯವರ ಏಕ್ ಹೈ ತೋ ಸೇಫ್ ಹೈ ಘೋಷಣೆಯು ವೈವಿಧ್ಯತೆಯ ನೀತಿಗೆ ವಿರುದ್ಧವಾಗಿದೆ ಎಂದು ಆರೋಪಿಸಿದರು. ಮಹಾರಾಷ್ಟ್ರದಲ್ಲಿ ವೋಟ್ ಜಿಹಾದ್ ಪ್ರಾರಂಭವಾಗಿದೆ ಎಂದು ಫಡ್ನವೀಸ್ ಶನಿವಾರ ಹೇಳಿದ್ದಾರೆ ಇದನ್ನು ಮತದ ಧರ್ಮ ಯುದ್ಧದಿಂದ ಎದುರಿಸಬೇಕು. ಧುಲೆ ಲೋಕಸಭಾ ಕ್ಷೇತ್ರದಲ್ಲಿ ಬಿಜೆಪಿಯ ಅಲ್ಪ ಸೋಲನ್ನು ಅವರು ಉಲ್ಲೇಖಿಸಿದ್ದರು.

ಧರ್ಮಯುದ್ಧ-ಜಿಹಾದ್ ಹೇಳಿಕೆಗಳು ಚುನಾವಣಾ ನೀತಿ ಸಂಹಿತೆಯ ಉಲ್ಲಂಘನೆಯಾಗಿದೆ ಎಂದು ಓವೈಸಿ ಹೇಳಿದ್ದಾರೆ.



> **ನಮ ಪೂರ್ವಜರು ಬ್ರಿಟಿಷರ ವಿರುದ್ಧ ಜಿಹಾದ್ ಮಾಡಿದರು ಮತ್ತು ಫಡ್ನವೀಸ್ ಈಗ ನಮಗೆ ಜಿಹಾದ್ ಬಗ್ಗೆ ಕಲಿಸುತ್ತಿದ್ದಾರೆ. ನರೇಂದ್ರ ಮೋದಿ, ಕೇಂದ್ರ ಸಚಿವ ಅಮಿತ್ ಶಾ ಮತ್ತು ದೇವೇಂದ್ರ ಫಡ್ನವೀಸ್ ಒಟ್ಟಾಗಿ ಚರ್ಚೆಯಲ್ಲಿ ನನ್ನನ್ನು ಸೋಲಿಸಲು ಸಾಧ್ಯವಿಲ್ಲ**
> **– ಅಸಾದುದ್ದೀನ್ ಓವೈಸಿ, ಮುಖ್ಯಸ್ಥ**

## ದೇಗುಲ ಬಳಿ ಹಿಂಸಾಚಾರ ಸಮನ್ವಯಕಾರನ ಬಂಧನ

**ಒಟ್ಟಾವ:** ಕೆನಡಾದ ಬ್ರಾಂಪ್ಟನ್‌ನಲ್ಲಿ ಹಿಂದೂ ಸಭಾ ಮಂದಿರದಲ್ಲಿ ನಡೆದಿದ್ದ ಹಲ್ಲೆ, ಹಿಂಸಾತ್ಮಕ ಪ್ರತಿಭಟನೆ ಪ್ರಕರಣಕ್ಕೆ ಸಂಬಂಧಿಸಿ ಸಿಖ್ ಫಾರ್ ಜಸ್ಟಿಸ್ ಸಂಘಟನೆಯ ಕೆನಡಾ ಸಮನ್ವಯಕಾರ ಇಂದರ್‌ಜಿತ್ ಗೋಸಾಲ್ ಪೊಲೀಸರು ಬಂಧಿಸಿದ್ದಾರೆ ಎಂದು ಅಧಿಕಾರಿಗಳು ಹೇಳಿದ್ದಾರೆ. ಬ್ರಾಂಪ್ಟನ್ ನಿವಾಸಿಯಾದ 35 ವರ್ಷದ ಗೋಸಲ್‌ನನ್ನು ನವೆಂಬರ್ 8ರಂದು ಬಂಧಿಸಿ, ಜಾಮೀನಿನ ಮೇಲೆ ಬಿಡುಗಡೆ ಮಾಡಲಾಗಿದೆ. ವಿಭಾಗೀಯ ಅಪರಾಧ ತನಿಖಾ ದಳ, ಎಸ್‌ಐಟಿ ಜಂಟಿ ಕಾರ್ಯಾಚರಣೆ ನಡೆಸಿ ಗೋಸಾಲ್‌ನನ್ನು ಬಂಧಿಸಿವೆ ಎಂಬ ಪೊಲೀಸರ ಹೇಳಿಕೆ ಉಲ್ಲೇಖಿಸಿ ಟೊರಾಂಟೊ ಸ್ಟಾರ್ ವರದಿ ಮಾಡಿದೆ.

ಅಮೆರಿಕ ಮೂಲದ ಸಿಖ್ ಫಾರ್ ಜಸ್ಟಿಸ್ ಸಂಘಟನೆಯನ್ನು ಭಾರತದಲ್ಲಿ ನಿಷೇಧಿಸಲಾಗಿದೆ. ನವೆಂಬರ್ 3ರಂದು ಬ್ರಾಂಪ್ಟನ್‌ನ ಹಿಂದೂ ಸಭಾ ಮಂದಿರ ಆವರಣದಲ್ಲಿ ಖಾಲಿಸ್ತಾನ ಪರ ಪ್ರತಿಭಟನೆ ನಡೆದಿತ್ತು. ಈ ವೇಳೆ, ಪ್ರತಿಭಟನಕಾರರು, ದೇವಸ್ಥಾನ ದಲ್ಲಿರುವವರ ಮಧ್ಯೆ ಸಂಘರ್ಷ ನಡೆದಿತ್ತಲ್ಲದೇ, ಬಡಿಗೆಗಳಿಂದ ಹೊಡೆದಾಡಿದ ದೃಶ್ಯಗಳಿರುವ ವಿಡಿಯೊ ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡಿದ್ದವು. ಇದರ ಬೆನ್ನಲ್ಲೇ, ಪೀಲ್ ಪ್ರಾದೇಶಿಕ ಪೊಲೀಸರು ತನಿಖೆ ಆರಂಭಿಸಿದ್ದರು.

## ಮಹಾರಾಷ್ಟ್ರ ಚುನಾವಣೆಯಲ್ಲಿ ಹೊಸ ಚುನಾವಣಾ ಅಸ್ತ್ರ

**ಮುಂಬೈ:** ಕಾಂಗ್ರೆಸ್ ರಾಜ್ಯ ಸರ್ಕಾರಗಳ ಗ್ಯಾರಂಟಿಗಳನ್ನೇ ಗುರಿಯಾಗಿಸಿಕೊಂಡು ಜಾಹೀರಾತು ನೀಡಿದ್ದ ಬಿಜೆಪಿ ಸೋಮವಾರ 'ಏಕ್ ಹೈ ತೋ ಸೇಫ್ ಹೈ' ಎಂಬ ಪ್ರಧಾನಿ ನರೇಂದ್ರ ಮೋದಿ ಅವರ ಘೋಷಣೆಯನ್ನು ಜಾಹೀರಾತಾಗಿ ಪ್ರಕಟಿಸಿದೆ. ಚುನಾವಣಾ ಪ್ರಚಾರಗಳಲ್ಲಿ ಕಾಂಗ್ರೆಸ್ ವಿರುದ್ಧ ವಾಗ್ದಾಳಿ ನಡೆಸಿದ್ದ ಪ್ರಧಾನಿ ಮೋದಿ, ಕಾಂಗ್ರೆಸ್ ಹಿಂದುಳಿದ ವರ್ಗಗಳ ನಡುವೆ ಬಿರುಕು ಮೂಡಿಸಲು ವಿಭಜಕ ರಾಜಕೀಯದಲ್ಲಿ ತೊಡಗಿದೆ ಎಂದು ಆರೋಪಿಸಿದ್ದರು. ಏಕ್ ಹೈ ತೋ ಸೇಫ್ ಹೈ' (ಒಟ್ಟಾಗಿದ್ದರೆ ನಾವು ಸುರಕ್ಷಿತ) ಎಂದು ಘೋಷಣೆ ನೀಡಿದ್ದರು.

ಇದೇ ಹೇಳಿಕೆಯನ್ನು ಇಂದಿನ ದಿನ ಪತ್ರಿಕೆಗಳಲ್ಲಿ ಬಿಜೆಪಿ ಜಾಹೀರಾತಾಗಿ ಪ್ರಕಟಿಸಿದೆ. ಕೇಸರಿ ಬಣ್ಣದಲ್ಲಿ 'ಏಕ್ ಹೈ ತೋ ಸೇಫ್ ಹೈ' (ಒಟ್ಟಾಗಿದ್ದರೆ ನಾವು ಸುರಕ್ಷಿತ) ಪೂರ್ಣ ಪುಟದ ಜಾಹೀರಾತು ನೀಡಿದೆ. ಏಕ್ ಎನ್ನುವ ಪದವನ್ನು ಹೈಲೈಟ್ ಮಾಡಿದ್ದು ಇದರಲ್ಲಿ ಭಾರತದ ಎಲ್ಲ ಧರ್ಮಗಳ ಪೇಟಗಳನ್ನು ಬಳಸಿದೆ. ಬಿಜೆಪಿ




ಬಿಡುಗಡೆ ಮಾಡಿರುವ ಪತ್ರಿಕೆಯ ಜಾಹೀರಾತಿನಲ್ಲಿ ಮಹಾಯುತಿ ಮೈತ್ರಿಕೂಟದ ಪಾಲುದಾರರಾದ ಶಿವಸೇನೆ ಮತ್ತು ಎನ್‌ಸಿಪಿಯ ಲೋಗೋಗಳಿವೆ. ಕಾಂಗ್ರೆಸ್ ಮತ್ತು ಇತರ ವಿರೋಧ ಪಕ್ಷಗಳು ಪ್ರಧಾನಿ ಮೋದಿ ಈ ಹೇಳಿಕೆಯನ್ನು ಟೀಕಿಸಿದ್ದವು. ಬಿಜೆಪಿಯು ಸಮುದಾಯಗಳನ್ನು ಪರಸ್ಪರ ವಿರುದ್ಧವಾಗಿ ಎತ್ತಿಕಟ್ಟುತ್ತಿದೆ.

ನಮ್ಮ ವಿರುದ್ಧ ಅವರಿಗೆ' ಎಂಬ ಭಾವನೆಯನ್ನು ಬೆಳೆಸುತ್ತಿದೆ ಎಂದು ಆರೋಪಿಸಿದ್ದವು. ಬಿಜೆಪಿಯು ಭಯ ಮತ್ತು ಅಭದ್ರತೆಯ ಮೇಲೆ ಆಟವಾಡುತ್ತಿದೆ. ಇದು ಸಮಾಜದ ಧ್ರುವೀಕರಣವನ್ನು ಇನ್ನಷ್ಟು ಆಳಗೊಳಿಸುತ್ತದೆ ಎಂದು ಅವರು ಆರೋಪಿಸಿದ್ದರು. ವಿಪಕ್ಷಗಳ ಟೀಕೆ ಹಿನ್ನೆಲೆ ಇದೇ ಹೇಳಿಕೆಯನ್ನು ಬಿಜೆಪಿ ಜಾಹೀರಾತಿನ ಮೂಲಕ ಸಮರ್ಥಿಸಿಕೊಂಡಿದೆ.

---

## ಕ್ಯೂಬಾದಲ್ಲಿ ಒಂದೇ ಗಂಟೆಯಲ್ಲಿ 2 ಪ್ರಬಲ ಭೂಕಂಪ

**ಹವಾನಾ:** ಪೂರ್ವ ಕ್ಯೂಬಾದಲ್ಲಿ 6.8 ತೀವ್ರತೆಯ ಪ್ರಬಲ ಭೂಕಂಪ ಸಂಭವಿಸಿದ್ದು ದೇಶದ 2ನೇ ಅತಿದೊಡ್ಡ ನಗರವಾದ ಸ್ಯಾಂಟಿಯಾಗೊ ಡಿ ಕ್ಯೂಬಾ ಮತ್ತು ಹತ್ತಿರದ ಪ್ರದೇಶಗಳಲ್ಲಿ ತೀವ್ರ ಹಾನಿಯಾಗಿದೆ. ಇದಕ್ಕೂ ಮೊದಲು 5.9 ತೀವ್ರತೆಯ ಭೂಕಂಪ ಸಂಭವಿಸಿದೆ ಎಂದು ವರದಿಯಾಗಿದೆ.

ಕ್ಯೂಬಾದ ಮಾಜಿ ಅಧ್ಯಕ್ಷ ದಿ.ಫಿಡೆಲ್ ಕ್ಯಾಸ್ಟ್ರೋ ಅವರು ಕ್ಯೂಬನ್ ಕ್ರಾಂತಿಯ ಸಮಯದಲ್ಲಿ ತಮ್ಮ ಪ್ರಧಾನ ಕಚೇರಿಯನ್ನು ಹೊಂದಿದ್ದ ಬಾರ್ಟೋಲೋಮ್ ಮಾಸೊ ಬಳಿಯ ಗ್ರ್ಯಾನ್ಮಾ ಪ್ರಾಂತ್ಯದ ಕರಾವಳಿಯಲ್ಲಿ ಭೂಕಂಪವಾಗಿದೆ. ಯಾವುದೇ ಸಾವು ನೋವುಗಳ ಬಗ್ಗೆ ವರದಿಯಾಗಿಲ್ಲ.

ಭೂಕಂಪದ ಕೇಂದ್ರ 14 ಕಿಮೀ (8.7 ಮೈಲುಗಳು) ಆಳದಲ್ಲಿದೆ. ಯಾವುದೇ ಸುನಾಮಿ ಭೀತಿ ಇಲ್ಲ ಎಂದು ಅಮೆರಿಕದ ಜಿಯಾಲಾಜಿಕಲ್ ಸರ್ವೆ ತಿಳಿಸಿದೆ. ಭೂಕಂಪದ ಪರಿಣಾಮದಿಂದ ಹಲವೆಡೆ ಭೂಕುಸಿತ ಸಂಭವಿಸಿದೆ. ಹಲವಾರು ಮನೆಗಳು ಹಾನಿಗೊಳಗಾಗಿವೆ. ಅಲ್ಲದೇ ವಿದ್ಯುತ್ ಸಂಪರ್ಕ ಕಡಿತಗೊಂಡಿದೆ. ಈ ಸಮಯದಲ್ಲಿ ನಮ್ಮ ಮೊದಲ ಆದ್ಯತೆ ಜನರ ಜೀವಗಳನ್ನು ಉಳಿಸುವುದು ಎಂದು ಕ್ಯೂಬಾದ ಅಧ್ಯಕ್ಷ ಮಿಗುಯೆಲ್ ಡಯಾಜ್-ಕ್ಯಾನೆಲ್ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ.



### ಯಾವುದೇ ಹಾನಿಯಾಗಿಲ್ಲ

**ಭೂಕಂಪ ಸಂಭವಿಸಿದ ಪ್ರದೇಶದ ಹಳೆಯದಾದ ಕಟ್ಟಡಗಳು ತೀವ್ರ ಹಾನಿಗೆ ಒಳಗಾಗಿವೆ ಎಂದು ಸ್ಥಳೀಯ ಮಾಧ್ಯಮಗಳು ಪ್ರಕಟಿಸಿವೆ. ಇನ್ನೂ ಇತ್ತೀಚೆಗೆ ಸಂಭವಿಸಿದ್ದ ಚಂಡಮಾರುತದಿಂದ ಚೇತರಿಸಿಕೊಳ್ಳಲು ಕ್ಯೂಬಾ ಹೆಣಗಾಡುತ್ತಿದೆ. ಇದರ ನಡುವೆಯೇ ಭೂಕಂಪ ಸಂಭವಿಸಿದ್ದು ಜನ ಪರದಾಡುತ್ತಿದ್ದಾರೆ. ಇನ್ನೂ ಕ್ಯೂಬಾದ ರಾಜಧಾನಿ ಹವಾನಾದಲ್ಲಿ ಭೂಕಂಪನದಿಂದ ಯಾವುದೇ ಹಾನಿಯಾಗಿಲ್ಲ ಎಂದು ವರದಿಯಾಗಿದೆ.**

## ಉಕ್ರೇನ್‌ನಲ್ಲಿ ಯುದ್ಧವನ್ನು ಉಲ್ಬಣಗೊಳಿಸಬೇಡಿ

**ನ್ಯೂಯಾರ್ಕ್:** ಅಮೆರಿಕದ ಅಧ್ಯಕ್ಷರಾಗಿ ಆಯ್ಕೆಯಾದ ಬೆನ್ನಲ್ಲೇ ಡೊನಾಲ್ಡ್ ಟ್ರಂಪ್ ಅವರು ರಷ್ಯಾದ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರೊಂದಿಗೆ ಮಾತನಾಡಿದ್ದಾರೆ. ಉಕ್ರೇನ್‌ನಲ್ಲಿ ಯುದ್ಧವನ್ನು ಉಲ್ಬಣಗೊಳಿಸದಂತೆ ಒತ್ತಾಯಿಸಿದ್ದಾರೆಂದು ವಾಷಿಂಗ್ಟನ್ ಪೋಸ್ಟ್ ವರದಿ ಮಾಡಿದೆ. ಡೆಮಾಕ್ರಟಿಕ್ ಪ್ರತಿಸ್ಪರ್ಧಿ ಕಮಲಾ ಹ್ಯಾರಿಸ್ ವಿರುದ್ಧದ ಚುನಾವಣಾ ವಿಜಯದ ಕೆಲವೇ ದಿನಗಳ ನಂತರ ಟ್ರಂಪ್, ಫ್ಲೋರಿಡಾದ ಮಾರ್-ಎ-ಲಾಗೊ ಎಸ್ಟೇಟ್‌ನಿಂದ ಪುಟಿನ್‌ಗೆ ಕರೆ ಮಾಡಿದ್ದಾರೆ ಎಂದು ವರದಿಯಾಗಿದ್ದಾರೆ.

ಉಕ್ರೇನ್‌ನ ಯುದ್ಧದ ನಿರ್ಣಯವನ್ನು ಶೀಘ್ರದಲ್ಲೇ ಚರ್ಚಿಸಲು ಹೆಚ್ಚಿನ ಮಾತುಕತೆಗೆ ಆಸಕ್ತಿ ಹೊಂದಿದ್ದೇವೆಂದು ಪುಟಿನ್‌ಗೆ ತಿಳಿಸಿದ್ದಾರೆ ಎಂದು ವರದಿಯಾಗಿದೆ. ಹೋರಾಟವನ್ನು ಶೀಘ್ರ ವಾಗಿ ಕೊನೆಗೊಳಿಸಬೇಕೆಂದು ಎಂಬುದು ಟ್ರಂಪ್ ಒತ್ತಾಯವಾಗಿತ್ತು. ಉಕ್ರೇನಿಯನ್ ಅಧ್ಯಕ್ಷ ವೊಲೊಡಿಮಿರ್ ಝೆಲೆನ್ಸ್ಕಿ ಬುಧವಾರ ಟ್ರಂಪ್ ಅವರೊಂದಿಗೆ ಮಾತನಾಡಿದರು. ರಿಪಬ್ಲಿಕನ್ ಪಕ್ಷದ ಬಿಲಿಯನೇರ್ ಬೆಂಬಲಿಗ ಎಲೋನ್ ಮಸ್ಕ್ ಅವರು ಕರೆಯಲ್ಲಿ ಅವರೊಂದಿಗೆ ಸೇರಿಕೊಂಡಿದ್ದರು.

ಅಧ್ಯಕ್ಷ ಜೋ ಬೈಡನ್ ಅವರು ತಮ್ಮ ಅವಧಿ ಮುಗಿಯುವವರೆಗೂ ಉಕ್ರೇನ್‌ಗೆ ಸಾಧ್ಯವಾದಷ್ಟು ಸಹಾಯವನ್ನು ಕಳುಹಿಸುವುದಾಗಿ ದೃಢಪಡಿಸಿದ್ದಾರೆ.



---

## ಭದ್ರತಾ ಪಡೆಗಳೊಂದಿಗೆ ಭಾರೀ ಗುಂಡಿನ ಚಕಮಕಿ 11 ಶಂಕಿತ ಕುಕಿ ಬಂಡುಕೋರರು ಬಲಿ

**ಇಂಫಾಲ್:** ಮಣಿಪುರದ ಜಿರಿಬಾಮ್ ಜಿಲ್ಲೆಯಲ್ಲಿಂದು ಭದ್ರತಾ ಪಡೆಗಳೊಂದಿಗೆ ನಡೆದ ಗುಂಡಿನ ಚಕಮಕಿಯಲ್ಲಿ ಕನಿಷ್ಠ 11 ಶಂಕಿತ ಕುಕಿ ಬಂಡುಕೋರರನ್ನು ಹೊಡೆದುರುಳಿಸಲಾಗಿದೆ ಎಂದು ವರದಿಗಳು ತಿಳಿಸಿವೆ. ಅಸ್ಸಾಂ ಗಡಿ ಜಿಲ್ಲೆ ಜಿರಿಬಾಮ್‌ನಲ್ಲಿ ಸೋಮವಾರ ಮಧ್ಯಾಹ್ನ 3.30ರ ಸುಮಾರಿಗೆ ಸಿಆರ್‌ಪಿಎಫ್ ಸೇನಾ ಶಿಬಿರದ ಮೇಲೆ ಕುಕಿ ಬಂಡುಕೋರರು ದಾಳಿ ನಡೆಸಿದ್ದರು. ಈ ವೇಳೆ ಸಿಆರ್‌ಪಿಎಫ್ ಯೋಧರು ಗಾಯಗೊಂಡಿದ್ದರು, ಓರ್ವ ಯೋಧ ತೀವ್ರವಾಗಿ ಗಾಯಗೊಂಡಿದ್ದು, ಆಸ್ಪತ್ರೆಗೆ ದಾಖಲಿಸಲಾಯಿತು. ಈ ಹಿನ್ನೆಲೆ ಪ್ರತೀಕಾರವಾಗಿ ಎನ್‌ಕೌಂಟರ್ ನಡೆಸಿದ ಭದ್ರತಾ ಪಡೆ ಬಂಡುಕೋರರನ್ನು ಹೊಡೆದುರುಳಿಸಿದೆ. ಈ ವೇಳೆ ಸ್ಥಳದಲ್ಲಿ ಸಿಕ್ಕ ಶಸ್ತ್ರಾಸ್ತ್ರಗಳನ್ನು ವಶಪಡಿಕೊಳ್ಳಲಾಗಿದೆ.

ಕುಕಿ ಬಂಡುಕೋರರು ಜಿರಿಬಾಮ್‌ನಲ್ಲಿರುವ ಪೊಲೀಸ್ ಠಾಣೆಯ ಮೇಲೆ ಎರಡೂ ಕಡೆಯಿಂದ ದಾಳಿ ನಡೆಸಿದ ನಂತರ ಎನ್ ಕೌಂಟರ್ ಪ್ರಾರಂಭವಾಯಿತು. ಜಿರಿಬಾಮ್‌ನ ಬೊರೊ ಬೆಕ್ರಾದಲ್ಲಿರುವ ಈ ಪೊಲೀಸ್ ಠಾಣೆಯ ಮೇಲೆ ಇತ್ತೀಚಿನ ತಿಂಗಳಲ್ಲಿ



ಹಲವಾರು ಬಾರಿ ದಾಳಿ ನಡೆದಿದೆ. ಪೊಲೀಸ್ ಠಾಣೆಯ ಮೇಲೆ ದಾಳಿ ಮಾಡಿದ ನಂತರ, ಶಂಕಿತ ಕುಕಿ ಬಂಡುಕೋರರು ಪೊಲೀಸ್ ಠಾಣೆಯಿಂದ 1 ಕಿಮೀ ದೂರದಲ್ಲಿರುವ ಜಕುರಾಡೋರ್ ಕರೋಂಗ್‌ನಲ್ಲಿನ ಸಣ್ಣ ಶಿಬಿರದ ಕಡೆಗೆ ನುಗ್ಗಿದರು, ಹಲವು ಮನೆಗಳಿಗೆ ಬೆಂಕಿ ಹಚ್ಚಿದರು. ಈ ವೇಳೆ ಭದ್ರತಾ ಪಡೆಗಳು ಹಾಗೂ ಬಂಡುಕೋರರ ನಡುವೆ ಭಾರಿ ಗುಂಡಿನ ಚಕಮಕಿ ನಡೆಯಿತು.

ಮಣಿಪುರದಲ್ಲಿ ಮತ್ತೆ ಭುಗಿಲೆದ್ದಿರುವ ಹಿಂಸಾಚಾರ 3ನೇ ದಿನಕ್ಕೆ ಕಾಲಿಟ್ಟಿದೆ. ರಾಜ್ಯದಲ್ಲಿ ನಡೆಯುತ್ತಿರುವ ಹಿಂಸಾಚಾರವು ಈವರೆಗೆ 200ಕ್ಕೂ ಹೆಚ್ಚು ಜನರನ್ನು ಬಲಿ ತೆಗೆದುಕೊಂಡಿದೆ ಎಂದು ವರದಿಗಳು ತಿಳಿಸಿವೆ.

## ಎಂಬಿಎ ವಿದ್ಯಾರ್ಥಿ ಹತ್ಯೆಗೈದ ಕಾರು ಚಾಲಕ

**ಅಹಮದಾಬಾದ್:** ಅತಿ ವೇಗದ ಚಾಲನೆ ಕುರಿತು ಆರಂಭವಾದ ವಾದವು 23 ವರ್ಷದ ವಿದ್ಯಾರ್ಥಿಯೊಬ್ಬರ ಕೊಲೆಯಲ್ಲಿ ಅಂತ್ಯ ಕಂಡಿದೆ. ಕಾರಿನ ಚಾಲಕನೊಬ್ಬ ವಿದ್ಯಾರ್ಥಿಯನ್ನು ಚಾಕುವಿನಿಂದ ಹಲವು ಬಾರಿ ಚುಚ್ಚಿ ಹತ್ಯೆ ಮಾಡಿದ್ದಾರೆ. ಭಾನುವಾರ ರಾತ್ರಿ 11.30ರ ಸುಮಾರಿಗೆ ಈ ಘಟನೆ ನಡೆದಿದೆ. ಮುದ್ರಾ ಇನ್‌ಸ್ಟಿಟ್ಯೂಟ್ ಆಫ್ ಕಮ್ಯುನಿಕೇಷನ್ ಕಾಲೇಜಿನಲ್ಲಿ ಎರಡನೇ ವರ್ಷದ ಎಂಬಿಎ ಓದುತ್ತಿದ್ದ ಪ್ರಿಯಾಂಶು ಜೈನ್ ಮೃತ ವಿದ್ಯಾರ್ಥಿ. ಬೇಕರಿಯಲ್ಲಿ ಕೇಕ್ ಖರೀದಿಸಿ ಪ್ರಿಯಾಂಶು ಹಾಗೂ ಆತನ ಸ್ನೇಹಿತ ಬೈಕನಲ್ಲಿ ಹಾಸ್ಟೆಲ್‌ಗೆ ವಾಪಸಾಗುತ್ತಿದ್ದ ವೇಳೆ ಕಾರು ಚಾಲಕನೊಂದಿಗೆ ಮಾತಿನ ಚಕಮಕಿ ನಡೆದಿದೆ.ಕಾರನ್ನು ವೇಗವಾಗಿ ಚಲಾಯಿಸುತ್ತಿದ್ದ ಕುರಿತು ವಾದ ನಡೆದ ಬಳಿಕ ವಿದ್ಯಾರ್ಥಿಗಳು ಬೈಕ್‌ನಲ್ಲಿ ಮುಂದೆ ಸಾಗಿದ್ದಾರೆ. 200 ಮೀಟರ್‌ನಿಂದ ಅವರನ್ನು ಹಿಂಬಾಲಿಸಿದ ಕಾರಿನ ಚಾಲಕ ನಂತರ ಅವರನ್ನು ತಡೆದಿದ್ದಾರೆ. ಬಳಿಕ, ಕಾರಿನಲ್ಲಿದ್ದ ಚಾಕುವಿನಿಂದ ಪ್ರಿಯಾಂಶು ಅವರ ಮೇಲೆ ಹಲ್ಲೆ ನಡೆಸಿದ್ದಾರೆ' ಎಂದು ಅಹಮದಾಬಾದ್ ಎಸ್‌ಪಿ ಓಂ ಪ್ರಕಾಶ್ ಜಾಟ್ ವಿವರಿಸಿದರು. ಪ್ರಿಯಾಂಶು ಅವರನ್ನು ತಕ್ಷಣವೇ ಆಸ್ಪತ್ರೆಗೆ ಕರೆದೊಯ್ಯಲಾಯಿತು. ಆದರೆ, ತೀವ್ರ ವಾಗಿ ಆಂತರಿಕ ರಕ್ತಸ್ರಾವ ಆದ್ದರಿಂದ ಪ್ರಿಯಾಂಶು ಮೃತಪಟ್ಟರು. ಆರೋಪಿಯ ಗುರುತು ಪತ್ತೆಯಾಗಿಲ್ಲ. ಶೀಘ್ರದಲ್ಲಿಯೇ ಅವರನ್ನು ಬಂಧಿಸಲಾಗುವುದು ಎಂದರು.

## ಭದ್ರತಾ ಪಡೆ, ಉಗ್ರರ ನಡುವೆ ಗುಂಡಿನ ಚಕಮಕಿ 100ಕ್ಕೆ ಕರೆ ಮಾಡಿ ಬಚಾವ್ ಆದ ಚಾರಣಿಗರು

**ಶ್ರೀನಗರ:** ಭಯೋತ್ಪಾದಕರು ಮತ್ತು ಭದ್ರತಾ ಪಡೆಗಳ ನಡುವೆ ನಡೆದ ಎನ್‌ಕೌಂಟರ್‌ನ ವೇಳೆ ಇಬ್ಬರು ಚಾರಣಿಗರು ಸಿಕ್ಕಿಕೊಂಡ ಘಟನೆ ಜಮ್ಮು ಮತ್ತು ಜಬರ್ವಾನ್‌ನಲ್ಲಿ ನಡೆದಿದೆ. ಚಾರಣಿಗರು ಪೊಲೀಸ್ ಕಂಟ್ರೋಲ್ ರೂಮ್ ಸಂಖ್ಯೆ 100ಕ್ಕೆ ಕರೆ ಮಾಡಿ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ಬಳಿಕ ಚಾರಣಿಗರನ್ನು ಅಧಿಕಾರಿಗಳು ರಕ್ಷಣೆ ಮಾಡಿದ್ದಾರೆ.

ಭಯೋತ್ಪಾದಕರ ಇರುವಿಕೆಯ ಗುಪ್ತಚರ ಮಾಹಿತಿ ಆಧಾರದ ಮೇಲೆ ಪೊಲೀಸರು ಮತ್ತು ಭದ್ರತಾ ಪಡೆಗಳು ಜಬರ್ವಾನ್ ಅರಣ್ಯ ಪ್ರದೇಶದಲ್ಲಿ ಭಾನುವಾರ ಕಾರ್ಯಾಚರಣೆಯನ್ನು ಪ್ರಾರಂಭಿಸಿದ್ದವು. ಈ ವೇಳೆ ಚಾರಣಿಗರು ಆ ಪ್ರದೇಶದಲ್ಲಿ ಸಿಲುಕಿಕೊಂಡಿದ್ದಾರೆ. ಬಳಿಕ ಅವರು ಬಂಡೆಗಳ ನಡುವೆ ಅಡಗಿಕೊಂಡು ಪೊಲೀಸರಿಗೆ ಕರೆ ಮಾಡಿದ್ದಾರೆ.

ಈ ವೇಳೆ ಭದ್ರತಾ ಕಾರ್ಯಾಚರಣೆಯನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಿ ಅವರನ್ನು ರಕ್ಷಿಸಲಾಗಿದೆ. ಈ ಘಟನೆಯ ಬಳಿಕ ಪ್ರತಿಕ್ರಿಯಿಸಿರುವ ಕಾಶ್ಮೀರ ಪೊಲೀಸ್ ಮುಖ್ಯಸ್ಥ ವಿಧಿ ಕುಮಾರ ಬಿರ್ಡಿಯವರು, ಚಾರಣಿಗರು ಹತ್ತಿರದ ಪೊಲೀಸ್ ಠಾಣೆಗೆ ತಿಳಿಸಬೇಕು.

ವಿಶೇಷವಾಗಿ ಭದ್ರತಾ ಕಾರ್ಯಾಚರಣೆಗಳು ಇರುವ ಪ್ರದೇಶಗಳಲ್ಲಿ ಈ ಅನಿರೀಕ್ಷಿತ ಘಟನೆಗಳು ಸಂಭವಿಸಿದಲ್ಲಿ ಅವರ ಸುರಕ್ಷತೆಯನ್ನು ಖಚಿತಪಡಿಸಿಕೊಳ್ಳಲು ನಾವು ತ್ವರಿತವಾಗಿ ಕಾರ್ಯನಿರ್ವಹಿಸಲು ಇದು ಸಹಕಾರಿಯಾಗಲಿದೆ ಎಂದಿದ್ದಾರೆ.

ಸ್ಥಳೀಯರು, ಪ್ರವಾಸಿಗರು ಮತ್ತು ವಿಶೇಷವಾಗಿ ಚಾರಣಿಗರು ಸಂಕಷ್ಟದಲ್ಲಿದ್ದಾಗ 100ಕ್ಕೆ ಅಥವಾ ನೇರವಾಗಿ ಪೊಲೀಸ್ ಠಾಣೆಗೆ ತಲುಪುವುದು ಸೇರಿದಂತೆ ಸಹಾಯವಾಣಿ ಸೇವೆಗಳನ್ನು ಬಳಸಲು ನಾವು ಪ್ರೋತ್ಸಾಹಿಸುತ್ತೇವೆ.

ಈ ಮೂಲಕ ಪೊಲೀಸರ ತ್ವರಿತ ಸಹಾಯವನ್ನು ಪಡೆದುಕೊಳ್ಳಬಹುದು ಎಂದು ತಿಳಿಸಿದ್ದಾರೆ.



---

# 51ನೇ ಮುಖ್ಯ ನ್ಯಾಯಮೂರ್ತಿಯಾಗಿ ಸಂಜೀವ್ ಖನ್ನಾ ಪ್ರಮಾಣ ವಚನ

## ಇವಿಎಂ, ಚುನಾವಣಾ ಬಾಂಡ್, ಸಂವಿಧಾನದ 370ನೆಯ ವಿಧಿ ತೀರ್ಪಿನಲ್ಲಿ ಭಾಗಿಯಾಗಿದ್ದ ಖನ್ನಾ

**ನವದೆಹಲಿ:** ಸುಪ್ರೀಂ ಕೋರ್ಟ್‌ನ 51ನೇ ಮುಖ್ಯ ನ್ಯಾಯಮೂರ್ತಿಯಾಗಿ (ಸಿಜೆಐ) ಸಂಜೀವ್ ಖನ್ನಾ ಅವರು ಸೋಮವಾರ ಪ್ರಮಾಣ ವಚನ ಸ್ವೀಕರಿಸಿದ್ದಾರೆ. ರಾಷ್ಟ್ರಪತಿ ಭವನದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಪ್ರಮಾಣ ವಚನ ಬೋಧಿಸಿದರು. ಈ ಹಿಂದಿನ ಡಿವೈ ಚಂದ್ರಚೂಡ್ ಅವರು ಸಿಜೆಐ ಹುದ್ದೆಯಿಂದ ಭಾನುವಾರ (ನವೆಂಬರ್ 10) ನಿವೃತ್ತರಾಗಿದ್ದರು. ಈ ಬೆನ್ನಲ್ಲೆ ಹೊಸಬರ ನೇಮಕವಾಗಿದೆ. ಇನ್ನು ಸಂಜೀವ್ ಖನ್ನಾ ಅವರು ಆರು ತಿಂಗಳು, 2025ರ ಮೇ 13 ವರೆಗೂ ಮುಖ್ಯ ನ್ಯಾಯಮೂರ್ತಿಯಾಗಿ ಕರ್ತವ್ಯ ನಿಭಾಯಿಸಲಿದ್ದಾರೆ.

**40 ವರ್ಷಗಳಿಂದ ಸೇವೆ:** ಸಂಜೀವ್ ಖನ್ನಾ ಅವರಿಗೆ 64 ವರ್ಷ ವಯಸ್ಸಾಗಿದೆ. ಖನ್ನಾ ಅವರು 1960 ರಂದು ಜನಿಸಿದ್ದು, ದೆಹಲಿ ವಿಶ್ವವಿದ್ಯಾಲಯದಲ್ಲಿ



**ತೀರ್ಪುಗಳಲ್ಲಿ ಸಂಜೀವ್ ಖನ್ನಾ ಅವರ ಪಾಲಿದೆ**

ಕಾನೂನು ಪದವಿ ಪಡೆದಿದ್ದಾರೆ. 1983ರಿಂದ ಬಾರ್ ಕೌನ್ಸಿಲ್‌ನಲ್ಲಿ ಅವರು ಅಡ್ವೋಕೇಟ್ ಆಗಿ ನೋಂದಾಯಿಸಿಕೊಂಡು ಕೆಲಸ ಆರಂಭಿಸಿದ್ದರು. ದೆಹಲಿಯ ಜಿಲ್ಲಾ ನ್ಯಾಯಾಲಯಗಳಲ್ಲಿ ತಮ್ಮ ಅಭ್ಯಾಸವನ್ನು ಪ್ರಾರಂಭಿಸಿದರು.

ದೆಹಲಿ ಹೈಕೋರ್ಟ್‌ನಲ್ಲಿ ಹೆಚ್ಚುವರಿ ಪಬ್ಲಿಕ್ ಪ್ರಾಸಿಕ್ಯೂಟರ್ ಆಗಿ, ನ್ಯಾಯಾಲ ಯದಿಂದ ಅಮಿಕಸ್ ಕ್ಯೂರಿಯಾಗಿಯೂ ಸೇವೆ ಸಲ್ಲಿಸಿದ್ದಾರೆ.

2006ರಲ್ಲಿ ದೆಹಲಿ ಹೈಕೋರ್ಟ್‌ನ ಖಾಯಂ ನ್ಯಾಯಾಧೀಶರಾದರು. 2019 ರಿಂದ ಸುಪ್ರೀಂ ಕೋರ್ಟ್‌ನಲ್ಲಿ ನ್ಯಾಯಮೂರ್ತಿಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ.

**ಖನ್ನಾ ಅವರು ನೀಡಿದ ಪ್ರಮುಖ ತೀರ್ಪುಗಳು**

ಇವಿಎಂ, ಚುನಾವಣಾ ಬಾಂಡ್, ಸಂವಿಧಾನದ 370ನೆಯ ವಿಧಿಯಡಿ ಜಮ್ಮು-ಕಾಶ್ಮೀರಕ್ಕೆ ನೀಡಿದ್ದ ವಿಶೇಷ ಸ್ಥಾನಮಾನ ಹಿಂಪಡೆದ ಕ್ರಮ, ಅರವಿಂದ್ ಕೇಜ್ರಿವಾಲ್‌ಗೆ ಮಧ್ಯಂತರ ಜಾಮೀನು ಪ್ರಕರಣಗಳು ಸೇರಿದಂತೆ ಹಲವು ಪ್ರಮುಖ ಕೇಸ್‌ಗಳ ತೀರ್ಪುಗಳಲ್ಲಿ ಸಂಜೀವ್ ಖನ್ನಾ ಅವರ ಪಾಲಿದೆ. ನ್ಯಾಯಮೂರ್ತಿ ಖನ್ನಾ ಅವರು 117 ತೀರ್ಪುಗಳನ್ನು ಬರೆದಿದ್ದಾರೆ. ಇದುವರೆಗೆ 456 ಪೀಠಗಳ ಭಾಗವಾಗಿದ್ದಾರೆ.

**ನಿವೃತ್ತ ಸಿಜೆಐಗಳಿಗೆ ಸವಲತ್ತುಗಳೇನು?:** ನಿವೃತ್ತ ಸಿಜೆಐಗಳ ಸವಲತ್ತುಗಳಲ್ಲಿ ಕೆಲವು ಬದಲಾವಣೆಗಳನ್ನು ಮಾಡಲಾಗಿದೆ. ಹೊಸ ನಿಯಮಗಳನುಸಾರ, ಅವರಿಗೆ ದಿನದ 24 ಗಂಟೆಗಳವರೆಗೆ ಭದ್ರತೆಯನ್ನು ನೀಡಲಾಗುತ್ತದೆ. ಅದರ ಜೊತೆಯಲ್ಲಿ ಅವರು ನಿವೃತ್ತರಾದ ದಿನಾಂಕದಿಂದ ಮುಂದಿನ ಐದು ವರ್ಷಗಳವರೆಗೆ ಅವರಿಗೆ ಒಬ್ಬ ಆಪ್ತ ಅಂಗರಕ್ಷಕನನ್ನು ಸರಕಾರವೇ ನೇಮಿಸುತ್ತದೆ. ಆತನ ವೇತನ, ಭತ್ಯೆಗಳೆಲ್ಲವನ್ನೂ ಸರ್ಕಾರವೇ ಭರಿಸುತ್ತದೆ.

### ನಿವೃತ್ತಿಯಾದ ನಂತರ ಸಿಜೆಐಗೆ ಕೆಲಸವೇನು?

**ನಿವೃತ್ತಿಯಾದ ನಂತರ ಸಿಜೆಐಗೆ ಭಾರತದ ಯಾವುದೇ ಕೋರ್ಟ್‌ನಲ್ಲಿ ವಾದ ಸಲ್ಲಿಸಲು ಅಥವಾ ಕೇಸ್ ನಡೆಸಲು ಅವಕಾಶವಿರುವುದಿಲ್ಲ. ಸಂವಿಧಾನದ 124ನೇ ಕಲಂನ 7ನೇ ಪರಿಚ್ಛೇದದಲ್ಲಿ ನಿವೃತ್ತ ಸಿಜೆಐಗಳು ಯಾವುದೇ ಕೋರ್ಟ್‌ಗಳಲ್ಲಿ ಕೇಸ್ ನಡೆಸುವುದನ್ನು ನಿರ್ಬಂಧಿಸುತ್ತದೆ. ನಿವೃತ್ತರಾದ ನಂತರ ಯಾವುದೋ ಒಬ್ಬ ವ್ಯಕ್ತಿಯ ಅಥವಾ ಸಂಸ್ಥೆಯ ಪರವಾಗಿ ಕೇಸ್ ನಡೆಸುವುದಾದರೆ ಅವರ ಹಿಂದಿನ ವೃತ್ತಿಜೀವನದ ಮೇಲೆ ಅನುಮಾನಗಳು ಮೂಡಬಹುದು. ಆಗ, ಸಾರ್ವಜನಿಕರಿಗೆ ನ್ಯಾಯಾಂಗದ ಮೇಲಿನ ಭರವಸೆಗಳು ಇಲ್ಲದಾಗಬಹುದು ಎಂಬ ಉದ್ದೇಶದಿಂದ ಈ ರೀತಿ ನಿರ್ಬಂಧ ಹಾಕಲಾಗಿದೆ.**

**ದೇಶದ 51ನೇ ಮುಖ್ಯ ನ್ಯಾಯಮೂರ್ತಿಯಾಗಿ ಸಂಜೀವ್ ಖನ್ನಾ ಪ್ರಮಾಣ ವಚನ ಸ್ವೀಕಾರ ಮಾಡಿದ್ದಾರೆ. ನ್ಯಾ. ಚಂದ್ರಚೂಡ್ ಅವರ ಸೇವಾವಧಿ ಮುಕ್ತಾಯವಾದ ಹಿನ್ನೆಲೆ ನೂತನ ಸಿಜೆಐ ನೇಮಕ ಮಾಡಲಾಗಿದೆ. ಇವರ ಹಿನ್ನೆಲೆ ಏನು? ಯಾವೆಲ್ಲಾ ಪ್ರಮುಖ ತೀರ್ಪು ನೀಡಿದ್ದಾರೆ? ಈ ಬಗ್ಗೆ ವಿವರ ಇಲ್ಲಿದೆ.**

---

## ಮಿನಿ ನ್ಯೂಸ್

### ಪಾಕ್ ಗಡಿಯಲ್ಲಿ ಉಗ್ರರ ದಾಳಿಗೆ ಐವರು ಇರಾನ್ ಯೋಧರ ಬಲಿ

**ಟೆಹ್ರಾನ್:** ಇರಾನ್ ನೊಂದಿಗಿನ ಪಾಕಿಸ್ತಾನದ ಗಡಿಯಲ್ಲಿ ಉಗ್ರರು ನಡೆಸಿದ ದಾಳಿಯಲ್ಲಿ ಐವರು ಇರಾನಿನ ಯೋಧರು ಸಾವನ್ನಪ್ಪಿದ್ದಾರೆ ಎಂದು ವರದಿಯಾಗಿದೆ. ಮೃತರು ಅರೆಸೈನಿಕ ರೆವಲ್ಯೂಷನರಿ ಗಾರ್ಡ್ಸ್ ಸ್ವಯಂಸೇವಕ ಬಸಿಜ್ ಪಡೆಯ ಬಲೂಚ್ ಜನಾಂಗೀಯ ಸದಸ್ಯರು ಎಂದು ಗುರುತಿಸಲಾಗಿದೆ. ಸಿಸ್ತಾನ್ ಮತ್ತು ಬಲೂಚಿಸ್ತಾನ್ ಪ್ರಾಂತ್ಯದ ಸರವನ್ ನಗರದಲ್ಲಿ ಈ ಘಟನೆ ನಡೆದಿದೆ. ಸರವನ್ ನಗರ ರಾಜಧಾನಿ ಟೆಹ್ರಾನ್‌ನಿಂದ ಆಗ್ನೇಯಕ್ಕೆ ಸುಮಾರು 1,400 ಕಿಲೋಮೀಟರ್ ದೂರದಲ್ಲಿದೆ. ಈ ದಾಳಿಯ ಹೊಣೆಯನ್ನು ಯಾವುದೇ ಗುಂಪು ತಕ್ಷಣವೇ ಹೊತ್ತುಕೊಂಡಿಲ್ಲ. ರೆವಲ್ಯೂಷನರಿ ಗಾರ್ಡ್ ಪಡೆಗಳು ಮಿಲಿಟರಿ ಕಾರ್ಯಾಚರಣೆಯಲ್ಲಿ ಮೂವರು ಭಯೋತ್ಪಾದಕರನ್ನು ಕೊಂದಿವೆ ಮತ್ತು ಇತರ ಒಂಬತ್ತು ಜನರನ್ನು ಬಂಧಿಸಿವೆ ಎಂದು ರಾಜ್ಯ ಟಿವಿ ವರದಿ ಮಾಡಿದೆ. ಶಂಕಿತರು ಯಾವ ಗುಂಪಿಗೆ ಸೇರಿದವರು ಎಂದು ವರದಿಯಲ್ಲಿ ನಿರ್ದಿಷ್ಟಪಡಿಸಲಾಗಿಲ್ಲ. ಕಳೆದ ತಿಂಗಳು, ಅಪರಿಚಿತ ಬಂದೂಕುಧಾರಿಗಳು ಪ್ರಾಂತ್ಯದ ರೆವಲ್ಯೂಷನರಿ ಗಾರ್ಡ್ ಮುಖ್ಯಸ್ಥ ಸೇರಿದಂತೆ ನಾಲ್ವರನ್ನು ಕೊಂದಿದ್ದರು. ಸೆಪ್ಟೆಂಬರ್‌ನಲ್ಲಿ ಬಂದೂಕುಧಾರಿಗಳು ಸಿಸ್ತಾನ್ ಮತ್ತು ಬಲೂಚಿಸ್ತಾನ ಪ್ರಾಂತ್ಯದಲ್ಲಿ ಎರಡು ಪ್ರತ್ಯೇಕ ದಾಳಿಗಳಲ್ಲಿ ನಾಲ್ವರು ಗಡಿ ಕಾವಲುಗಾರರನ್ನು ಕೊಂದಿದ್ದರು. ಬಲೂಚ್ ಜನಾಂಗೀಯ ಅಲ್ಪಸಂಖ್ಯಾತರಿಗೆ ಹೆಚ್ಚಿನ ಹಕ್ಕುಗಳನ್ನು ಬಯಸುವ ಉಗ್ರಗಾಮಿ ಗುಂಪು ಜೈಶ್ ಅಲ್-ಅದ್‌ಲ ದಾಳಿಯ ಹೊಣೆ ಹೊತ್ತಿತ್ತು.

### ಭಾರತೀಯ ಅಮೆರಿಕನ್ ಅಜಯ್ ಭುಟೋರಿಯಾಗೆ ಬೆದರಿಕೆ ಕರೆ

**ವಾಷಿಂಗ್ಟನ್:** ಡೆಮಾಕ್ರಟಿಕ್ ಪಾರ್ಟಿಯ ಭಾರತೀಯ ಅಮೆರಿಕನ್ ನಿಧಿ ಸಂಗ್ರಹಕಾರನ ಫೋನ್ಗೆ ಜನಾಂಗೀಯ ಮತ್ತು ಬೆದರಿಕೆ ಸಂದೇಶಗಳು ಬರುತ್ತಿದೆಯಂತೆ.! ನೀವು ಅಮೆರಿಕನ್ನರಿಗೆ ಉತ್ತಮವಾದದ್ದನ್ನು ಮಾಡುತ್ತಿದ್ದೀರಿ ಎಂದು ನೀವು ಹೇಳಿಕೊಳ್ಳುತ್ತೀರಿ, ಆದರೆ ನೀವು ಅಮೆರಿಕನ್ನರಿಗಾಗಿ ಏನನ್ನೂ ಮಾಡುತ್ತಿಲ್ಲ ಮತ್ತು ನೀವು ಅಮೆರಿಕದ ಬಗ್ಗೆ ಕಾಳಜಿ ವಹಿಸುವುದಿಲ್ಲ. ನೀನು ಭಾರತ ಮೂಲದವರು, ನೀವು ಭಾರತೀಯರ ಬಗ್ಗೆ ಮಾತ್ರ ಕಾಳಜಿ ವಹಿಸುತ್ತೀರಿ. ನೀವು ಭಾರತಕ್ಕೆ ಒಳ್ಳೆಯದನ್ನು ಮಾಡುತ್ತೀರಿ. ಆದರೆ ನೀವು ಯಾಕೆ ಇಲ್ಲಿದ್ದೀಯ? ಅಮೆರಿಕದಲ್ಲಿ ಭಿಕ್ಷುಕನಾಗುವುದನ್ನು ನಿಲ್ಲಿಸಿ ಮತ್ತು ಭಾರತದಲ್ಲಿ ನಾಯಕನಾಗು ಎಂದು ಅಜಯ್ ಜೈನ್ ಭುಟೋರಿಯಾ ಅವರಿಗೆ ಅಪರಿಚಿತ ಸಂಖ್ಯೆಯಿಂದ ಸಂದೇಶ ಬಂದಿದೆ.

ಅಜಯ್ ಭುಟೋರಿಯಾ ಅವರು ಡೆಪ್ಯೂಟಿ ನ್ಯಾಷನಲ್ ಫೈನಾನ್ಸ್ ಚೇರ್ ಡಿಎನ್ಸಿ ಮತ್ತು ನ್ಯಾಷನಲ್ ಫೈನಾನ್?ಸ ಕಮಿಟಿ, ಹ್ಯಾರಿಸ್-ವಾಲ್ಜ್ ಪ್ರಚಾರ ವಹಿಸಿದ್ದರು.ಅಧ್ಯಕ್ಷರ ಸಲಹಾ ಆಯೋಗದ ಆಯುಕ್ತರಲ್ಲಿ ಇವರು ಒಬ್ಬರು. ಈ ಪಾತ್ರದಲ್ಲಿ, ಕಾನೂನು ವಲಸಿಗ ಸಮುದಾಯದ ಹಲವಾರು ಸಮಸ್ಯೆಗಳನ್ನು ಪರಿಹರಿಸುವಲ್ಲಿ ಅವರು ಪ್ರಮುಖ ಪಾತ್ರ ವಹಿಸಿದರು. ಗ್ರೀನ್ ಕಾರ್ಡ್, ಬ್ಯಾಕ್ಲಾಗ್ಗಾಗಿ ಹೋರಾಡಲು ಭಾರತಕ್ಕೆ ಹಿಂತಿರುಗುವಂತೆ ಟ್ರಂಪ್ ಬೆಂಬಲಿಗರು ನನ್ನನ್ನು ಕೇಳುತ್ತಿದ್ದಾರೆ ಎಂದು ಭುಟೋರಿಯಾ ತಿಳಿಸಿದರು. ಈ ಕೆಲವು ಸಂದೇಶಗಳನ್ನು ಭೂಟೋರಿಯಾ ಅವರು ಸಾಮಾಜಿಕ ಮಾಧ್ಯಮ ವೇದಿಕೆಗಳಲ್ಲಿ ಪೋಸ್ಟ್ ಮಾಡಿದ್ದಾರೆ.

### ನೇಪಾಳಕ್ಕೆ ನುಸುಳಲು ಯತ್ನಿಸುತ್ತಿದ್ದ ಅಮೆರಿಕ ದಂಪತಿ ಬಂಧನ

**ಮಧುಬನಿ:** ಸೂಕ್ತ ಪ್ರಯಾಣ ದಾಖಲೆಗಳಿಲ್ಲದೆ ನೇಪಾಳಕ್ಕೆ ನುಸುಳಲು ಯತ್ನಿಸುತ್ತಿದ್ದ ಮಹಿಳೆ ಸೇರಿದಂತೆ ಇಬ್ಬರು ಅಮೆರಿಕ ಪ್ರಜೆಗಳನ್ನು ಬಿಹಾರದ ಮಧುಬನಿ ಜಿಲ್ಲೆಯಲ್ಲಿ ಬಂಧಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಬಂಧಿತ ಅಮೆರಿಕ ಪ್ರಜೆಗಳು ಕ್ಯಾಲಿ ಫೋರ್ನಿಯಾ ನಿವಾಸಿಗಳು ಎಂದು ಹಿರಿಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಭಾರತ-ನೇಪಾಳ ಗಡಿಯ ಬಳಿಯ ಜಯನಗರ ಪ್ರದೇಶದಲ್ಲಿ ತಂಗಿದ್ದಾಗ ವ್ಯವಸ್ಥಾಪನಾ ಬೆಂಬಲವನ್ನು ಒದಗಿಸಿದ ಇಬ್ಬರನ್ನು ಸ್ಥಳೀಯರನ್ನು ಪೊಲೀಸರು ಬಂಧಿಸಿದ್ದಾರೆ.

ಪೊಲೀಸರ ಪ್ರಕಾರ, ಸಶಸ್ತ್ರ ಸೀಮಾ ಬಲದ 48 ನೇ ಬೆಟಾಲಿಯನ್ ಭದ್ರತಾ ಸಿಬ್ಬಂದಿ ಭಾರತದಿಂದ ನೇಪಾಳಕ್ಕೆ ತೆರಳುತ್ತಿದ್ದಾಗ ಜಯನಗರ ಪೊಲೀಸ್ ಠಾಣೆಯ ವ್ಯಾಪ್ತಿಯಲ್ಲಿರುವ ಬೆಟೌನ್ಹಾ ಗಡಿ ಹೊರಠಾಣೆಯ ಬಳಿ ಇಬ್ಬರು ಅಮೆರಿಕನ್ನರನ್ನು ತಡೆದು ವಿಚಾರಿಸಿದರು. ಮಾನ್ಯ ಪ್ರಯಾಣ ದಾಖಲೆಗಳಿಲ್ಲದೆ ನೇಪಾಳಕ್ಕೆ ದಾಟಲು ಪ್ರಯತ್ನಿಸುತ್ತಿದ್ದಾಗ ಅವರನ್ನು ಎಸ್‌ಎಸ್‌ಬಿ ಸಿಬ್ಬಂದಿ ವಶಕ್ಕೆ ಪಡೆದರು. ಬಂಧಿತ ಅಮೆರಿಕ ಪ್ರಜೆಗಳು ದಂಪತಿ ನೇಪಾಳದಲ್ಲಿ ಜನಿಸಿದ ಮಹಿಳೆ ಆ ವ್ಯಕ್ತಿಯನ್ನು ಮದುವೆಯಾಗಿ ಅಮೆರಿಕ ಪೌರತ್ವ ಪಡೆದಿದ್ದರು.

### ಬಾಲರಾಮನನ್ನು ಬೆಚ್ಚಗಿಡಲು ರಾಮಮಂದಿರದಲ್ಲಿ ಸಿದ್ಧತೆ



**ಲಕ್ನೋ:** ಚಳಿಗಾಲ ಸಮೀಪಿಸಿದ್ದು, ಅಯೋಧ್ಯೆ ರಾಮಮಂದಿರದ ಬಾಲರಾಮನನ್ನು ಬೆಚ್ಚಗಿಡಲು ಸಿದ್ಧತೆ ಮಾಡಿಕೊಳ್ಳಲಾಗಿದೆ.ನವೆಂಬರ್ 20 ರಿಂದ ಬರುವ 'ಅಘರ್ ಕಿ ಪಂಚಮಿ'ಯಿಂದ ರಾಮಲಲ್ಲಾನಿಗೆ ಚಾದರ, ಪಶ್ಮಿನಾ ಶಾಲು ಹೊದಿಸಿ ಅಲಂಕಾರ ಮಾಡಲಾಗುವುದು.

ಹೀಟರ್ ಅಳವಡಿಕೆ ಮಾಡಿ ಮೂರ್ತಿಗೆ ಬಿಸಿ ನೀರಿನ ಅಭಿಷೇಕ ಮಾಡುವುದು. ಬಾಲರಾಮನಿಗೆ ಮೊಸರು ನೈವೇದ್ಯದ ಬದಲು ಹವಾಮಾನ ಬದಲಾವಣೆಯನ್ನು ಗಮನದಲ್ಲಿಟ್ಟುಕೊಂಡು ಒಣ ಹಣ್ಣುಗಳ ನೈವೇದ್ಯ ಇರುತ್ತದೆ. ಚಳಿಗಾಲದ ಉಡುಗೆಯನ್ನು ದೆಹಲಿ ಮೂಲದ ವಿನ್ಯಾಸಕರು ಹೊಲಿಯುತ್ತಿದ್ದಾರೆ. ನ.20ರಿಂದ, ರಾಮಲಲ್ಲಾ ಮೂರ್ತಿಗೆ ಉಗುರು ಬೆಚ್ಚನೆಯ ನೀರಿನಿಂದ ಸ್ನಾನ ಮಾಡಲಾಗುವುದು ಮತ್ತು ಗರ್ಭಗುಡಿಯಲ್ಲಿ ಹೀಟರ್‌ಗಳನ್ನು ಅಳವಡಿಸಿ ಅದನ್ನು ಬೆಚ್ಚಗಿಡಲಾಗುತ್ತದೆ. ಹವಾಮಾನ ವೈಪರೀತ್ಯದ ಸಮಯದಲ್ಲಿ ಗರ್ಭಗುಡಿಯಲ್ಲಿ ಬ್ಲೋವರ್‌ನಿಂದ ಬೆಚ್ಚಗಿನ ಗಾಳಿಯನ್ನು ಸಹ ಒದಗಿಸಲಾಗುತ್ತದೆ. ರಾಮಲಲ್ಲಾ ಬಾಲಕ. ಹೀಗಾಗಿ, ಅವನ ಆರೈಕೆ ಮುಖ್ಯವಾಗುತ್ತದೆ. ಇದನ್ನು ಗಮನದಲ್ಲಿಟ್ಟುಕೊಂಡು ಚಳಿಗಾಲದಲ್ಲಿ ಬಾಲಕ ರಾಮನಿಗೆ ವಿಶೇಷ ಗಮನ ಕೊಡಲಾಗುವುದು. ದೇವಾಲಯದ ಟ್ರಸ್ಟ್‌ನ ವಕ್ತಾರ ಓಂಕಾರ್ ಸಿಂಗ್, ರಾಮಲಲ್ಲಾ ರಾಮಮಂದಿರದಲ್ಲಿ ರಾಜಕುಮಾರನಾಗಿ ಕುಳಿತಿದ್ದಾನೆ. ಆದ್ದರಿಂದ ಅವನ ಬಟ್ಟೆಗಳು ಅವನ ರಾಜಪ್ರಭುತ್ವಕ್ಕೆ ಹೊಂದಿಕೆಯಾಗಬೇಕು ಎಂದು ಸಿಂಗ್ ಹೇಳಿದರು.

# ರಾಜು ಜೇಮ್ಸ್ ಬಾಂಡ್
## ಡಿಸೆಂಬರ್ 27ಕ್ಕೆ ಬಿಡುಗಡೆ



ಹಲವು ದಿನಗಳ ಊಹಾಪೋಹಗಳ ನಂತರ ಕಳೆದ ಶನಿವಾರ ಚಿತ್ರದ ಮೋಷನ್ ಪೋಸ್ಟರ್ ಬಿಡುಗಡೆಯಾಗಿದ್ದು, ಬಿಡುಗಡೆ ದಿನಾಂಕವನ್ನು ಘೋಷಿಸಲಾಗಿದೆ. 'ಫಸ್ಟ್ ರ‍್ಯಾಂಕ್ ರಾಜು' ಸಿನಿಮಾ ಮೂಲಕ ಗಮನ ಸೆಳೆದಿದ್ದ ನಟ ಗುರುನಂದನ್ ಅಭಿನಯದ ರಾಜು ಜೇಮ್ಸ್ ಬಾಂಡ್ ಸಿನಿಮಾ ಡಿಸೆಂಬರ್ 27 ರಂದು ಬಿಡುಗಡೆಯಾಗುತ್ತಿದೆ. ದೀಪಕ್ ಮಧುವನಹಳ್ಳಿ ನಿರ್ದೇಶನದ ಈ ಚಿತ್ರವು ಶುದ್ಧ ಮನೋರಂಜನೆ ಸಿನಿಮಾ ಆಗಿದೆ. ಹಲವು ದಿನಗಳ ಊಹಾಪೋಹಗಳ ನಂತರ ಕಳೆದ ಶನಿವಾರ ಚಿತ್ರದ ಮೋಷನ್ ಪೋಸ್ಟರ್ ಬಿಡುಗಡೆಯಾಗಿದ್ದು, ಬಿಡುಗಡೆ ದಿನಾಂಕವನ್ನು ಘೋಷಿಸಲಾಗಿದೆ.

ನಿರ್ಮಾಪಕರಾದ ಮಂಜುನಾಥ್ ವಿಶ್ವಕರ್ಮ ಮತ್ತು ಕಿರಣ್ ಭರ್ತೂರು ಅವರು ಮೋಷನ್ ಪೋಸ್ಟರ್ ಅನಾವರಣ ಮಾಡುವ ಮೂಲಕ ಚಿತ್ರದ ಪ್ರಚಾರಕ್ಕೆ ಚಾಲನೆ ನೀಡಿದರು.

ಗುರುನಂದನ್ ಅವರು 'ಫಸ್ಟ್ ರ‍್ಯಾಂಕ್ ರಾಜು' ಇಮೇಜ್ ನಿಂದ ಹೊರಬಂದಿದ್ದು, ಈ ಚಿತ್ರದಲ್ಲಿ ಹೊಸ ಅವತಾರದಲ್ಲಿ ಕಾಣಿಸಿಕೊಂಡಿದ್ದಾರೆ ಎಂದು ನಿರ್ದೇಶಕ ಮಧುವನಹಳ್ಳಿ ಅವರು ಹೇಳಿದ್ದಾರೆ.

'ರಾಜು ಜೇಮ್ಸ್ ಬಾಂಡ್' ಸಿನಿಮಾದಲ್ಲಿ ಯಾವುದೇ ಅಶ್ಲೀಲ ಸಂಭಾಷಣೆ ಇರುವುದಿಲ್ಲ. ಇದೊಂದು ಶುದ್ಧ ಮನೋರಂಜನೆ ಸಿನಿಮಾ ಆಗಿದೆ.. ಎರಡುಕಾಲು ಗಂಟೆಗಳ ಚಿತ್ರದಲ್ಲಿ ಮಕ್ಕಾಲು ಗಂಟೆ ನೀವು ನಗುವಿಗೆ ಮೀಸಲಿಡಬೇಕು. ವರ್ಷದ ಕೊನೆಯಲ್ಲಿ ನಗುನಗುತ್ತಾ ನೂತನ ವರ್ಷವನ್ನು ನಮ್ಮ ಸಿನಿಮಾ ಮೂಲಕ ಸ್ವಾಗತಿಸೋಣ' ಎಂದರು.

'ಫಸ್ಟ್ ರ‍್ಯಾಂಕ್ ರಾಜು' ಸಿನಿಮಾದ ನಾಯಕ ಗುರುನಂದನ್ ಮಾತನಾಡಿ, 'ಜೇಮ್ಸ್ ಬಾಂಡ್' ರಾಜುಗೂ 'ಫಸ್ಟ್ ರ‍್ಯಾಂಕ್' ರಾಜೂಗೂ ಬಹಳ ವ್ಯತ್ಯಾಸ ಇದೆ. ಎರಡು ಪಾತ್ರಗಳು ಒಂದಕ್ಕೊಂದು ಬಹಳ ಭಿನ್ನ, ವೈರುದ್ಯ ಹೊಂದಿವೆ ಎಂದರು.



## ಡಿ. 6ಕ್ಕೆ 'ಧೀರ ಭಗತ್ ರಾಯ್'



ನಾಯಕ ನಟನಾಗಿ ರಾಕೇಶ್ ದಳವಾಯಿ ಹಾಗೂ ನಟಿ ಸುಚರಿತ ಸಹಾಯಾರ ಅವರನ್ನು ಈ ಚಿತ್ರ ಪರಿಚಯಿಸುತ್ತಿದೆ. ಇವರಿಬ್ಬರಿಗೂ ಇದು ಚೊಚ್ಚಲ ಚಿತ್ರವಾಗಿದೆ.

ಡಿಸೆಂಬರ್ 6ರಂದು ಬಿಡುಗಡೆಗೆ ಸಜ್ಜಾಗಿರುವ ಧೀರ ಭಗತ್ ರಾಯ್ ಬಹುನಿರೀಕ್ಷಿತ ಪುಷ್ಪ 2 ಜೊತೆಗೆ ಬಾಕ್ಸ್ ಆಫೀಸ್ ನಲ್ಲಿ ಮುಖಾಮುಖಿಯಾಗುತ್ತಿದೆ. ಕನ್ನಡ ಸಿನಿಮಾ ಯಶಸ್ವಿಯಾಗುವ ಭರವಸೆಯಲ್ಲಿ ನಿರ್ದೇಶಕ ಕರ್ಣನ್ ಮತ್ತವರ ತಂಡ ಇದ್ದಾರೆ. ಇದು ಕೇವಲ ಸ್ಪರ್ಧೆಯ ಬಗ್ಗೆ ಅಲ್ಲ, ಇದು ಎತ್ತರವಾಗಿ ನಿಲ್ಲುವ ಧೈರ್ಯವಾಗಿದೆ. ಬಾಹುಬಲಿ ವಿರುದ್ಧ ರಂಗಿ ತರಂಗದ ಯಶಸ್ಸು ನಮಗೆ ಈ ಹೆಜ್ಜೆ ಇಡುವ ಆತ್ಮವಿಶ್ವಾಸವನ್ನು ನೀಡುತ್ತದೆ ಎಂದು ಕರ್ಣನ್ ಹೇಳಿದ್ದಾರೆ. ನಿರ್ಮಾಪಕ ಪ್ರವೀಣ್ ಗೌಡ, ಕನ್ನಡಿಗರು ನಮ್ಮನ್ನು ಬೆಂಬಲಿಸಲಿದ್ದಾರೆ. ನಾವು ನಮ್ಮ ಪ್ರೇಕ್ಷಕರನ್ನು ನಂಬುತ್ತೇವೆ ಎಂದರು. ನಾಯಕ ನಟನಾಗಿ ರಾಕೇಶ್ ದಳವಾಯಿ ಹಾಗೂ ನಟಿ ಸುಚರಿತ ಸಹಾಯಾರ ಅವರನ್ನು ಈ ಚಿತ್ರ ಪರಿಚಯಿಸುತ್ತಿದೆ. ಇವರಿಬ್ಬರಿಗೂ ಇದು ಚೊಚ್ಚಲ ಚಿತ್ರವಾಗಿದೆ. ಪುಷ್ಪ 2 ಜೊತೆಗೆ ಸ್ಪರ್ಧಿಸುತ್ತಿರುವುದಕ್ಕೆ ರಾಕೇಶ್ ಹೆಮ್ಮೆ ವ್ಯಕ್ತಪಡಿಸಿದ್ದಾರೆ. ನಾನು ಬಳ್ಳಾರಿ ಹುಡುಗ ಕನ್ನಡ ಚಿತ್ರರಂಗ ನನ್ನ ಹೃದಯ ಎಂದಿದ್ದಾರೆ. ಶ್ರೀ ಓಂ ಸಿನಿ ಎಂಟರ್ ಟೈನರ್ಸ್ ನಿರ್ಮಾಣದ ಧೀರ ಭಗತ್ ರಾಯ್ ಚಿತ್ರಕ್ಕೆ ಪೂರ್ಣಚಂದ್ರ ತೇಜಸ್ವಿ ಸಂಗೀತ ಸಂಯೋಜಿಸಿದ್ದು, ಸೆಲ್ವಂ ಜಾನ್ ಅವರ ಛಾಯಾಗ್ರಹಣ ಮತ್ತು ಎನ್ ಎಂ ವಿಶ್ವ ಅವರ ಸಂಕಲನವಿದೆ. ಉತ್ತಮವಾಗಿ ಚಿತ್ರ ನಿರ್ಮಾಣ ಮಾಡಲಾಗಿದೆ ಎಂದು ಮುಕ್ತ ಕಂಠದಿಂದ ಹೇಳಿದರು.

## ರಮ್ಯಾ ಹನಿಮೂನ್ ಫೋಟೋ ವೈರಲ್!

ನಟಿ ರಮ್ಯಾ ಪಾಂಡಿಯನ್, ಲೋವಲ್ ಧವನ್ ಅವರನ್ನು ಮದುವೆಯಾದ ನಂತರ, ಅವರ ಹನಿಮೂನ್ ಫೋಟೋಗಳು ಸೋಶಿಯಲ್ ಮೀಡಿಯಾದಲ್ಲಿ ವೈರಲ್ ಆಗಿವೆ. ಒಂದೇ ಒಂದು ಫೋಟೋಶೂಟ್ ಮೂಲಕ ಫೇಮಸ್ ಆದವರು ನಟಿ ರಮ್ಯಾ ಪಾಂಡಿಯನ್. ಅವರ ಟೆರೇಸ್ ಫೋಟೋಶೂಟ್ ಸಖತ್ ವೈರಲ್ ಆಗಿ, ಅವರಿಗೆ ಸಿನಿಮಾ ಮತ್ತು ಟಿವಿ ಅವಕಾಶಗಳನ್ನು ತಂದುಕೊಟ್ಟಿತು. ನಂತರ ವಿಜಯ್ ಟಿವಿಯ ಕುಕ್ ವಿತ್ ಕೋಮಾಲಿ ಶೋನಲ್ಲಿ ಸ್ಪರ್ಧಿಯಾಗಿ ಭಾಗವಹಿಸಿದ ರಮ್ಯಾ, ಅಲ್ಲಿ ತಮ್ಮ ಅಡುಗೆ ಕೌಶಲ್ಯವನ್ನು ಪ್ರದರ್ಶಿಸಿದರು. ಕುಕ್ ವಿತ್ ಕೋಮಾಲಿ ನಂತರ ಬಿಗ್ ಬಾಸ್ ಅವಕಾಶ ಬಂತು. ಅಲ್ಲೂ ಫೈನಲ್ ತನಕ ಮುನ್ನಡೆದರು. ನಂತರ ಸೂರ್ಯ ನಿರ್ಮಾಣದ 'ಇರಾಮೆ ಆಂಡಾಲುಮ್ ರಾವಣೆ ಆಂಡಾಲುಮ್' ಚಿತ್ರದಲ್ಲಿ ನಟಿಸಿದ ರಮ್ಯಾ, ಆ ಚಿತ್ರದ ನಂತರ ಎಲ್ಲೂ ಕಾಣಿಸಲಿಲ್ಲ. ಚಿತ್ರರಂಗದಲ್ಲಿ ಅವಕಾಶಗಳು ಸಿಗದ ಕಾರಣ, ಆಧ್ಯಾತ್ಮದತ್ತ ಮುಖ ಮಾಡಿದ ಅವರು ಯೋಗಕ್ಕಾಗಿ ರಿಷಿಕೇಶಕ್ಕೆ ಹೋಗಿದ್ದರು. ಆಗ ನೀಡಿದ ಸಂದರ್ಶನವೊಂದರಲ್ಲಿ ಪ್ರೇಮ ವಿವಾಹವಾಗುತ್ತೇನೆ ಎಂದಿದ್ದರು ರಮ್ಯಾ. ಅದರಂತೆ ರಿಷಿಕೇಶದಲ್ಲಿ ಯೋಗಕ್ಕಾಗಿ ಶ್ರೀ ಶ್ರೀ ರವಿಶಂಕರ್ ಆಶ್ರಮಕ್ಕೆ ಹೋದ ರಮ್ಯಾ ಮತ್ತು ಯೋಗ ತರಬೇತಿದಾರ ಲೋವಲ್ ಧವನ್ ನಡುವೆ ಪ್ರೀತಿ ಶುರುವಾಯಿತು.

# 1 ಸಾಂಗ್ ಹಾಡಲು 3 ಕೋಟಿ ರೂಪಾಯಿ



ಸಂಗೀತ ನಿರ್ದೇಶಕ ಎ.ಆರ್. ರೆಹಮಾನ್ ಅವರು ಸಿಂಗರ್ ಆಗಿಯೂ ಫೇಮಸ್ ಆಗಿದ್ದಾರೆ. ಅವರ ಧ್ವನಿಯಲ್ಲಿ ಬಂದ ಅನೇಕ ಹಾಡುಗಳು ಸೂಪರ್ ಹಿಟ್ ಆಗಿವೆ. ಹಾಗಾಗಿ ಅವರ ಕಂಠಕ್ಕೆ ಸಖತ್ ಬೇಡಿಕೆ ಇದೆ. ಆ ಬೇಡಿಕೆಗೆ ತಕ್ಕಂತೆಯೇ ಅವರು ಸಂಬಳ ಪಡೆಯುತ್ತಾರೆ. ಎ.ಆರ್. ರೆಹಮಾನ್ ಅವರು ಒಂದು ಹಾಡಿಗೆ ಬರೋಬ್ಬರಿ 3 ಕೋಟಿ ರೂಪಾಯಿ ಸಂಭಾವನೆ ಪಡೆಯುತ್ತಾರೆ.

ತಮ್ಮ ಸಂಗೀತದ ಮೂಲಕವೇ ಎಷ್ಟೋ ಸಿನಿಮಾಗಳನ್ನು ಗೆಲ್ಲಿಸಿದ್ದಾರೆ ಎ.ಆರ್. ರೆಹಮಾನ್. ಅವರಿಗೆ ಇರುವ ಬೇಡಿಕೆ ದೊಡ್ಡದು. ಭಾರತದಲ್ಲಿ ಮಾತ್ರವಲ್ಲದೇ ವಿಶ್ವಾದ್ಯಂತ ಅವರಿಗೆ ಖ್ಯಾತಿ ಇದೆ. ಆಸ್ಕರ್ ಪ್ರಶಸ್ತಿ ಪಡೆದಿರುವ ಅವರು ಸಾವಿರಾರು ಸೂಪರ್ ಹಿಟ್ ಗೀತೆಗಳನ್ನು ನೀಡಿದ್ದಾರೆ. ದಕ್ಷಿಣ ಭಾರತದಲ್ಲಿ ಹಾಗೂ ಬಾಲಿವುಡ್‌ನಲ್ಲಿ ತಮ್ಮದೇ ಛಾಪು ಮೂಡಿಸಿದ ಎ.ಆರ್. ರೆಹಮಾನ್ ಅವರು ದುಬಾರಿ ಸಂಭಾವನೆ ಪಡೆಯುತ್ತಾರೆ. ವರದಿಗಳ ಪ್ರಕಾರ, ಒಂದು ಹಾಡಿಗೆ ಧ್ವನಿ ನೀಡಲು ಅವರು ಪಡೆಯುವ ಸಂಭಾವನೆ 3 ಕೋಟಿ ರೂಪಾಯಿ! ಸ್ಟಾರ್ ಸಿಂಗರ್ಸ್ ಎನಿಸಿಕೊಂಡ ಸೋನು ನಿಗಮ್, ಶ್ರೇಯಾ ಘೋಷಾಲ್ ಮುಂತಾದವರ ಸಂಭಾವನೆಗಿಂತಲೂ ಇದು 15 ಪಟ್ಟು ಅಧಿಕ ಮೊತ್ತ.

**ಬಾಲಿವುಡ್‌ನಲ್ಲಿ ತಮ್ಮದೇ ಛಾಪು ಮೂಡಿಸಿದ ಎ.ಆರ್.ಆರ್**

ಎ.ಆರ್. ರೆಹಮಾನ್ ಅವರು ಪೂರ್ಣಾವಧಿ ಸಿಂಗರ್ ಅಲ್ಲ. ಅಂದರೆ, ಅವರ ಮುಖ್ಯ ಕಸುಬು ಹಾಡುಗಾರಿಕೆ ಅಲ್ಲ. ಸಂಗೀತ ನಿರ್ದೇಶಕನಾಗಿ ಅವರು ಬ್ಯುಸಿ ಆಗಿದ್ದಾರೆ. ಹಾಗಿದ್ದರೂ ಕೂಡ ಅಲ್ಲೊಂದು ಇಲ್ಲೊಂದು ಹಾಡುಗಳಿಗೆ ಮಾತ್ರ ಅವರು ಧ್ವನಿ ನೀಡುತ್ತಾರೆ. ಅವರಿಂದ ಒಂದು ಹಾಡು ಹಾಡಿಸಬೇಕು ಎಂದರೆ ನಿರ್ಮಾಪಕರು 3 ಕೋಟಿ ರೂಪಾಯಿ ನೀಡಬೇಕು.

ಅಷ್ಟಕ್ಕೂ ಎ.ಆರ್. ರೆಹಮಾನ್ ಅವರು ಇಷ್ಟು ದೊಡ್ಡ ಮೊತ್ತವನ್ನು ಚಾರ್ಜ್ ಮಾಡಲು ಕಾರಣ ಕೂಡ ಇದೆ. ತಮ್ಮ ಬಳಿ ಯಾರೂ ಕೂಡ ಬಂದು ಹಾಡಲು ಒತ್ತಾಯ ಮಾಡಬಾರದು ಎಂಬುದು ಎ.ಆರ್. ರೆಹಮಾನ್ ಅವರ ಉದ್ದೇಶ. ಯಾಕೆಂದರೆ, ಅವರು ಗಾಯನಕ್ಕಿಂತಲೂ ಸಂಗೀತ ನಿರ್ದೇಶನಕ್ಕೆ ಹೆಚ್ಚು ಸಮಯ ನೀಡಬೇಕು. ಆದ್ದರಿಂದ ಗಾಯನಕ್ಕಾಗಿ ತಮ್ಮನ್ನು ಯಾರೂ ಕರೆಯಬಾರದು ಎಂದು 3 ಕೋಟಿ ರೂಪಾಯಿ ಸಂಭಾವನೆಯನ್ನು ಎ.ಆರ್. ರೆಹಮಾನ್ ನಿಗದಿ ಮಾಡಿಕೊಂಡಿದ್ದಾರೆ. ಹಾಗಿದ್ದರೂ ಕೂಡ ಕೆಲವು ನಿರ್ಮಾಪಕರು ಈ ದುಬಾರಿ ಸಂಬಳ ನೀಡಿ ಎ.ಆರ್. ರೆಹಮಾನ್ ಅವರಿಂದಲೇ ಹಾಡಿಸುತ್ತಾರೆ.

ಭಾರತೀಯ ಚಿತ್ರರಂಗದಲ್ಲಿ ಸ್ಟಾರ್ ಗಾಯಕರಾಗಿ ಗುರುತಿಸಿಕೊಂಡಿರುವ ಶ್ರೇಯಾ ಘೋಷಾಲ್, ಸುನಿಧಿ ಚೌಹಾಣ್, ಸೋನು ನಿಗಮ್ ಅವರು ಪ್ರತಿ ಹಾಡಿಗೆ ಹಲವು ಲಕ್ಷ ರೂಪಾಯಿಗಳನ್ನು ಚಾರ್ಜ್ ಮಾಡುತ್ತಾರೆ. ಪ್ರತಿ ಹಾಡಿಗೆ ಶ್ರೇಯಾ ಘೋಷಾಲ್ ಅವರು 25 ಲಕ್ಷ ರೂಪಾಯಿ ಪಡೆಯುತ್ತಾರೆ. ಸುನಿಧಿ ಚೌಹಾಣ್ ಅವರು 18ರಿಂದ 20 ಲಕ್ಷ ರೂಪಾಯಿ ಪಡೆಯುತ್ತಾರೆ. ಅರಿಜಿತ್ ಸಿಂಗ್ ಕೂಡ ಇಷ್ಟೇ ಪ್ರಮಾಣದ ಸಂಬಳ ಡಿಮ್ಯಾಂಡ್ ಮಾಡುತ್ತಾರೆ.

## ಸ್ಟಾರ್ ನಟನ ಕೊನೆಯ ಸಿನಿಮಾದಲ್ಲಿ ಸಮಂತಾ



ವಿಜಯ್ ನಟನೆಯ ದಳಪತಿ 69 ಚಿತ್ರದಲ್ಲಿ ಸಮಂತಾ ನಟಿಸುತ್ತಿರುವ ಬಗ್ಗೆ ವರದಿಗಳು ಪ್ರಕಟವಾಗುತ್ತಿವೆ. ಕತ್ತಿ, ತೆರಿ, ಮೆರ್ಸಲ್ ನಂತರ ವಿಜಯ್ ದಳಪತಿ 69ರಲ್ಲಿ ಸಮಂತಾ ನಟಿಸುತ್ತಿರುವ ಬಗ್ಗೆ ವರದಿಗಳಾಗಿವೆ. ವಿಜಯ್ ಮತ್ತು ನಿರ್ದೇಶಕ ಹೆಚ್. ವಿನೋದ್ ಕಾಂಬಿನೇಷನ್‌ನಲ್ಲಿ ಬರುತ್ತಿರುವ ಮೊದಲ ಚಿತ್ರ ಇದು. ರಾಜಕೀಯ ಆಕ್ಷನ್ ಥ್ರಿಲ್ಲರ್ ಆಗಿ ಈ ಚಿತ್ರ ತೆರೆಗೆ ಬರುತ್ತಿದೆ. ರಾಜಕೀಯಕ್ಕೆ ಬಂದ ನಂತರ ಸಿನಿಮಾಗಳನ್ನು ಮಾಡುವುದಿಲ್ಲ ಎಂದು ವಿಜಯ್ ಹೇಳಿರುವುದರಿಂದ ಇದು ಅವರ ಕೊನೆಯ ಚಿತ್ರ ಎಂದು ಭಾವಿಸಲಾಗಿದೆ. ಹಾಗಾಗಿ, ನಿರೀಕ್ಷೆಗಳು ಹೆಚ್ಚು. ಈ ಚಿತ್ರ ಇತಿಹಾಸ ನಿರ್ಮಿಸಲಿ ಎಂದು ಚಿತ್ರತಂಡ ಶ್ರಮಿಸುತ್ತಿದೆ.

ಇದುವರೆಗೆ ಯಾವುದೇ ತಮಿಳು ಚಿತ್ರವು 1000 ಕೋಟಿ ಸಂಗ್ರಹಿಸಿಲ್ಲ. ದಳಪತಿ 69 ಆ 100ರ ಗಡಿ ದಾಟುತ್ತದೆ ಎಂದು ನಿರೀಕ್ಷಿಸಲಾಗಿದೆ. ಈ ಚಿತ್ರದಲ್ಲಿ ವಿಜಯ್‌ಗೆ ಜೋಡಿಯಾಗಿ ಪೂಜಾ ಹೆಗ್ಡೆ ನಟಿಸುತ್ತಿದ್ದಾರೆ. ಬಾಬಿ ಡಿಯೋಲ್, ಗೌತಮ್ ಮೀನನ್, ಪ್ರಕಾಶ್ ರಾಜ್, ನರೈನ್, ಪ್ರಿಯಾಮಣಿ, ಮಮಿತಾ ಬೈಜು, ಮೋನಿಷಾ ಬ್ಲೆಸ್ಸಿ ನಟಿಸುತ್ತಿದ್ದಾರೆ. ಈಗ ಸಮಂತಾ ಕೂಡ ಈ ಚಿತ್ರಕ್ಕೆ ಸೇರ್ಪಡೆಯಾಗುತ್ತಿದ್ದಾರೆ ಎನ್ನಲಾಗಿದೆ. ಕತ್ತಿ, ತೆರಿ, ಮೆರ್ಸಲ್ ಚಿತ್ರಗಳಲ್ಲಿ ವಿಜಯ್ ಜೊತೆ ನಟಿಸಿದ ಸಮಂತಾ ಈಗ 4ನೇ ಬಾರಿಗೆ ದಳಪತಿ 69ರಲ್ಲಿ ನಟಿಸುತ್ತಿದ್ದಾರೆ ಎನ್ನಲಾಗಿದೆ. 2022ರಲ್ಲಿ ಕಾತುವಾಕುಲ ರೆಂಡು ಕಾದಲ್ ಚಿತ್ರದಲ್ಲಿ ನಟಿಸಿದ್ದರು.

# ಸುದ್ದಿಗೋಷ್ಠಿಯಿಂದ ಗಂಭೀರ್‌ನನ್ನು ದೂರವಿಡಿ

ಆಸ್ಟ್ರೇಲಿಯಾ ಪ್ರವಾಸಕ್ಕೆ ತೆರಳುವ ಮುನ್ನ ಟೀಂ ಇಂಡಿಯಾದ ಮುಖ್ಯ ಕೋಚ್ ಗೌತಮ್ ಗಂಭೀರ್ ಮಾಧ್ಯಮಗಳನ್ನು ಉದ್ದೇಶಿಸಿ ಮಾತನಾಡಿದರು. ಇದರಲ್ಲಿ ಅವರು ಟೀಂ ಇಂಡಿಯಾ, ರೋಹಿತ್ ಶರ್ಮಾ ಮತ್ತು ವಿರಾಟ್ ಕೊಹ್ಲಿ ಬಗ್ಗೆ ಪಾಪರಾಜಿಗಳು ಕೇಳಿದ ಪ್ರಶ್ನೆಗಳಿಗೆ ಮುಕ್ತವಾಗಿ ಉತ್ತರ ನೀಡಿದರು. ಕೆಎಲ್ ರಾಹುಲ್ ಫಾರ್ಮ್ ಬಗ್ಗೆಯೂ ಅವರು ಮಹತ್ವದ ಸಂಗತಿಯನ್ನು ಹಂಚಿಕೊಂಡರು. ಆದರೆ ಗೌತಮ್ ಗಂಭೀರ್ ಅವರ ಈ ಪತ್ರಿಕಾಗೋಷ್ಠಿಯ ನಂತರ ಟೀಂ ಇಂಡಿಯಾ ಮಾಜಿ ಕ್ರಿಕೆಟಿಗ ಮತ್ತು ಖ್ಯಾತ ಕಾಮೆಂಟೇಟರ್ ಸಂಜಯ್ ಮಂಜ್ರೇಕರ್ ವಿವಾದಾತ್ಮಕ ಟ್ವೀಟ್ ಮಾಡಿದ್ದಾರೆ. ಈ ಟ್ವೀಟ್‌ನಲ್ಲಿ ಅವರು, ಗೌತಮ್ ಗಂಭೀರ್ ಅವರಿಗೆ ಹೇಗೆ ಮಾತನಾಡಬೇಕೆಂದು ತಿಳಿದಿಲ್ಲ, ಅವರ ಬದಲು ರೋಹಿತ್ ಅಥವಾ ಅಗರ್ಕರ್ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಬೇಕು ಎಂದು ಸಂಜಯ್ ಮಂಜ್ರೇಕರ್ ಹೇಳಿದ್ದಾರೆ.

**ಹೇಗೆ ಮಾತನಾಡಬೇಕೆಂದು ತಿಳಿದಿಲ್ಲ**

ಗೌತಮ್ ಗಂಭೀರ್ ಅವರ ಪತ್ರಿಕಾಗೋಷ್ಠಿ ಮುಗಿದ ತಕ್ಷಣ ಸಂಜಯ್ ಮಂಜ್ರೇಕರ್, ಅವರ ಮೇಲೆ ಪ್ರಶ್ನೆಗಳನ್ನು ಎತ್ತಿದರು. ಮಂಜ್ರೇಕರ್ ಟ್ವೀಟ್ ಮಾಡಿ, 'ಗೌತಮ್ ಗಂಭೀರ್ ಅವರ ಪತ್ರಿಕಾಗೋಷ್ಠಿಯನ್ನು ನೋಡಿದೆ. ಗೌತಮ್ ಗಂಭೀರ್ ಅವರನ್ನು ಈ ರೀತಿಯ ಪತ್ರಿಕಾಗೋಷ್ಠಿಯಿಂದ ದೂರವಿಡುವುದು ಬಿಸಿಸಿಐಗೆ ಒಳ್ಳೆಯದು. ಗಂಭೀರ್ ತೆರೆಮರೆಯಲ್ಲಿ ಮಾತ್ರ ಕೆಲಸ ಮಾಡಲಿ. ಗಂಭೀರ್‌ಗೆ ಹೇಗೆ ಮಾತನಾಡಬೇಕು ಎಂಬುದು ಗೊತ್ತಿಲ್ಲ. ಇದರ ಜೊತೆಗೆ ಶಿಷ್ಟಾಚಾರದ ಬಗ್ಗೆ ಅವರಿಗೆ ಅರಿವಿಲ್ಲ. ಹೀಗಾಗಿ ರೋಹಿತ್ ಮತ್ತು ಅಗರ್ಕರ್ ಮಾಧ್ಯಮಗಳೊಂದಿಗೆ ಮಾತನಾಡುವುದು ಸೂಕ್ತ ಎಂದು ನನಗನಿಸುತ್ತದೆ ಎಂದು ಬರೆದುಕೊಂಡಿದ್ದಾರೆ. ಸಂಜಯ್ ಮಂಜ್ರೇಕರ್ ಅವರು ಗೌತಮ್ ಗಂಭೀರ್ ಬಗ್ಗೆ ಬಹಿರಂಗವಾಗಿ ಪ್ರಶ್ನೆಗಳನ್ನು ಎತ್ತಿದ್ದು, ಮುಂದಿನ ದಿನಗಳಲ್ಲಿ ವಿವಾದ ಹೇಳುವುದು ಖಚಿತ ಎನ್ನಲಾಗುತ್ತಿದೆ. ಸೋಷಿಯಲ್ ಮೀಡಿಯಾದಲ್ಲಿ ಮಂಜ್ರೇಕರ್ ಆಗಾಗ ಈ ರೀತಿಯ ಹೇಳಿಕೆಗಳನ್ನು ನೀಡುವ ಮೂಲಕ ಸದಾ ವಿವಾದದಲ್ಲಿರುತ್ತಾರೆ. ಈ ಹಿಂದೆ ರವೀಂದ್ರ ಜಡೇಜಾ ಅವರ ವಿರುದ್ಧವೂ ವಿವಾದಾತ್ಮಕ ಹೇಳಿಕೆ ನೀಡಿದ್ದರು. ಇದೀಗ ಗೌತಮ್ ಗಂಭೀರ್ ಅವರನ್ನು ಟೀಕಿಸಿದ್ದಾರೆ.



ಪ್ರಸ್ತುತ ಗೌತಮ್ ಗಂಭೀರ್ ಸಾಕಷ್ಟು ಒತ್ತಡದಲ್ಲಿದ್ದಾರೆ. ಏಕೆಂದರೆ ಅವರ ಕೋಚಿಂಗ್ ಅಡಿಯಲ್ಲಿ, ಟೀಂ ಇಂಡಿಯಾ ತನ್ನ ಸ್ವಂತ ತವರಿನಲ್ಲಿ ಟೆಸ್ಟ್ ಸರಣಿಯನ್ನು 0-3 ರಿಂದ ಕಳೆದುಕೊಂಡಿತು. ನ್ಯೂಜಿಲೆಂಡ್ ವಿರುದ್ಧ ಟೀಂ ಇಂಡಿಯಾ ಕಳಪೆ ಪ್ರದರ್ಶನ ನೀಡಿತ್ತು. ಅದಕ್ಕೂ ಮುನ್ನ ಶ್ರೀಲಂಕಾ ವಿರುದ್ಧವೂ ಏಕದಿನ ಸರಣಿಯನ್ನು ಕಳೆದುಕೊಂಡಿತ್ತು. ಈಗ ಗೌತಮ್ ಗಂಭೀರ್ ಬಾರ್ಡರ್-ಗವಾಸ್ಕರ್ ಸರಣಿಯನ್ನಾಡಲು ತಂಡದೊಂದಿಗೆ ಆಸ್ಟ್ರೇಲಿಯಾಕ್ಕೆ ಪ್ರಯಾಣ ಬೆಳೆಸಿದ್ದಾರೆ.

# ರೋಹಿತ್ ಅಲಭ್ಯರಾದರೆ, ಇವರೇ ಕ್ಯಾಪ್ಟನ್



ಭಾರತ ಮತ್ತು ಆಸ್ಟ್ರೇಲಿಯಾ ನಡುವಣ ಬಾರ್ಡರ್-ಗವಾಸ್ಕರ್ ಟೆಸ್ಟ್ ಸರಣಿಯು ನವೆಂಬರ್ 22 ರಿಂದ ಶುರುವಾಗಲಿದೆ. ಪರ್ತ್‌ನಲ್ಲಿ ನಡೆಯಲಿರುವ ಈ ಸರಣಿಯ ಮೊದಲ ಪಂದ್ಯಕ್ಕೆ ಟೀಮ್ ಇಂಡಿಯಾ ನಾಯಕ ರೋಹಿತ್ ಶರ್ಮಾ ಅಲಭ್ಯರಾಗುವ ಸಾಧ್ಯತೆಯಿದೆ.

ರೋಹಿತ್ ಶರ್ಮಾ ದಂಪತಿಯು ಎರಡನೇ ಮಗುವಿನ ನಿರೀಕ್ಷೆಯಲ್ಲಿದ್ದು, ಹೀಗಾಗಿ ಪರ್ತ್ ಟೆಸ್ಟ್ ಪಂದ್ಯಕ್ಕೆ ಹಿಟ್‌ಮ್ಯಾನ್ ಅಲಭ್ಯರಾಗುವ ಸಾಧ್ಯತೆಯಿದೆ. ಇನ್ನು ರೋಹಿತ್ ಶರ್ಮಾ ಅಲಭ್ಯರಾದರೆ ಟೀಮ್ ಇಂಡಿಯಾವನ್ನು ಮುನ್ನಡೆಸುವವರು ಯಾರು ಎಂಬ ಪ್ರಶ್ನೆ ಮೂಡುವುದು ಸಹಜ.

ಈ ಪ್ರಶ್ನೆಗೆ ಖುದ್ದು ಟೀಮ್ ಇಂಡಿಯಾ ಕೋಚ್ ಗೌತಮ್ ಗಂಭೀರ್ ಉತ್ತರಿಸಿದ್ದಾರೆ. ರೋಹಿತ್ ಶರ್ಮಾ ಅವರು ಮೊದಲ ಪಂದ್ಯಕ್ಕೆ ಅಲಭ್ಯರಾದರೆ ಭಾರತ ತಂಡದ ನಾಯಕರಾಗಿ ಜಸ್‌ಪ್ರೀತ್ ಬುಮ್ರಾ ಕಾಣಿಸಿಕೊಳ್ಳಲಿದ್ದಾರೆ ಎಂದು ಗಂಭೀರ್ ತಿಳಿಸಿದ್ದಾರೆ. ಅದರಂತೆ ರೋಹಿತ್ ಅಲಭ್ಯರಾದರೆ, ಟೀಮ್ ಇಂಡಿ ಯಾವನ್ನು ಬುಮ್ರಾ ಮುನ್ನಡೆಸುವುದು ಖಚಿತವಾಗಿದೆ.

ಭಾರತ ಮತ್ತು ಆಸ್ಟ್ರೇಲಿಯಾ ನಡುವಣ 5 ಪಂದ್ಯಗಳ ಟೆಸ್ಟ್ ಸರಣಿಯು ನವೆಂಬರ್ 22 ರಿಂದ ಶುರುವಾಗಲಿದೆ. ಈ ಸರಣಿ ಮೊದಲ ಪಂದ್ಯ ಪರ್ತ್‌ನಲ್ಲಿ ನಡೆದರೆ, ಡಿಸೆಂಬರ್ 6 ರಿಂದ ಶುರುವಾಗಲಿರುವ 2ನೇ ಪಂದ್ಯ ಅಡಿಲೇಡ್ ನಲ್ಲಿ ನಡೆಯಲಿದೆ. ಹಾಗೆಯೇ 3ನೇ ಪಂದ್ಯ ಡಿಸೆಂಬರ್ 14 ರಿಂದ ಬ್ರಿಸ್ಬೇನ್ ನಲ್ಲಿ ಜರುಗಲಿದೆ. ಡಿಸೆಂಬರ್ 26 ರಿಂದ ಮೆಲ್ಬೋರ್ನ್‌ನಲ್ಲಿ ಬಾಕ್ಸಿಂಗ್ ಡೇ ಟೆಸ್ಟ್ ನಡೆಯಲಿದ್ದು, ಸಿಡ್ನಿಯಲ್ಲಿ ಜರುಗಲಿರುವ ಕೊನೆಯ ಟೆಸ್ಟ್ ಪಂದ್ಯ ಜನವರಿ 3 ರಿಂದ ಆರಂಭವಾಗಲಿದೆ. ಈ ಸರಣಿಗಾಗಿ ಭಾರತ ಟೆಸ್ಟ್ ತಂಡ ಈ ಕೆಳಗಿನಂತಿದೆ...

**ಭಾರತ ಟೆಸ್ಟ್ ತಂಡ**

ರೋಹಿತ್ ಶರ್ಮಾ (ನಾಯಕ), ಜಸ್‌ಪ್ರೀತ್ ಬುಮ್ರಾ (ಉಪನಾಯಕ), ಯಶಸ್ವಿ ಜೈಸ್ವಾಲ್, ಅಭಿಮನ್ಯು ಈಶ್ವರನ್, ಶುಭ್‌ಮನ್ ಗಿಲ್ , ವಿರಾಟ್ ಕೊಹ್ಲಿ, ಕೆಎಲ್ ರಾಹುಲ್, ರಿಷಭ್ ಪಂತ್ (ವಿಕೆಟ್ ಕೀಪರ್), ಸರ್ಫರಾಝ್ ಖಾನ್, ಧ್ರುವ್ ಜುರೆಲ್ (ವಿಕೆಟ್ ಕೀಪರ್), ರವಿಚಂದ್ರನ್ ಅಶ್ವಿನ್, ರವೀಂದ್ರ ಜಡೇಜಾ , ಮೊಹಮ್ಮದ್ ಸಿರಾಜ್ , ಆಕಾಶ್ ದೀಪ್, ಪ್ರಸಿದ್ಧ್ ಕೃಷ್ಣ, ಹರ್ಷಿತ್ ರಾಣ, ನಿತೀಶ್ ಕುಮಾರ್ ರೆಡ್ಡಿ, ವಾಷಿಂಗ್ಟನ್ ಸುಂದರ್.

# ಬಟ್ಲರ್ ಬ್ಯಾಟ್ ಪವರ್‌ಗೆ
## ಸ್ಟೇಡಿಯಂನಿಂದ ಹೊರಬಿದ್ದ ಚೆಂಡು..!



**ಟಿ20 ಸರಣಿಯಿಂದ ತಂಡಕ್ಕೆ ವಾಪಸಾಗಿರುವ ಬಟ್ಲರ್**

ಇಂಗ್ಲೆಂಡ್ ತಂಡವು ವೆಸ್ಟ್ ಇಂಡೀಸ್ ವಿರುದ್ಧದ ಐದು ಪಂದ್ಯಗಳ ಟಿ20 ಸರಣಿಯಲ್ಲಿ 2-0 ಮುನ್ನಡೆ ಸಾಧಿಸಿದೆ. ಜೋಸ್ ಬಟ್ಲರ್ ಅವರ ಅದ್ಭುತ 83 ರನ್‌ಗಳ ಇನಿಂಗ್ಸ್‌ನಲ್ಲಿ ಒಂದು 115 ಮೀಟರ್ ಉದ್ದದ ಸಿಕ್ಸರ್ ಸಹ ಸೇರಿದೆ. ಇಂಗ್ಲೆಂಡ್ ತಂಡವು ವೆಸ್ಟ್ ಇಂಡೀಸ್ ನೀಡಿದ 158 ರನ್‌ಗಳ ಗುರಿಯನ್ನು ಸುಲಭವಾಗಿ ಬೆನ್ನಟ್ಟಿತು. ಬಟ್ಲರ್ ಅವರ ಸ್ಫೋಟಕ ಬ್ಯಾಟಿಂಗ್ ಇಂಗ್ಲೆಂಡ್‌ನ ಗೆಲುವಿನಲ್ಲಿ ಪ್ರಮುಖ ಪಾತ್ರ ವಹಿಸಿತು.

ಪ್ರಸ್ತುತ ಐದು ಪಂದ್ಯಗಳ ಟಿ20 ಸರಣಿಗಾಗಿ ಇಂಗ್ಲೆಂಡ್ ತಂಡ ವೆಸ್ಟ್ ಇಂಡೀಸ್ ಪ್ರವಾಸ ಮಾಡಿದೆ.

ಈಗಾಗಲೇ ಉಭಯ ತಂಡಗಳ ನಡುವೆ ಎರಡು ಪಂದ್ಯಗಳು ನಡೆದಿದ್ದು, ಆಡಿರುವ ಎರಡೂ ಪಂದ್ಯಗಳನ್ನು ಇಂಗ್ಲೆಂಡ್ ತಂಡ ಗೆದ್ದುಕೊಂಡಿದೆ. ಬಾರ್ಬಡೋಸ್‌ನಲ್ಲಿ ಇಂದು ನಡೆದ ಎರಡನೇ ಪಂದ್ಯವನ್ನು 7 ವಿಕೆಟ್‌ಗಳಿಂದ ಗೆದ್ದುಕೊಳ್ಳುವಲ್ಲಿ ಆಂಗ್ಲ ಪಡೆ ಯಶಸ್ವಿಯಾಗಿದೆ. ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ವಿಂಡೀಸ್ ತಂಡ ಕೇವಲ 158 ರನ್ ಕಲೆಹಾಕಿತು. ಈ ಗುರಿ ಬೆನ್ನಟ್ಟಿದ ಇಂಗ್ಲೆಂಡ್ ತಂಡ ಬಟ್ಲರ್ ಅವರ ಸ್ಫೋಟಕ ಬ್ಯಾಟಿಂಗ್‌ನಿಂದಾಗಿ ಸುಲಭ ಜಯ ದಾಖಲಿಸಿತು. ಈ ವೇಳೆ ಬಟ್ಲರ್ ತಮ್ಮ ತೋಳ್ಬಲದ ಸಹಾಯದಿಂದ ಚೆಂಡನ್ನು ಕ್ರೀಡಾಂಗಣದಿಂದ ಹೊರಹಾಕುವಲ್ಲಿಯೂ ಯಶಸ್ವಿಯಾದರು.

# ಶತಕದಿಂದ ಶೂನ್ಯ; 48 ಗಂಟೆಗಳೊಳಗೆ ಸಂಜು ಸಾಲ್ಟ್



ಪ್ರಸ್ತುತ ವಿಶ್ವದ ನಾಲ್ಕು ಬಲಿಷ್ಠ ತಂಡಗಳ ನಡುವೆ ಟಿ20 ಸರಣಿ ನಡೆಯುತ್ತಿದೆ. ಒಂದೆಡೆ ಭಾರತ ಹಾಗೂ ದಕ್ಷಿಣ ಆಫ್ರಿಕಾ ತಂಡಗಳ ನಡುವೆ 4 ಪಂದ್ಯಗಳ ಟಿ20 ಸರಣಿ ನಡೆಯುತ್ತಿದ್ದರೆ, ಇನ್ನೊಂದೆಡೆ ಇಂಗ್ಲೆಂಡ್ ಹಾಗೂ ವೆಸ್ಟ್‌ಇಂಡೀಸ್ ನಡುವೆ ಐದು ಪಂದ್ಯಗಳ ಟಿ20 ಸರಣಿ ನಡೆಯುತ್ತಿದೆ. ಈ ನಾಲ್ಕು ತಂಡಗಳ ನಡುವೆ ನಡೆದ ಮೊದಲ ಪಂದ್ಯದಲ್ಲಿ ಆತಿಥೇಯ ಆಫ್ರಿಕಾ ತಂಡವನ್ನು ಭಾರತ ಮಣಿಸಿದ್ದರೆ, ಇತ್ತ ವೆಸ್ಟ್‌ಇಂಡೀಸ್ ತಂಡವನ್ನು ಇಂಗ್ಲೆಂಡ್ ಸೋಲಿಸಿತ್ತು. ಈ ಎರಡೂ ತಂಡಗಳ ಗೆಲುವಿನಲ್ಲಿ ಇಬ್ಬರು ಆಟಗಾರರ ಶತಕದ ಇನ್ನಿಂಗ್ಸ್ ಪ್ರಮುಖ ಪಾತ್ರವಹಿಸಿತ್ತು. ಒಂದೆಡೆ ಭಾರತದ ಪರ ಸಂಜು ಸ್ಯಾಮ್ಸನ್ ಸ್ಫೋಟಕ ಶತಕ ಸಿಡಿಸಿದ್ದರೆ, ಇನ್ನೊಂದೆಡೆ ಇಂಗ್ಲೆಂಡ್ ಪರ ಫಿಲ್ ಸಾಲ್ಟ್ ಕೂಡ ದಾಖಲೆಯ ಶತಕ ಬಾರಿಸಿದ್ದರು. ಈ ಇಬ್ಬರ ಶತಕದ ನೆರವಿನಿಂದ ಎರಡೂ ತಂಡಗಳು ಗೆಲುವು ಸಾಧಿಸಿದ್ದವು.

**ಸಂಜು- ಸಾಲ್ಟ್ ಶತಕದಿಂದ ಶೂನ್ಯ ಸಾಧನೆ**

ಕಾಕತಾಳೀಯ ಸಂಗತಿಯೆಂದರೆ, ಮೊದಲ ಪಂದ್ಯದಲ್ಲಿ ಸ್ಫೋಟಕ ಶತಕ ಸಿಡಿಸಿದ್ದ ಈ ಇಬ್ಬರು ಆಟಗಾರರು ಎರಡನೇ ಪಂದ್ಯದಲ್ಲಿ ಶೂನ್ಯಕ್ಕೆ ಔಟಾಗಿದ್ದಾರೆ. ನಿನ್ನೆ ನಡೆದ ದಕ್ಷಿಣ ಆಫ್ರಿಕಾ ವಿರುದ್ಧದ ಎರಡನೇ ಟಿ20 ಪಂದ್ಯದಲ್ಲಿ ಸಂಜು ಸ್ಯಾಮ್ಸನ್ ಮೂರು ಎಸೆತಗಳನ್ನು ಎದುರಿಸಿ ಶೂನ್ಯಕ್ಕೆ ವಿಕೆಟ್ ಒಪ್ಪಿಸಿದ್ದರೆ, ಇಂದು ನಡೆದ ವೆಸ್ಟ್‌ಇಂಡೀಸ್ ವಿರುದ್ಧದ ಎರಡನೇ ಟಿ20 ಪಂದ್ಯದಲ್ಲಿ ಇಂಗ್ಲೆಂಡ್‌ನ ಫಿಲ್ ಸಾಲ್ಟ್, ಮೊದಲ ಎಸೆತದಲ್ಲೇ ಕ್ಯಾಚಿತ್ತು ಶೂನ್ಯಕ್ಕೆ ಪೆವಿಲಿಯನ್ ಸೇರಿಕೊಂಡರು. ಸಾಲ್ಟ್ ಅವರ ಶೂನ್ಯ ಸಾಧನೆಯ ಹೊರತಾಗಿಯೂ ಇಂಗ್ಲೆಂಡ್ ತಂಡ, ವಿಂಡೀಸ್ ವಿರುದ್ಧ ಸತತ ಎರಡನೇ ಗೆಲುವು ದಾಖಲಿಸಿದರೆ, ಭಾರತ ಮಾತ್ರ ಆಫ್ರಿಕಾ ವಿರುದ್ಧ 2ನೇ ಪಂದ್ಯವನ್ನು ಕಳೆದುಕೊಂಡಿದೆ.

**ಆರಂಭಿಕನಾಗಿ 107 ರನ್ ಚಚ್ಚಿದ್ದ ಸಂಜು**

ಕೇವಲ 48 ಗಂಟೆಗಳ ಅಂತರದಲ್ಲಿ ಈ ಇಬ್ಬರು ಬ್ಯಾಟ್ಸ್‌ಮನ್‌ಗಳು ತಮಗೆ ಸಿಕ್ಕಿದ್ದ ಸೂಪರ್ ಸ್ಟಾರ್ ಪಟ್ಟವನ್ನು ಕಳೆದುಕೊಳ್ಳಬೇಕಾಯಿತು. ಮೊದಲ ಟಿ20 ಪಂದ್ಯದಲ್ಲಿ ಭಾರತದ ಪರ ಸ್ಫೋಟಕ ಶತಕ ಸಿಡಿಸಿದ್ದ ಸಂಜು ಸ್ಯಾಮ್ಸನ್ ಆರಂಭಿಕರಾಗಿ ಕಣಕ್ಕಿಳಿದು 50 ಎಸೆತಗಳಲ್ಲಿ 107 ರನ್‌ಗಳ ಅದ್ಭುತ ಇನ್ನಿಂಗ್ಸ್ ಆಡಿದರು. ಇದರಲ್ಲಿ 7 ಬೌಂಡರಿ ಹಾಗೂ 10 ಭರ್ಜರಿ ಸಿಕ್ಸರ್‌ಗಳು ಸೇರಿದ್ದವು. ಈ ಮೂಲಕ ಸಂಜು ಅಂತಾರಾಷ್ಟ್ರೀಯ ಟಿ20 ಪಂದ್ಯದಲ್ಲಿ ಸತತ ಎರಡು ಶತಕಗಳನ್ನು ಬಾರಿಸಿದ ಭಾರತದ ಮೊದಲ ಆಟಗಾರ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದರು.

ಇತ್ತ ವೆಸ್ಟ್ ಇಂಡೀಸ್ ವಿರುದ್ಧದ ಮೊದಲ ಟಿ20 ಪಂದ್ಯದಲ್ಲಿ ಆರಂಭಿಕರಾಗಿ ಕಣಕ್ಕಿಳಿದಿದ್ದ ಫಿಲ್ ಸಾಲ್ಟ್, ತಮ್ಮ ಇನ್ನಿಂಗ್ಸ್‌ನಲ್ಲಿ 54 ಎಸೆತಗಳನ್ನು ಎದುರಿಸಿ 6 ಭರ್ಜರಿ ಸಿಕ್ಸ್ ಹಾಗೂ 9 ಬೌಂಡರಿಗಳ ಸಹಾಯದಿಂದ ಅಜೇಯ 103 ರನ್ ಚಚ್ಚಿದರು. ಈ ಮೂಲಕ ಸಾಲ್ಟ್ ಒಂದೇ ತಂಡದ ವಿರುದ್ಧ ಮೂರು ಟಿ20 ಶತಕಗಳನ್ನು ಸಿಡಿಸಿದ ಏಕೈಕ ಬ್ಯಾಟ್ಸ್‌ಮನ್ ಎಂಬ ದಾಖಲೆಯನ್ನು ಬರೆದಿದ್ದರು.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news

ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966